ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 114 RNI Number : KNKAN/25/A2770 03-05-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :114 ರಾಯಚೂರು 03-05-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಮೆಗಾ ಕೃಷಿ 'ಮಾರುಕಟ್ಟೆ' ಸ್ಥಾಪನೆಗೆ ಸುಪ್ರೀಂಕೋರ್ಟ್ ಅಸ್ತು

ಬೆಂಗಳೂರು,ಮೇ.02-

ಬೆಂಗಳೂರಿನಲ್ಲಿ ಮೆಗಾ ಕೃಷಿ ಮಾರುಕಟ್ಟೆ ಸ್ಥಾಪನೆಗೆ ಸುಪ್ರೀಂ ಕೋರ್ಟ್ ಅಸ್ತು ನೀಡಿರುವ ಬಗ್ಗೆ ಸಕ್ಕರೆ, ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹರ್ಷ ವ್ಯಕ್ತಪಡಿಸಿದರು.

ಈ ಕುರಿತು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಾನೂನು ಪ್ರಕ್ರಿಯೆಯಲ್ಲಿ ಎಪಿಎಂಸಿಗೆ ಜಯ ಸಿಕ್ಕಿದೆ. ಪ್ರಕರಣ 1994ರಿಂದ ಕೆಲವು ನ್ಯಾಯಾಲಯದಲ್ಲಿದ್ದವು. ಹೈಕೋರ್ಟ್, ಸುಪ್ರೀಂನಲ್ಲಿ ಕೇಸ್‌ಗಳಿದ್ದವು. ಎರಡು ವರ್ಷದಲ್ಲಿ ಎರಡು ಮಹತ್ತರ ಕೇಸ್ ಗೆದ್ದಿದ್ದೇವೆ. ಹುಲಿಮಂಗಲದಲ್ಲಿ 42 ಎಕರೆ ಸ್ವಾಧೀನಕ್ಕೆ ಅರ್ಜಿ ಹಾಕಿದ್ದೆವು. ಆ ಭೂಮಿಯನ್ನು ಪಡೆಯಲು ಹರಸಾಹಸ ಪಡಬೇಕಾಯಿತು. ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಹಾಕಿ ನಾವು ಗೆದ್ದಿದ್ದೇವೆ ಎಂದರು.

211 ಕೋಟಿ ಹಣವನ್ನು ನೀಡಿದ್ದೇವೆ. ಫ್ರೂಟ್ಸ್, ವೆಜಿಟೇಬಲ್ ಮಾರ್ಕೆಟ್ ಮಾಡಿದ್ದೇವೆ. ಮಾಗಡಿ ರಸ್ತೆಯಲ್ಲಿ 270 ಎಕರೆ ಭೂಮಿ ವಿವಾದ ಇತ್ತು. ಶ್ರೀಗಂಧ ಕಾವಲ್‌ನಲ್ಲಿ ಭೂ ಸ್ವಾಧೀನ ವಿವಾದ ಇತ್ತು. ಸುಪ್ರೀಂ ಕೋರ್ಟ್‌ನಲ್ಲಿ ಕೇಸ್ ನಮ್ಮ ಪರ ಬಂದಿದೆ. 485 ಕೋಟಿ ಹಣವನ್ನು ನೀಡಿದ್ದೇವೆ. ಆ ಭೂಮಿಯನ್ನು ನಾವು ವಶಕ್ಕೆ ಪಡೆದಿದ್ದೇವೆ. ಮೆಗಾ ಮಾಲ್ ಮಾಡುವ ಉದ್ದೇಶವಿತ್ತು. ಆದರೆ, ವ್ಯಾಜ್ಯದಿಂದಾಗಿ ಇಲ್ಲಿವರೆಗೆ ಎಳೆಯಿತು. 1994 ರಿಂದ ಕೇಸ್ ವ್ಯಾಜ್ಯ ನಡೆದಿತ್ತು ಎಂದು ಸಚಿವರು ತಿಳಿಸಿದರು.

ಕಾರಟಗಿಯಲ್ಲಿ 136 ಎಕರೆ ಸ್ವಾಧೀನ ಮಾಡಿದ್ದೇವೆ. ಇದು ಕೂಡ ಕುಂಟುತ್ತಾ ಸಾಗಿತ್ತು. ಇದೀಗ 12 ಕೋಟಿ ಪರಿಹಾರವನ್ನ ನೀಡಲಾಗಿದೆ. ಭೂಮಿಯನ್ನು ನಾವು ವಶಕ್ಕೆ ತೆಗೆದುಕೊಂಡಿದ್ದೇವೆ. ಮೂರು ಪ್ರತಿಷ್ಠಿತ ಕೇಸ್ ಗೆದ್ದಂತಾಗಿದೆ. ಬೆಂಗಳೂರಿನಲ್ಲೇ 300 ಎಕರೆ ಪ್ರೈಮ್ ಲ್ಯಾಂಡ್ ಪಡೆದಿದ್ದೇವೆ. ಯಶವಂತಪುರ ಮಾರ್ಕೆಟ್ ಶಿಫ್ಟ್ ಆಗುತ್ತಿದೆ. ಈರುಳ್ಳಿ, ಬೆಳ್ಳುಳ್ಳಿ ಮಾರ್ಕೆಟ್ ಶಿಫ್ಟ್ ಮಾಡಿದ್ದೇವೆ. ಸಾರಿಗೆ ಇಲಾಖೆ ಭೂಮಿಯನ್ನು ಪಡೆದಿದ್ದೇವೆ. ದಾಸನಪುರದ ಬಳಿಯ ಭೂಮಿ ಪಡೆದಿದ್ದೇವೆ. ಆ ಪ್ರಾಪರ್ಟಿ ಮಾರ್ಕೆಟ್‌ಗೆ ಬಳಸಿಕೊಳ್ಳುತ್ತಿದ್ದೇವೆ. ಸಣ್ಣ ಪುಟ್ಟ ಲಿಟಿಗೇಶನ್ ಇನ್ನೂ ಇವೆ. ಅವುಗಳು ನ್ಯಾಯಾಲಯದ ವಿವಿಧ ಹಂತಗಳಲ್ಲಿವೆ. ಆದರೆ, ಮೇಜರ್ ಈ ಮೂರು ಕೇಸ್‌ಗಳಲ್ಲಿ ನಮ್ಮ ಪರವಾಗಿ ತೀರ್ಪು ಬಂದಿದೆ ಎಂದು ಸಚಿವರು ವಿವರಿಸಿದರು.

ಮೆಗಾ ಕೃಷಿ ಮಾರುಕಟ್ಟೆಗಿದ್ದ ಕಾನೂನು ತೊಡಕೇನು? ರೈತರು, ವ್ಯಾಪಾರಿಗಳು ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಬೆಂಗಳೂರಿನಲ್ಲಿ ಬೃಹತ್ ಪ್ರಮಾಣದ 'ಮೆಗಾ ಕೃಷಿ ಮಾರುಕಟ್ಟೆ' ಸ್ಥಾಪಿಸುವ ಸರ್ಕಾರದ ಯೋಜನೆಗೆ ಇದ್ದ ಕಾನೂನು ಅಡೆತಡೆಗಳು ನಿವಾರಣೆಯಾಗಿದೆ. ಬೆಂಗಳೂರು ಉತ್ತರ ತಾಲೂಕಿನ ಮಾಗಡಿ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಶ್ರೀಗಂಧ ಕಾವಲ್ ಮತ್ತು ಹೇರೋಹಳ್ಳಿ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳ ಸುಮಾರು 272.33 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆಯು ಕ್ರಮಬದ್ಧವಾಗಿದೆ ಎಂದು ಸರ್ವೋಚ್ಚ ನ್ಯಾಯಾಲಯ ತೀರ್ಪು ನೀಡಿದೆ.

ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಮೆಗಾ ಮಾರುಕಟ್ಟೆ ಸ್ಥಾಪನೆಗಾಗಿ ಶ್ರೀಗಂಧ ಕಾವಲ್ ಗ್ರಾಮದ 172 ಎಕರೆ 22 ಗುಂಟೆ ಹಾಗೂ ಹೇರೋಹಳ್ಳಿ ಗ್ರಾಮದ 100 ಎಕರೆ 11 ಗುಂಟೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿತ್ತು. ಇದನ್ನು ಪ್ರಶ್ನಿಸಿ ಜಮ್ನಾಲಾಲ್ ಬಜಾಜ್ ಸೇವಾ ಟ್ರಸ್ಟ್ ನ್ಯಾಯಾಲಯದ ಮೆಟ್ಟಿಲೇರಿತ್ತು. ಈ ಹಿಂದೆ ರಾಜ್ಯ ಉಚ್ಚ ನ್ಯಾಯಾಲಯವು 2014 ರಿಂದ 2019ರವರೆಗೆ ಭೂಸ್ವಾಧೀನ ಪ್ರಕ್ರಿಯೆ 'ಲ್ಯಾಪ್ಸ್' ಆಗಿದೆ ಎಂದು ತೀರ್ಪು ನೀಡಿತ್ತು. ಸಮಿತಿಯು ಸಲ್ಲಿಸಿದ್ದ ಮೇಲ್ಮನವಿ ಹಾಗೂ ಪುನರ್ ಪರಿಶೀಲನಾ ಅರ್ಜಿಗಳು ವಜಾಗೊಂಡಿದ್ದವು.

2022 ರಿಂದ 2025 ರವರೆಗೆ ಸಮಿತಿಯು ಸುಪ್ರೀಂ ಕೋರ್ಟ್‌ನಲ್ಲಿ ಎಸ್‌ಎಲ್‌ಪಿ ದಾಖಲಿಸಿದ ನಂತರ, ಪ್ರಕರಣವನ್ನು ಹೊಸದಾಗಿ ವಿಚಾರಣೆ ನಡೆಸಲು ಹೈಕೋರ್ಟ್‌ಗೆ ಸೂಚಿಸಲಾಯಿತು. 2025ರ ಫೆಬ್ರವರಿಯಲ್ಲಿ ಹೈಕೋರ್ಟ್‌ನ ಏಕ ಸದಸ್ಯ ಪೀಠವು ಭೂಸ್ವಾಧೀನ ಕ್ರಮಬದ್ಧವಾಗಿದೆ ಎಂದು ತೀರ್ಪು ನೀಡಿತು.

ಈ ತೀರ್ಪನ್ನು ಪ್ರಶ್ನಿಸಿ ಭೂಮಾಲೀಕರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಬಿ. ವಿ. ನಾಗರತ್ನ ಹಾಗೂ ಉಜ್ವಲ್ ಭುಯಾನ್ ಅವರಿದ್ದ ಪೀಠವು, ಏಪ್ರಿಲ್ 27, 2026 ರಂದು ಹೈಕೋರ್ಟ್ ಆದೇಶವನ್ನು ಎತ್ತಿಹಿಡಿದು ಅರ್ಜಿಯನ್ನು ವಜಾಗೊಳಿಸಿತು. ಈ ತೀರ್ಪಿನೊಂದಿಗೆ ರೈತರು, ಕಾರ್ಮಿಕರು ಮತ್ತು ಗ್ರಾಹಕರಿಗೆ ಆಧುನಿಕ ಸೌಲಭ್ಯಗಳನ್ನು ಒದಗಿಸುವ ಮೆಗಾ ಮಾರುಕಟ್ಟೆ ನಿರ್ಮಾಣಕ್ಕೆ ಇದ್ದ ದೊಡ್ಡ ವಿಘ್ನ ದೂರವಾದಂತಾಗಿದೆ.

ಸೊಳ್ಳೆ ಪರದೆ ಕಡ್ಡಾಯವಾಗಿ ಬಳಸಿ, ಮಲೇರಿಯಾ ರೋಗ ಹರಡದಂತೆ ನೋಡಿಕೊಳ್ಳಿ: ಡಾ.ಸುರೇಂದ್ರ ಬಾಬು



ರಾಯಚೂರು,ಮೇ.02-

ಸೋಂಕಿಗೆ ಒಳಪಡುವ ಅನಾಫಿಲಿಸ್ ಹೆಣ್ಣು ಸೊಳ್ಳೆಯಿಂದ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಮಲಗುವಾಗ ಸೊಳ್ಳೆ ಪರದೆಗಳನ್ನು ಕಡ್ಡಾಯವಾಗಿ ಬಳಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಶ ಬಾಬು ಅವರು ಹೇಳಿದರು.

ಮೇ.02ರ ಶನಿವಾರ ದಂದು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಈಚನಾಳ ಪ್ರಾಥಮಿಕ ಅರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು ಇವರ ಆಶ್ರಯದಲ್ಲಿ ಜಿಲ್ಲಾ ಮಟ್ಟದ ವಿಶ್ವ ಮಲೇರಿಯಾ ದಿನಾಚರಣೆ ಚಾಲನೆ ನೀಡಿ ಅವರು ಮಾತನಾಡಿದರು.

ಮಲೇರಿಯಾ ರೋಗಕ್ಕೆ ತುತ್ತಾದ ವ್ಯಕ್ತಿಗೆ ಕಚ್ಚುವ ಸೊಳ್ಳೆಗಳು, ಆರೋಗ್ಯವಂತ ಮನುಷ್ಯನಿಗೆ ಕಚ್ಚಿದಾಗ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಜ್ವರ ಬಂದಾಗ ತಕ್ಷಣ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು. ನೀರು ಸಂಗ್ರಹ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಬೇಕು. ಯಾವುದೇ ರೋಗವನ್ನು ನಿಯಂತ್ರಣಕ್ಕೆ ತರಲು ಸಾರ್ವಜನಿಕರ ಸಹಕಾರ ಅಗತ್ಯವಾಗಿರುತ್ತದೆ. ಸಾರ್ವಜನಿಕರ ಸಹಕಾರವಿಲ್ಲದೇ ಯಾವುದೇ ಕಾರ್ಯಗಳು ಪರಿಪೂರ್ಣವಾಗುವುದಿಲ್ಲ ಎಂದರು.

ಅನಾಫೀಲಿಸ್ ಹೆಣ್ಣು ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಮಲೇರಿಯಾವನ್ನು ಜಿಲ್ಲೆಯಲ್ಲಿ ಕಳೆದ ಒಂದು ದಶಕದಲ್ಲಿ ಸೂಕ್ತ ಚಿಕಿತ್ಸೆ , ನಿಗಾವಣೆ, ಪರಿಣಾಮಕಾರಿಯಾಗಿ ಕೀಟನಾಶಕ ಸಿಂಪರಣೆಯಿದ ಗಣನೀಯವಾಗಿ ಕಡಿಮೆ

3 ನೇ ಪುಟಕ್ಕೆ...



ನರೇಗಾ ಕೆಲಸದಲ್ಲಿ ಕೃಷಿ ಕೂಲಿಕಾರರಿಂದ ವಿಶ್ವ ಕಾರ್ಮಿಕರ ದಿನ ಆಚರಣೆ

ಜಾಲಹಳ್ಳಿ,ಮೇ.02-

ಇಲ್ಲಿಗೆ ಹತ್ತಿರವಿರುವ ಬಾಗೂರ ಗ್ರಾಮದ ಹೊರ ವಲಯದಲ್ಲಿ ನಡೆದ ಕೂಲಿಕಾರರ ಕೆಲಸದ ಸ್ಥಳದಲ್ಲಿ ಕೃಷಿ ಮತ್ತು ಗ್ರಾಮೀಣ ಕಾರ್ಮಿಕ ಸಂಘಟನೆಯಿಂದ ವಿಶ್ವ ಕಾರ್ಮಿಕರ ದಿನ ಆಚರಣೆ ಮಾಡಲಾಯಿತು.

ಹಿರಿಯ ಕೂಲಿಕಾರರಿಂದ ಕೇಕ್ ಕತ್ತರಿಸಿ ಒಬ್ಬರಿಗೊಬ್ಬರು ಸಿಹಿ ತಿನಿಸಿ ಸಂಭ್ರಮಿಸಿದರು.ನಂತರ ಕೃಷಿ ಕೂಲಿಕಾರರ ಸಂಘಟನೆ ಜಿಲ್ಲಾ ಕಾರ್ಯದರ್ಶಿ ಸಂಗಮೇಶ ಮೂಲಿಮನಿ ಮಾತನಾಡಿ ಈ ದೇಶದ ಬೆಳವಣಿಗೆಯಲ್ಲಿ ಕಾರ್ಮಿಕ ವರ್ಗದ ಶ್ರಮ ಬಹುದೊಡ್ಡ ಕೊಡುಗೆ ಇದೆ.ಕಾರ್ಮಿಕರನ್ನು ಗೌರವದಿಂದ ದುಡಿಸಿಕೊಳ್ಳಬೇಕು, ದುಡಿಮೆಗೆ ತಕ್ಕ ಕೂಲಿ ನೀಡಬೇಕು, ಕೆಲಸದ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು, ದೌರ್ಜನ್ಯ ದಬ್ಬಾಳಿಕೆ ವಿರುದ್ಧ ಕಾರ್ಮಿಕರು ಒಗ್ಗೂಡಬೇಕು.

3 ನೇ ಪುಟಕ್ಕೆ...

ಗ್ಯಾಸ್ ಬೆಲೆ ಏರಿಕೆ: ಕೇಂದ್ರ ಸರಕಾರದ ವಿರುದ್ಧ ಡಾ.ರಝಾಕ ಉಸ್ತಾದ ಖಂಡನೆ



ರಾಯಚೂರು,ಮೇ.02-

ಕೇಂದ್ರದ ಬಿಜೆಪಿ ಸರಕಾರ ಪಂಚ ರಾಜ್ಯಗಳ ಚುನಾವಣೆ ಮುಗಿದ ತಕ್ಷಣ ವಾಣಿಜ್ಯ ಗ್ಯಾಸ್ ಸಿಲೆಂಡರ್ ಗಳ ಬೆಲೆ ಒಮ್ಮೆಲೆ 993 ರೂ ಹೆಚ್ಚಳ ಮಾಡಿದ್ದು ಜನರ ಲೂಟಿಗೆ ಸಮವಾಗಿದೆ, ಕೇಂದ್ರದ ಸಚಿವರು ಒಂದು ಕಡೆ ಗ್ಯಾಸ್ ಸಿಲೆಂಡರ್ ಗಳ ಕೊರತೆಯಿಲ್ಲ ಎಂದು ಹೇಳುತ್ತಾರೆ, ಇನ್ನೊಂದು ಕಡೆ ಕಳೆದ ಎರಡು ತಿಂಗಳಿಂದ ಜನರಿಗೆ ಗ್ಯಾಸ್ ಸಿಲೆಂಡರ್ ಸಿಗದೇ ಪರದಾಡುವಂತಹ ಸ್ಥಿತಿ ದೇಶದಲ್ಲಿದೆ, ಇಂತಹ ಸಂದರ್ಭದಲ್ಲಿ 19ಕೆಜಿ ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 993 ರೂ ವರೆಗೆ ಹೆಚ್ಚಿಸಿರುವದು ಜನರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಅಲ್ಲದೇ 5ಕೆಜಿ ಯ ಸಣ್ಣ ಸಿಲೆಂಡರ್ ಬೆಲೆ ಕೂಡ 261 ರೂ ಹೆಚ್ಚಿಸಲಾಗಿದೆ, ಇದು ನಗರ ಪ್ರದೇಶದಲ್ಲಿ ವಾಸಿಸುವ ಸಣ್ಣ ಕುಟುಂಬಗಳ ಬದುಕಿಗೆ ಬೆಂಕಿ ಹಾಕಿದಂತಾಗಿದೆ.

2026ರ ಫೆಬ್ರವರಿ ಮೊದಲ ವಾರದಲ್ಲಿ ಮನೆ ಬಳಕೆ ಗ್ಯಾಸ್ ಸಿಲೆಂಡರ್ 60ರೂ ಹೆಚ್ಚಿಸಲಾಗಿತ್ತು ಮತ್ತು ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 49 ರೂ, ಮಾರ್ಚ 2026ಕ್ಕೆ 114.5 ರೂ, ಎಪ್ರಿಲ್ 2026ಕ್ಕೆ 195.5 ರೂ ಹಾಗೂ ಈಗ 993 ರೂ ಹೆಚ್ಚಳ ಮಾಡಲಾಗಿದೆ, ಕಳೆದ ನಾಲ್ಕು ತಿಂಗಳಲ್ಲಿ ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 1352 ರೂ ಹೆಚ್ಚಳ ಮಾಡಲಾಗಿದೆ, ಈಗ ಅದರ ಬೆಲೆ 3071.50 ರೂ ಆಗಿದೆ, ಇದರಿಂದ ಹೊಟೆಲ್ ಮಾಲಿಕರಿಗೆ ಸಾಕಷ್ಟು ತೊಂದರೆಯಾಗುತ್ತದೆ, ಕಳೆದ ಮೂರು ತಿಂಗಳಿಂದ ಗ್ಯಾಸ್ ಸಿಗದೇ

3 ನೇ ಪುಟಕ್ಕೆ...



ಕಲಬೆರಕೆ ಸೇಂದಿ ಮಾರಾಟ: ಇಬ್ಬರು ಆರೋಪಿಗಳ ಬಂಧನ

ರಾಯಚೂರು,ಮೇ.02-

ತಾಲೂಕಿನ ಕೊರ್ತಕುಂದ ಗ್ರಾಮದಲ್ಲಿ ಕಲಬೆರಕೆ ಸೇಂದಿ ಮಾರಾಟ ಮಾಡುತ್ತಿದ್ದ ಆರೋಪದಲ್ಲಿ ಇಬ್ಬರನ್ನು ಯಾಪಲದಿನ್ನಿ ಪೊಲೀಸರು ಬಂಧಿಸಿದ್ದಾರೆ. ನೀಲವಮ್ಮ ಹಾಗೂ ವೆಂಕಟೇಶ್ ಬಂಧಿತ ಆರೋಪಿಗಳು. ಬಂದಿತ ಆರೋಪಿಗಳಿಂದ 67 ಲೀಟರ್ ಸೇಂದಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಕಲಬೆರಕೆ ಸೇಂದಿಯನ್ನು ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ ಪೊಲೀಸರು ದಾಳಿ ನಡೆಸಿ ಆರೋ ಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿ ಸಿದ್ದಾರೆ. ನ್ಯಾಯಾ ಲಯವು ಆರೋ ಪಿಗಳಿಗೆ ನ್ಯಾಯಾ ಂಗ ಬಂಧನ ವಿಧಿಸಿದೆ.

ಜನಿವಾರ ತೆಗೆಸಿದ ಕೃತ್ಯ 'ಪೆಹಲ್ಗಾಂ' ಮಾದರಿಯ ದಬ್ಬಾಳಿಕೆ: ಬ್ರಾಹ್ಮಣ ಮಹಾಸಭಾ ತೀವ್ರ ಖಂಡನೆ



ರಾಯಚೂರು,ಮೇ.02-

ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷಾ ಸಮಯದಲ್ಲಿ ಬೆಂಗಳೂರಿನ ಕೃಪಾನಿಧಿ ವಿದ್ಯಾಸಂಸ್ಥೆ ಹಾಗೂ ಚಿಕ್ಕಬಳ್ಳಾಪುರದ ನಾಗಾರ್ಜುನ ವಿದ್ಯಾಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಜನಿವಾರ ಹಾಗೂ ಧಾರ್ಮಿಕ ಆಚರಣೆಯ ಕುರುಹುಗಳನ್ನು ಬಲವಂತವಾಗಿ ತೆಗೆಸಿರುವುದು ಸಮಾಜಕ್ಕೆ ಮಾರಕವಾದ ಕೃತ್ಯ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಸಂಘಟನಾ ಕಾರ್ಯದರ್ಶಿಗಳಾದ ರಾಘವೇಂದ್ರ ಮಯ್ಯ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಘಟನೆಯನ್ನು ಕಾಶ್ಮೀರದ ಪೆಹಲ್ಗಾಂನಲ್ಲಿ ಜಾತಿ ಕೇಳಿ ಗುಂಡಿಕ್ಕಿದ ಘಟನೆಗೆ ಹೋಲಿಸಿದರು. ವಿದ್ಯಾಸಂಸ್ಥೆಗಳಲ್ಲಿ ಜನಿವಾರ, ಶಿವದಾರ, ಕಾಶಿದಾರ, ಮಾಂಗಲ್ಯ, ಕಿವಿ ಓಲೆ, ಕಾಲುಂಗರದಂತಹ ಹಿಂದೂ ಧರ್ಮದ ಅವಿಭಾಜ್ಯ ಅಂಗಗಳ ಮೇಲೆ ದಬ್ಬಾಳಿಕೆ ನಡೆಸಲಾಗುತ್ತಿದೆ. ಇದು ಲವ್ ಜಿಹಾದ್ ಹಾಗೂ ಕಾರ್ಪೊರೇಟ್ ಜಿಹಾದ್ ಮಾದರಿಯಲ್ಲೇ ನಡೆಯುತ್ತಿರುವ 'ವಿದ್ಯಾ ಜಿಹಾದ್' ಎಂಬ ಶಂಕೆ ಮೂಡುತ್ತಿದೆ, ಎಂದು ಆತಂಕ ವ್ಯಕ್ತಪಡಿಸಿದರು.

3 ನೇ ಪುಟಕ್ಕೆ...

ಮೇ 3ರಂದು ಬಸನಗೌಡ ಬಾದರ್ಲಿ ಫೌಂಡೇಶನ್ ನಿಂದ ಸರ್ವಧರ್ಮದ ಸಾಮೂಹಿಕ ವಿವಾಹ

ಡಿ ಸಿ ಎಂ. ಡಿ ಕೆ. ಶಿವಕುಮಾರ ಸೇರಿ ಹಲವಾರು ಸಚಿವರ ಆಗಮನದ ನಿರೀಕ್ಷೆ



ಸಿಂಧನೂರು,ಮೇ.02-

ವಿಧಾನಪರಿಷತ್ ಶಾಸಕ ಬಸನಗೌಡ ಬಾದರ್ಲಿ ಅವರ ನೇತೃತ್ವದಲ್ಲಿ. ಬಸನಗೌಡ ಫೌಂಡೇಶನ್ ವತಿಯಿಂದ. ಮೇ 3. ಭಾನುವಾರ ರಂದು. ನಗರದ ಕುಷ್ಟಗಿ ರಸ್ತೆಯಲ್ಲಿರುವ ತಾಲೂಕು ಕ್ರೀಡಾಂಗಣದಲ್ಲಿ 160ಕ್ಕೂ ಹೆಚ್ಚು ಉಚಿತ ಸಾಮೂಹಿಕ ವಿವಾಹ ಹಾಗೂ 5001 ಮಾತೆಯರಿಗೆ ಉಡಿ ತುಂಬುವ ಕಾರ್ಯಕ್ರಮಕ್ಕೆ. ಹಾಗೂ ಅವರ ಒಂದು ವರ್ಷದ ಸಾಧನೆಯ ಕೈಪಿಡಿ ಪುಸ್ತಕದ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿದ್ದು. ಮೊಟ್ಟ ಮೊದಲ ಬಾರಿಗೆ ಸಿಂಧೂ ನೀರಿನ ಕ್ರೀಡಾಂಗಣದಲ್ಲಿ ಬೆಂಗಳೂರು ಮಾದರಿಯಲ್ಲಿ ಬೃಹತ್ ಪೆಂಡಾಲು ಹಾಕಲಾಗಿದ್ದು ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಜನರು ಆಗಮಿಸುವ ನಿರೀಕ್ಷೆಯಿದ್ದು ಈ ಹಿನ್ನೆಲೆಯಲ್ಲಿ ಬೃಹತ್ ಪೆಂಡಾಲು ಹಾಕಲಾಗಿದ್ದು. ಮುಖ್ಯ ವೇದಿಕೆ ಪಕ್ಕದಲ್ಲಿ ಊಟದ ವ್ಯವಸ್ಥೆಗೆ ಪ್ರತ್ಯೇಕ ಪೆಂಡಾಲು ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ ಕ್ರೀಡಾಂಗಣ ಗೋಡೆಗೆ ಹೊಂದಿಕೊಂಡು ನಾಲ್ಕೈದು ಕಡೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ಜನ ದ ಟ್ಟಣೆ ನಿಯಂತ್ರಿಸಲು ಕ್ರೀಡಾಂಗಣದ ಹೊರ ಭಾಗದಲ್ಲಿ ಅಲ್ಲಲ್ಲಿ ವಾಹನಗಳ ನಿಲುಗಡೆಗೆ ಬಹಳಷ್ಟು ಸ್ಥಳಾವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮಕ್ಕೆ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ. ಡಿಕೆ ಶಿವಕುಮಾರ್ ಅವರು ಮಧ್ಯಾಹ್ನ 12 ಗಂಟೆಗೆ ಆಗಮಿಸುವ ನಿರೀಕ್ಷೆಯಿದ್ದು. ಮೂರು ಗಂಟೆಯವರೆಗೂ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆಯಾದ. ಶ್ರೀ ಲಕ್ಷ್ಮಿ ಹೆಬ್ಬಾಳ್ಕರ್ ಶಿವಾನಂದ್ ಪಾಟೀಲ್. ಆರ್ ಬಿ ತಿಮ್ಮಾಪುರ್ ಎಚ್ ಕೆ ಮುನಿಯಪ್ಪ. ಈಶ್ವರ್ ಖಂಡ್ರೆ. ಎನ್‌ಎಸ್ ಬೋಸರಾಜ್. ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಶರಣ ಪ್ರಕಾಶ್ ಪಾಟೀಲ್. ಶಿವರಾಜ್ ಎಸ್ ತಂಗಡಗಿ. ಮಧು ಬಂಗಾರಪ್ಪ. ಸತೀಶ್ ಜಾರಕಿಹೊಳಿ. ಸೇರಿದಂತೆ ಹಲವು ಸಚಿವರು ಸಂಸದರು ಶಾಸಕರು ಸೇರಿದಂತೆ ಗಣ್ಯರು ಈ ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ ಎಂದು ತಿಳಿದು ಬಂದಿದೆ. ಈ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ. 40 ರಿಂದ 50, ಸಾವಿರಕ್ಕೂ ಅಧಿಕ ಜನಸಂಖ್ಯೆಯಲ್ಲಿ ಜನರು ಆಗಮಿಸುವ ನಿರೀಕ್ಷೆ

3 ನೇ ಪುಟಕ್ಕೆ...

ಅಂಗನವಾಡಿ ಕೇಂದ್ರಗಳ ರಜೆ ವಿಸ್ತರಣೆಗೆ ಅಪರ ಜಿಲ್ಲಾಧಿಕಾರಿಗೆ ಮನವಿ



ರಾಯಚೂರು,ಮೇ.02-

ಜಿಲ್ಲೆಯಲ್ಲಿನ ತೀವ್ರ ಬಿಸಿಲಿನ ಹಿನ್ನೆಲೆ ಅಂಗನವಾಡಿ ಕೇಂದ್ರಗಳ ರಜೆಯನ್ನು ಮತ್ತಷ್ಟು 15 ದಿನ ವಿಸ್ತರಿಸುವಂತೆ ಬೃಹತ್ ಸಂಖ್ಯ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿ.ಐ.ಟಿ.ಯು.) ಜಿಲ್ಲಾ ಸಮಿತಿಯಿಂದ ಅಪಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ರಾಜ್ಯ ಸರ್ಕಾರದ ಆದೇಶದಂತೆ ಏಪ್ರಿಲ್ 16ರಿಂದ ಮೇ 1ರವರೆಗೆ ಅಂಗನವಾಡಿ ಕೇಂದ್ರಗಳಿಗೆ ರಜೆ ನೀಡಲಾಗಿದ್ದು, ಮೇ 2ರಿಂದ ಪುನರಾರಂಭಿಸಲು ಸೂಚಿಸಲಾಗಿದೆ. ಆದರೆ ರಾಯಚೂರು ಜಿಲ್ಲೆಯಲ್ಲಿ 42ರಿಂದ 44 ಡಿಗ್ರಿ ಸೆಲ್ಸಿಯಸ್

3 ನೇ ಪುಟಕ್ಕೆ...

ಬುದ್ಧನ ಶಾಂತಿ, ಅಹಿಂಸೆಯ ಸಂದೇಶಗಳು ಇಂದಿನ ಜಗತ್ತಿಗೆ ಅಗತ್ಯ : ಶಾಸಕ ಅಲ್ಲಮಪ್ರಭು ಪಾಟೀಲ್

ಕಲಬುರಗಿ,ಮೇ.02-

ವಿಶ್ವವ್ಯಾಪಿ ಬುದ್ಧನ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಇಂದಿನ ಸಂಘರ್ಷಮಯ ಜಗತ್ತಿಗೆ ಅತ್ಯಗತ್ಯವಾಗಿವೆ. ಬುದ್ಧನ ಜ್ಞಾನೋದಯದ ಕಿರಣಗಳು ಕೇವಲ ಒಂದು ಧರ್ಮಕ್ಕೆ ಸೀಮಿತವಾಗದೆ ಇಡೀ ಮಾನವಕುಲಕ್ಕೆ ಬೆಳಕಾಗಿವೆ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಹೇಳಿದರು. ನಗರದ ಜಗತ್ ವೃತ್ತದ ಬಳಿಯ ಲುಂಬಿನಿ ಉದ್ಯಾನವನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬುದ್ಧ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಶೋಷಿತರ ಪರ ಹೋರಾಟ ನಡೆಸುತ್ತಾ ಅಂತಿಮವಾಗಿ ಬುದ್ಧನ ವೈಜ್ಞಾನಿಕ ಮತ್ತು ಮಾನವೀಯ ತತ್ವಗಳಿಂದ ಪ್ರಭಾವಿತರಾದರು. 1956ರಲ್ಲಿ ಲಕ್ಷಾಂತರ ಅನುಯಾಯಿಗಳೊಂದಿಗೆ ಬೌದ್ಧ ಧರ್ಮ ಸ್ವೀಕರಿಸುವ ಮೂಲಕ ಸಮಾನತೆಯ ಹೊಸ ಯುಗ ಆರಂಭಿಸಿದರು ಎಂದು ಹೇಳಿದರು.

ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾಪರಿನಿರ್ವಾಣ ಈ ಮೂರು ಘಟನೆಗಳು ವೈಶಾಖ ಪೂರ್ಣಿಮೆಯಂದೇ ಸಂಭವಿಸಿರುವುದು ವಿಶ್ವ ಇತಿಹಾಸದ ಅಪರೂಪದ ಸಂಗತಿ. ಅಶೋಕ ಚಕ್ರವರ್ತಿಯ ಕಾಲದಿಂದ ಹರಡಿದ ಈ



ಧರ್ಮದ ಹಾದಿಯಲ್ಲಿ ಇಂದಿನ ಯುವ ಪೀಳಿಗೆ ಸಾಗಬೇಕು ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್ ಮಾತನಾಡಿ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಈ ಮೂವರ ಆಶಯ ಒಂದೇ ಆಗಿತ್ತು. ಶಾಂತಿ, ಕರುಣೆ ಮತ್ತು ಸತ್ಯದ ಮಾರ್ಗವನ್ನು ಬುದ್ಧ ತೋರಿಸಿದರೆ, ಸಂವಿಧಾನದ ಮೂಲಕ ಗೌರವಯುತ ಜೀವನವನ್ನು ಅಂಬೇಡ್ಕರ್ ಕಲಿಸಿಕೊಟ್ಟಿದ್ದಾರೆ ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಬಡಿಗೇರ ವಿಶೇಷ ಉಪನ್ಯಾಸ ನೀಡಿ, ಬಸವಣ್ಣನವರ ಅನುಭವ ಮಂಟಪಕ್ಕಿಂತಲೂ 2500 ವರ್ಷಗಳ ಹಿಂದೆಯೇ ಬುದ್ಧ ಸಮಾನತೆಯ ಸಂಘಟನೆ ರೂಪಿಸಿದ್ದರು ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಎ. ನಾಸಿ ಸ್ವಾಗತಿಸಿದರು. ಭಂತೆ ಧಮ್ಮ ಜ್ಯೋತಿ ಬುದ್ಧ ವಂದನೆ ಸಲ್ಲಿಸಿದರು. ಸಿದ್ದಾರ್ಥ ಚಿಮ್ಮಇದ್ಲಾಯಿ ಪ್ರಾರ್ಥನೆ ಗೀತೆ ನಡೆಸಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಬುದ್ಧ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರು ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ,ಕರ್ನಾಟಕ ರಾಜ್ಯ ಸರ್ಕಾರಿ-ಅರೆ ಸರ್ಕಾರಿ ಎಸ್.ಸಿ-ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಬಳ್ಳಿ, ಸಮಾಜದ ಮುಖಂಡರ ಎ.ಬಿ. ಹೊಸಮನೆ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಮಾಜದ ಮುಖಂಡರು ಭಾಗವಹಿಸಿದ್ದರು.

ಗೌತಮ ಬುದ್ಧ ಏಷಿಯಾದ ಬೆಳಕು: ಕೆ ರಾಘವೇಂದ್ರ ಹಿಟ್ನಾಳ

ಕೊಪ್ಪಳ,ಮೇ.02-

ಭಗವಾನ್ ಗೌತಮ ಬುದ್ಧ ಅವರು ಇಡೀ ಏಷಿಯಾದ ಬೆಳಕು ಎಂದು ಶಾಸಕರಾದ ಕೆ ರಾಘವೇಂದ್ರ ಹಿಟ್ನಾಳ ಅವರು ಗೌತಮ ಬುದ್ಧ ವ್ಯಕ್ತಿತ್ವವನ್ನು ಬಣ್ಣಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಮೇ 01ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ನಡೆದ ಭಗವಾನ್ ಬುದ್ಧ ಜಯಂತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಮ್ಮ ಮನೆಯಲ್ಲಿದ್ದ ಸಿರಿ ಸಂಪತ್ತನ್ನು ತ್ಯಜಿಸಿ ಸರಳ ಬದುಕಿಗೆ ಬಂದ ಬುದ್ಧ ಅವರು ಈ ಜಗತ್ತು ಕಂಡ ಮಹಾಮಹೀಮರಾಗಿದ್ದಾರೆ. ಇಂತಹ ಮಹಾತ್ಮನ ಜಯಂತಿಯು ರಾಜ್ಯ ಸರ್ಕಾರದಿಂದ ನಡೆಯುತ್ತಿರುವುದು ವಿಶೇಷ ಎಂದರು. 75 ವರ್ಷಗಳಾದರು ಸಹ ಸಮಾಜದಲ್ಲಿರುವ ಅಸಮಾನತೆಯನ್ನು ಹೋಗಲಾಡಿಸುವ ಕೆಲಸ ಮಾಡಬೇಕಿದೆ. ಅಂದಾಗ ಸಮಾನತೆ ಕಾಣಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಮಾಜಿ ಸಂಸದರಾದ ಕರಡಿ ಸಂಗಣ್ಣ ಅವರು ಮಾತನಾಡಿ, ಬುದ್ಧ ಪೂರ್ಣಿಮೆಯು ಸಂಭ್ರಮದ ದಿನವಾಗಿದೆ. ಬುದ್ಧ, ಬಸವ, ಅಂಬೇಡ್ಕರ ಅವರು ಜಗತ್ತಿಗೆ ಬೆಳಕು ನೀಡಿದ ಮಹಾನ್ ನಾಯಕರು. ಯುದ್ಧ ಬೇಡ ಬುದ್ಧ ಬೇಕು ಎಂದು ಈಗ ಇಡೀ ಜಗತ್ತೇ ಹೇಳುತ್ತಿದೆ. ಸಾಮರಸ್ಯದ ಬದುಕು ಕಟ್ಟಿಕೊಳ್ಳಲಾಗದಂತಹ ಪರಿಸ್ಥಿತಿ ಇಂದು ಜಗತ್ತಿನಲ್ಲಿ ಮುಂದುವರೆದಿದೆ. ಅಹಿಂಸೆ ಬೇಡ, ನಾವು ಬದುಕಬೇಕು ಮತ್ತು ಇತರರಿಗೂ ಬದುಕಲು ಬಿಡಬೇಕು ಎಂಬ ಮಹತ್ವದ ಸಂದೇಶವನ್ನು ಗೌತಮ ಬುದ್ಧ ನೀಡಿದ್ದಾರೆ ಎಂದು



ತಿಳಿಸಿದರು.

ನಿವೃತ್ತ ಉಪ ಅಧೀಕ್ಷಕರಾದ ಗಿರೀಶ ಕಾಂಬ್ಳೆ ಅವರು ವಿಶೇಷ ಉಪನ್ಯಾಸ ನೀಡಿ, ಬುದ್ಧ ಅವರು ಕೇವಲ ಭಾರತದ ಬೆಳಕಲ್ಲ; ಅವರು ಇಡೀ ಜಗತ್ತಿನ ಬೆಳಕು. ಬುದ್ಧ ಅಂದರೆ ಅದು ಮಹಾಸಾಗರ ಇದ್ದಂತೆ. ನಮ್ಮ ಮುಂದಿನ ಏಳ್ಗೇಗೆ, ನಮ್ಮ ಮುಂದಿನ ಬಾಳ್ವೆಗೆ ಬುದ್ಧ ಬೇಕು. ಬುದ್ಧನನ್ನು ಅರ್ಥ ಮಾಡಿಕೊಂಡವರು ಈ ಜಗತ್ತಿನಲ್ಲಿ ನೆಮ್ಮದಿಯಿಂದ ಬದುಕುತ್ತಾರೆ. ಬುದ್ಧ ಒಂದು ಜಾತಿ, ಭಾಷೆ, ಪ್ರದೇಶ, ದೇಶಕ್ಕೆ ಸೀಮೀತರಾಗಿಲ್ಲ. ಅವರ ವಿಚಾರ ವಿಶ್ವವ್ಯಾಪಿ ಎಂದರು.

ಬುದ್ಧನ ಆಶಯದಂತೆ ಡಾ.ಅಂಬೇಡ್ಕರ್ ಅವರು ಸಂವಿಧಾನ ಬರೆದರು ಎಂದು ತಿಳಿಸಿದರು. ರೋಗಿಯನ್ನು, ಸತ್ತವನನ್ನು ನೋಡಿದ ಗೌತಮ ಬುದ್ಧ ಆಸ್ತಿ ಕೇಳಲಿಲ್ಲ; ಸಂಪತ್ತು ಕೇಳಲಿಲ್ಲ. ಈ ಭೂಮಿಯ ಮೇಲೆ ಜನಿಸಿದ ಪ್ರತಿಯೊಬ್ಬರಿಗೂ ನೆಮ್ಮದಿಯಿಂದ ಬದುಕುವ ಹಕ್ಕಿದೆ ಎಂದು ತಿಳಿಸಿದವರು ಬುದ್ಧ. ಬುದ್ಧ ಎಂದರೆ ಶಾಂತಿಯ ದ್ಯೋತಕ. ಆದರೆ ಬುದ್ಧನ ವಿಚಾರಗಳು ಬೆಳೆಯಲು ಕೆಲವರು ಬಿಡುತ್ತಿಲ್ಲ ಎಂದರು.

ಸಮಾರಂಭದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ, ಪ್ರಸನ್ನ ವೀರಣ್ಣ ಗಡಾದ್, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ನಗರಸಭೆ ಪೌರಾಯುಕ್ತರಾದ ಮಂಜುನಾಥ ಗುಂಡೂರ, ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಮುಖಂಡರಾದ ಕೃಷ್ಣ ಇಟ್ಟಂಗಿ, ಮುತ್ತುರಾಜ್ ಕುಷ್ಟಗಿ, ಸಿದ್ರಾಮ ಹೊಸಮನಿ, ನಾಗರಾಜ ಬೆಲ್ಲದ, ರಘು ಬೆಲ್ಲದ, ಜಗದೀಶ ಚಲವಾದಿ, ಹನುಮಂತಪ್ಪ ಬಂಗಾಳಿಗಿಡದ, ಮಹಾವೀರ ಅಳ್ಳಳ್ಳಿ, ಗವಿಸಿದ್ದಪ್ಪ ಬೆಲ್ಲದ ಹಾಗೂ ಇತರರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಸ್ವಾಗತಿಸಿದರು. ಬಿ ಎನ್ ಹೊರಪೇಟೆ ನಿರೂಪಿಸಿದರು. ನಗರಸಭೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಇದ್ದರು.

ಆಗಸ್ಟ್‌ನಲ್ಲಿ ಸುಪ್ರೀಂ ಕೋರ್ಟ್‌ನಿಂದ ಸಮಾಧಾನ ಸಮಾರೋಹ್ ವಿಶೇಷ ಲೋಕ ಅದಾಲತ್ ಆಯೋಜನೆ: ಅನು ಶಿವರಾಮನ್

ಬಳ್ಳಾರಿ,ಮೇ 02-

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ತ್ವರಿತ ವಿಲೇವಾರಿಗಾಗಿ, ಬರುವ ಆಗಸ್ಟ್ 21, 22 ಮತ್ತು 23 ರಂದು 'ಸಮಾಧಾನ ಸಮಾರೋಹ್' ಎಂಬ ವಿಶೇಷ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಹಾಗೂ ಕೆಎಸ್‌ಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷರಾದ ಅನು ಶಿವರಾಮನ್ ಅವರು ಹೇಳಿದರು.

'ಸಮಾಧಾನ ಸಮಾರೋಹ್' ವಿಶೇಷ ಲೋಕ ಅದಾಲತ್ ಕುರಿತು, ಆನ್ ಲೈನ್ ಮೂಲಕ ಕರ್ನಾಟಕ ಹೈಕೋರ್ಟ್ ನ ಮೊದಲ ಮಹಡಿಯಲ್ಲಿರುವ ಕಾರ್ಯನಿರ್ವಾಹಕ ಅಧ್ಯಕ್ಷರ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಸುಪ್ರೀಂ ಕೋರ್ಟ್ ಪ್ರಕರಣಗಳ ಇತ್ಯರ್ಥಕ್ಕೆ ಇದು ವಿಶೇಷ ಲೋಕ್ ಅದಾಲತ್ ಆಗಿದೆ. ಸಾರ್ವಜನಿಕರಿಗೆ ಇದು ಸುವರ್ಣಾವಕಾಶವಾಗಿದ್ದು, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ದಾವೆಗಳನ್ನು ಪರಸ್ಪರ ಒಪ್ಪಿಗೆ ಮತ್ತು ಸಂಧಾನದ ಮೂಲಕ ಬಗೆಹರಿಸಿ, ದಾವೆದಾರರಿಗೆ ಶೀಘ್ರ ನ್ಯಾಯ ಒದಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಹೈಕೋರ್ಟ್ ಕಾನೂನು ಸೇವಾ



ಸಮಿತಿಯ ಅಧ್ಯಕ್ಷ ನ್ಯಾಯಮೂರ್ತಿ ಆರ್.ದೇವದಾಸ್ ಅವರು ಮಾತನಾಡಿ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿರುವ ಸಾವಿರಾರು ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು 'ವಿಶೇಷ ಲೋಕ್ ಅದಾಲತ್' ಎಂಬ ವಿನೂತನ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಹಿಂದೆ ಎಂದೂ ನಡೆಯದ ಈ ವಿಶೇಷ ಕಾರ್ಯಕ್ರಮದ ಮೂಲಕ ಜನಸಾಮಾನ್ಯರಿಗೆ ತಮ್ಮ ಕಾನೂನು ಹೋರಾಟವನ್ನು ಸುಲಭವಾಗಿ ಮುಕ್ತಾಯಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ರಾಜ್ಯದ 4,328 ಪ್ರಕರಣಗಳ ಗುರುತಿಸುವಿಕೆ:

ಕರ್ನಾಟಕ ರಾಜ್ಯದ ವಿವಿಧ ತಾಲೂಕು ಮತ್ತು ಜಿಲ್ಲಾ ಮಟ್ಟಗಳಿಂದ ಸುಪ್ರೀಂ ಕೋರ್ಟ್‌ಗೆ ಹೋದ ಸುಮಾರು 4,328 ಪ್ರಕರಣಗಳನ್ನು ಈಗಾಗಲೇ ಸುಪ್ರೀಂ ಕೋರ್ಟ್ ಗುರುತಿಸಿ, ಪಟ್ಟಿಯನ್ನು ಕಳುಹಿಸಿಕೊಟ್ಟಿದೆ. ರಾಜಿ ಸಂಧಾನದ ಮೂಲಕ ಬಗೆಹರಿಸಬಹುದಾದ ಪ್ರಕರಣಗಳನ್ನು ಗುರುತಿಸಿ, ಅವುಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವುದು ಈ ಲೋಕ್ ಅದಾಲತ್‌ನ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.


ವರ್ಷಾನುಗಟ್ಟಲೆ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುವ ಕಾನೂನು ಪ್ರಕ್ರಿಯೆಗಳು ಜನರಿಗೆ ಹೊರೆಯಾಗಬಹುದು. ಈ ಲೋಕ್ ಅದಾಲತ್ ಮೂಲಕ ಪರಸ್ಪರ ಒಪ್ಪಿಗೆಯ ಮೇರೆಗೆ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವುದರಿಂದ ಸಮಯ ಮತ್ತು ಹಣ ಎರಡೂ ಉಳಿತಾಯವಾಗಲಿದೆ. ತಮ್ಮ ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವವರು ಕೂಡಲೇ ಸಂಬಂಧಪಟ್ಟ ತಾಲ್ಲೂಕು ಅಥವಾ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಿ ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬೇಕೆಂದು ವಿನಂತಿಸಿದರು.

ವಿಡಿಯೋ ಸಂವಾದ ಬಳಿಕ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು, ಸಾರ್ವಜನಿಕರು ಮತ್ತು ದಾವೆದಾರರು ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬೇಕು. ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಬಹುದು ಎಂದರು.

ಸುಪ್ರೀಂ ಕೋರ್ಟ್ ನೀಡಿರುವ ಪಟ್ಟಿಯ ಅನ್ವಯ, ಕರ್ನಾಟಕ ರಾಜ್ಯದಿಂದ ಸುಮಾರು 4,328 ಪ್ರಕರಣಗಳನ್ನು ಗುರುತಿಸಲಾಗಿದೆ. ಈ ಪೈಕಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಿಗೆ ಸಂಬಂಧಿಸಿದ 109 ಪ್ರಕರಣಗಳು ಇತ್ಯರ್ಥಕ್ಕೆ ಲಭ್ಯವಿವೆ. ಸುಪ್ರೀಂ ಕೋರ್ಟ್‌ಗೆ ಅಲೆಯುವ ಬದಲು, ಸ್ಥಳೀಯವಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಥವಾ ತಾಲೂಕು ಕಾನೂನು ಸೇವಾ ಸಮಿತಿಗಳ ಮೂಲಕವೇ ಸಂಧಾನ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು ಎಂದು ತಿಳಿಸಿದರು.

ಪಕ್ಷಕಾರರು ಭೌತಿಕವಾಗಿ ಹಾಜರಾಗಲು ಸಾಧ್ಯವಾಗದಿದ್ದರೆ, ವಿಡಿಯೋ ಕಾನ್ಫರೆನ್ಸ್ ಮೂಲಕವೂ ಸಂಧಾನದಲ್ಲಿ ಪಾಲ್ಗೊಳ್ಳಲು ಅವಕಾಶವಿದೆ. ಉದಾಹರಣೆಗೆ, ಒಬ್ಬರು ಬಳ್ಳಾರಿಯಲ್ಲಿದ್ದು ಇನ್ನೊಬ್ಬರು ಮುಂಬೈ ಅಥವಾ ವಿದೇಶದಲ್ಲಿದ್ದರೂ ತಂತ್ರಜ್ಞಾನದ ಮೂಲಕ ಸಂಧಾನ ನಡೆಸಬಹುದು. ತರಬೇತಿ ಪಡೆದ ಪರಿಣಿತ ಮಧ್ಯಸ್ಥಿಕೆದಾರರು ಮತ್ತು ವಕೀಲರು ಉಭಯ ಪಕ್ಷಗಳ ನಡುವೆ ಸಮಾಲೋಚನೆ ನಡೆಸಿ, ಇಬ್ಬರಿಗೂ ಒಪ್ಪಿಗೆಯಾಗುವಂತಹ ಪರಿಹಾರ ಕಂಡುಕೊಳ್ಳಲು ನೆರವಾಗುತ್ತಾರೆ. ಇದರಲ್ಲಿ ವೈವಾಹಿಕ ವಿವಾದಗಳು, ಅಪಘಾತ ವಿಮೆ ಪರಿಹಾರ, ಚೆಕ್ ಬೌನ್ಸ್ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ಕ್ರಿಮಿನಲ್ ರಾಜಿ ಪ್ರಕರಣಗಳು ಹಾಗೂ ಕಾರ್ಮಿಕ ವಿವಾದಗಳನ್ನು ಇಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಹೇಳಿದರು.

ನ್ಯಾಯಾಲಯದಲ್ಲಿ ಒಬ್ಬರು ಗೆದ್ದು ಇನ್ನೊಬ್ಬರು ಸೋಲುತ್ತಾರೆ. ಆದರೆ ಸಂಧಾನದ ಮೂಲಕ ಪ್ರಕರಣ ಇತ್ಯರ್ಥವಾದರೆ ಇಬ್ಬರೂ ಗೆದ್ದಂತೆ. ಇದು ಸಮಯ ಮತ್ತು ಹಣದ ಉಳಿತಾಯ ಮಾಡುವುದಲ್ಲದೆ, ಸಮಾಜದಲ್ಲಿ ಶಾಂತಿ ಮತ್ತು ಬಾಂಧವ್ಯವನ್ನು ಕಾಪಾಡುತ್ತದೆ. ನಿಮ್ಮ ಪ್ರಕರಣವು ಸುಪ್ರೀಂ ಕೋರ್ಟ್ ಪಟ್ಟಿಯಲ್ಲಿ ಇಲ್ಲದಿದ್ದರೂ, ವೆಬ್‌ಸೈಟ್ ಮೂಲಕ ನೋಂದಾಯಿಸಿಕೊಂಡು ಈ ಸೌಲಭ್ಯ ಪಡೆಯಬಹುದು ಎಂದು ಅವರು ತಿಳಿಸಿದರು. ಈ ವೇಳೆ ಮಾಧ್ಯಮ ಪ್ರತಿನಿಧಿಗಳು ಹಾಗೂ ನ್ಯಾಯಾಲಯದ ಸಿಬ್ಬಂದಿ ಇದ್ದರು.



ಭಿಕ್ಷೆ ಬೇಡಿ ಎಸೆಸೆಲ್ಸಿಯಲ್ಲಿ 529 ಅಂಕ ಪಡೆದ ವಿದ್ಯಾರ್ಥಿನಿಗೆ ಜಿಲ್ಲಾಧಿಕಾರಿಗಳಿಂದ ಸನ್ಮಾನ

ಕಲಬುರಗಿ,ಮೇ.02-

ಭಿಕ್ಷೆ ಬೇಡಿಕೊಂಡು ಜೀವನ ಸಾಗಿಸುತ್ತಾ ಎಸೆಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿನಿ ಸುಜಾತಾ ಭೀಮಶಾ ಗೊಲ್ಲರ್ ಅವರನ್ನು ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಅವರು ಸನ್ಮಾನಿಸಿ ಪ್ರೋತ್ಸಾ ಹಿಸಿದರು.

ಆಳಂದ ತಾಲೂಕಿನ ಮಾದನ ಹಿಪ್ಪರಗಾ ಸರ್ಕಾರಿ ಪಬ್ಲಿಕ್ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿಯಾಗಿರುವ ಸುಜಾತಾ, ಒಟ್ಟು 625 ಅಂಕಗಳಲ್ಲಿ 529 ಅಂಕಗಳನ್ನು ಪಡೆದು ಶೇ.84.64 ಫಲಿತಾಂಶ ಸಾಧಿಸಿದ್ದಾರೆ.

ಸಂಕಷ್ಟಕರ ಪರಿಸ್ಥಿತಿಯಲ್ಲಿಯೇ ಅವರು ಸಾಧಿಸಿದ ಈ ಯಶಸ್ಸು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಅವರು, ಸುಜಾತಾ ಅವರನ್ನು ತಮ್ಮ ಕಚೇರಿಗೆ ಕರೆಯಿಸಿಕೊಂಡು ಸಿಹಿ ತಿನಿಸಿ ಸನ್ಮಾನಿಸಿದರು.

ಅಲ್ಲದೆ, ವಿದ್ಯಾರ್ಥಿನಿಗೆ ನೋಟ್ ಬುಕ್, ಶಾಲಾ ಬ್ಯಾಗ್, ಪೆನ್ ಸೇರಿದಂತೆ ಅಗತ್ಯ ವಿದ್ಯಾ ಸಾಮಗ್ರಿಗಳನ್ನು ವಿತರಿಸಿದರು.

ಸುಜಾತಾ ಅವರ ಸಾಧನೆ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ ಎಂದು ಆಶಿಸಿದ ಜಿಲ್ಲಾಧಿಕಾರಿಗಳು, ಅವರ ಮುಂದಿನ ವಿದ್ಯಾಭ್ಯಾಸ ಯಶಸ್ವಿಯಾಗಲಿ ಎಂದು ಹಾರೈಸಿದ್ದಾರೆ.

ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಶೂನ್ಯ : ಕಾಂಗ್ರೆಸ್ ವಿರುದ್ಧ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ


ಸೇಡಂ,ಮೇ.02-

ಹಳೆ ಮೈಸೂರು ಭಾಗಕ್ಕೆ ಹೋಲಿಸಿದರೆ ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ತೀವ್ರ ಹಿನ್ನಡೆ ಅನುಭವಿಸಿದೆ. ಈ ಭಾಗದ ಅಭಿವೃದ್ಧಿ ಆಗಿಲ್ಲ ಎಂದು ಸ್ವತಃ ಕಾಂಗ್ರೆಸ್ ನಾಯಕರೇ ಒಪ್ಪಿಕೊಂಡಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಜೆಡಿಎಸ್ ವತಿಯಿಂದ ಆಯೋಜಿಸಿದ್ದ ಜನರೊಂದಿಗೆ ಜನತಾದಳದ ಬೃಹತ್ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ಕೆಕೆಆರ್‌ಡಿಬಿ ಮಂಡಳಿಗೆ ಪ್ರತಿವರ್ಷ ₹5 ಸಾವಿರ ಕೋಟಿ ಅನುದಾನ ನೀಡಲಾಗುತ್ತಿದ್ದರೂ ಯಾವುದೇ ಸ್ಪಷ್ಟ ಪ್ರಗತಿ ಕಾಣುತ್ತಿಲ್ಲ ಎಂದು ಆರೋಪಿಸಿದರು.

ಕಲಬುರಗಿ ಸೇರಿದಂತೆ ಹಲವು ನಗರಗಳ ರಸ್ತೆಗಳು ಗುಂಡಿಮಯವಾಗಿವೆ. ರಸ್ತೆ ದುರಸ್ತಿ ಮಾಡಲು ಹಣವಿಲ್ಲವೇ? ಸಾವಿರಾರು ಕೋಟಿ ರೂಪಾಯಿ ಅನುದಾನ ಎಲ್ಲಿಗೆ ಹೋಗುತ್ತಿದೆ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ 18 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಎಸೆಸೆಲ್ಸಿ ಫಲಿತಾಂಶದಲ್ಲಿ ಜಿಲ್ಲೆ ಕೊನೆಯ ಸ್ಥಾನದಲ್ಲಿದೆ. ಮಕ್ಕಳ ಭವಿಷ್ಯದ ಬಗ್ಗೆ ಕಾಳಜಿ ಇಲ್ಲದೆ ರಾಜಕಾರಣಿಗಳು ಕೇವಲ ಭಾಷಣಗಳಿಗೆ ಸೀಮಿತರಾಗಿದ್ದಾರೆ ಎಂದು ಟೀಕಿಸಿದರು.



ಆಂಧ್ರ ಪ್ರದೇಶದ ಸ್ಟೀಲ್ ಫ್ಯಾಕ್ಟರಿಗೆ ಮರುಜೀವ ನೀಡಿದಂತೆ ಸೇಡಂನ ಸಿಸಿಐ ಕಾರ್ಖಾನೆಯನ್ನು ಪುನರಾರಂಭಿಸಲು ಪ್ರಯತ್ನಗಳು ನಡೆಯುತ್ತಿವೆ. ಇದಕ್ಕೆ ಸಕಾರಾತ್ಮಕ ಸ್ಪಂದನೆ ದೊರೆತಿದೆ ಎಂದು ಹೇಳಿದರು.

ಹೆಚ್.ಡಿ. ದೇವೇಗೌಡರು ಪ್ರಧಾನಿಯಾಗಿದ್ದಾಗ ಭೀಮಾ ನದಿ ನೀರಾವರಿ ಯೋಜನೆ ಮೂಲಕ ನೀರು ಒದಗಿಸಿದ್ದರು. ಹೆಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಎರಡು ಅವಧಿಗಳಲ್ಲೂ ರೈತರ ಸಾಲ ಮನ್ನಾ ಮಾಡಿದ್ದಾರೆ ಎಂದು ನೆನಪಿಸಿದರು.

ಸಚಿವ ಡಾ. ಶರಣಪ್ರಕಾಶ ಪಾಟೀಲ ವಿರುದ್ಧ ವಾಗ್ದಾಳಿ ನಡೆಸಿದ ನಿಖಿಲ್, ಹಲವು ಬಾರಿ ಶಾಸಕರಾಗಿ, ಸಚಿವರಾಗಿದ್ದರೂ ಕ್ಷೇತ್ರದಲ್ಲಿ ಗುಣಮಟ್ಟದ ವೈದ್ಯಕೀಯ ಸೌಲಭ್ಯಗಳಿಲ್ಲ. ಸಿಮೆಂಟ್ ಕಾರ್ಖಾನೆಗಳಿದ್ದರೂ ಸ್ಥಳೀಯರಿಗೆ ಉದ್ಯೋಗ ಸಿಗದೆ ವಲಸೆ ಹೋಗುತ್ತಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ಸರ್ಕಾರ ಬಂದರೆ ಸ್ಥಳೀಯರಿಗೆ ಖಾಸಗಿ ಕಾರ್ಖಾನೆಗಳಲ್ಲಿ ಶೇ.50ರಷ್ಟು ಉದ್ಯೋಗ ಮೀಸಲು ನೀಡುವ ಕಾನೂನು ತರಲಾಗುವುದು ಎಂದು ಭರವಸೆ ನೀಡಿದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ ಗುತ್ತೇದಾರ್ ಮಾತನಾಡಿ, ರೈತರು, ಬಡವರು ಹಾಗೂ ಯುವಕರ ಪರವಾಗಿ ಧ್ವನಿ ಎತ್ತುತ್ತಿರುವ ನಾಯಕ ಎಚ್.ಡಿ. ಕುಮಾರಸ್ವಾಮಿ ಎಂದರು.

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಬಿ.ಎಂ. ಕೃಷ್ಣಾರೆಡ್ಡಿ ಹಾಗೂ ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ ಮಾತನಾಡಿ, ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನರಿಗೆ ಶಾಶ್ವತ ಪ್ರಯೋಜನ ನೀಡುತ್ತಿಲ್ಲ. ಅವು ಕೇವಲ ಪ್ರಚಾರದ ತಂತ್ರಗಳಾಗಿವೆ ಎಂದು ಟೀಕಿಸಿದರು.

ಈ ವೇಳೆಯಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ, ದೊಡ್ಡಪ್ಪಗೌಡ ಪಾಟೀಲ ನರಿಬೋಳ, ಸೂರಜ್ ಸೋನಿ ನಾಯಕ, ನಾಸೀರ್ ಹುಸೇನ್, ಕೃಷ್ಣಾರೆಡ್ಡಿ, ಶಿವಕುಮಾರ ನಾಟೀಕರ್, ಮಹೇಶ್ವರಿ ವಾಲಿ, ಜಗನ್ನಾಥರೆಡ್ಡಿ ಗೋಟೂರ್, ಬಸವರಾಜ ಬೀರಬಿಟ್ಟಿ, ಗುರುರಾಜ ಹುಣಸಿಮರದ, ದೇವೆಗೌಡ ತೆಲ್ಕೂರ, ರಾಜಕುಮಾರ ಬಡದಾಳ, ಚಾಂದಪಾಶ ಬುರುಗಪಲ್ಲಿ, ಪ್ರವೀಣ ಜಾಧವ, ಹಸನಪ್ಪ ಮೇತ್ರಿ, ಗೀತಾ,ಪಲ್ಲವಿ ಗುತ್ತೇದಾರ, ಶಂಭುಲಿಗ ನಾಟೀಕರ್ ಶಿವಪುತ್ರಪ್ಪ ಮೊಘ ಸೇರಿದಂತೆ ಅನೇಕರಿದ್ದರು.

ಜಗನ್ನಾಥ ತರನಳ್ಳಿ ನಿರೂಪಿಸಿ ವಂದಿಸಿದರು. ಜೆಡಿಎಸ್ ತಾಲೂಕು ಅಧ್ಯಕ್ಷ ವೆಂಕಟರೆಡ್ಡಿ ಪಾಟೀಲ ಗಾಡದಾನಾ ಪ್ರಾಸ್ತವಿಕ ಮಾತನಾಡಿದರು.

ಎಐಟಿಯುಸಿ ನೇತೃತ್ವದಲ್ಲಿ ವಿಶ್ವ ಕಾರ್ಮಿಕ ದಿನಾಚರಣೆ



ಹರಪನಹಳ್ಳಿ,ಮೇ.02-

ಕಾರ್ಮಿಕರು ಸೃಷ್ಟಿಸುವ ಸಂಪತ್ತಿನ ಶೇ.70ರಷ್ಟು ಲಾಭ ಬಂಡವಾಳಶಾಹಿಗಳ ಪಾಲಾಗುತ್ತಿದ್ದು, ಇಂದು ಜಾತಿ ಹಾಗೂ ಧರ್ಮದ ಹೆಸರಲ್ಲಿ ಕಾರ್ಮಿಕ ವರ್ಗ ಒಡೆಯುತ್ತಿರುವುದು ದೊಡ್ಡ ಸವಾಲಾಗಿದೆ ಎಂದು ಕಾರ್ಮಿಕ ಮುಖಂಡ ಗುಡಿಹಳ್ಳಿ ಹಾಲೇಶ್ ಅಭಿಪ್ರಾಯಪಟ್ಟರು.

ಪಟ್ಟಣದ ಜೂನಿಯರ್ ಕಾಲೇಜು ಮುಂಭಾಗದಲ್ಲಿ ಎಐಟಿಯುಸಿ ನೇತೃತ್ವದಲ್ಲಿ ಆಯೋಜಿಸಿದ್ದ ವಿಶ್ವ ಕಾರ್ಮಿಕ ದಿನಾಚರಣೆಯ ನಿಮಿತ್ತ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕಾರ್ಮಿಕರು ದಿನನಿತ್ಯ ಬೆವರು ಸುರಿಸಿ ದುಡಿದರೂ ಜಾಗತೀಕರಣ ಹಾಗೂ ಖಾಸಗೀಕರಣ ನೀತಿಗಳ ಪರಿಣಾಮ ಹೊಟ್ಟೆ-

ಬಟ್ಟೆಗೆ ಕಷ್ಟಪಡುವ ಸ್ಥಿತಿ ನಿರ್ಮಾಣವಾಗಿದೆ. ದೇಶದ ಸಂಪತ್ತನ್ನು ಸೃಷ್ಟಿಸುವ ಕಾರ್ಮಿಕರ ಶ್ರಮವನ್ನು ಗುರುತಿಸುವ ದಿನವೇ ವಿಶ್ವ ಕಾರ್ಮಿಕ ದಿನ ಎಂದು ಹೇಳಿದರು.

ಅಂಗನವಾಡಿ ಕಾರ್ಯಕರ್ತರ ಸಂಘದ ತಾಲೂಕು ಅಧ್ಯಕ್ಷೆ ಟಿ. ಬಸಮ್ಮ ಮಾತನಾಡಿ, 1886ರಲ್ಲಿ ಅಮೆರಿಕದಲ್ಲಿ ಕಾರ್ಮಿಕರು ದಿನಕ್ಕೆ 8 ಗಂಟೆ ಕೆಲಸದ ಬೇಡಿಕೆಗಾಗಿ ಹೋರಾಟ ನಡೆಸಿದರು. ಅದೇ ವರ್ಷ ಮೇ 4ರಂದು ಚಿಕಾಗೋದ ಹೇ ಮಾರ್ಕೆಟ್‌ನಲ್ಲಿ ನಡೆದ ಶಾಂತಿಯುತ ಸಭೆಯ ಮೇಲೆ ಪೊಲೀಸರು ಗುಂಡು ಹಾರಿಸಿ ಹಲವಾರು ಕಾರ್ಮಿಕರನ್ನು ಬಲಿ ಪಡೆದರು. ಅವರ ತ್ಯಾಗದ ಸ್ಮರಣಾರ್ಥವಾಗಿ ಮೇ 1ರಂದು ಅಂತರರಾಷ್ಟ್ರೀಯ ಕಾರ್ಮಿಕರ ದಿನ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿಪಿಐ ತಾಲೂಕು ಕಾರ್ಯದರ್ಶಿ ರಮೇಶ ನಾಯ್ಕ್, ಕಾರ್ಮಿಕ ಮುಖಂಡರಾದ ಹನುಮಂತಪ್ಪ, ಕೊಟ್ರೇಶ್ ಬಾಳಿಗನೂರು, ಪಿ. ಪುಷ್ಪ, ಸುಮಂಗಲ, ದೊಡ್ಡ ಬಸವರಾಜ್, ಕೆ. ಶಿವರಾಮ್, ಅರುಣ್ ಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಕಡ್ಡಾಯವಾಗಿ ಬಳಸಿ, ಮಲೇರಿಯಾ ರೋಗ ಹರಡದಂತೆ ನೋಡಿಕೊಳ್ಳಿ: ಡಾ.ಸುರೇಂದ್ರ ಬಾಬು

ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ಪ್ರಕರಣಗಳ ಸಂಖ್ಯೆಯನ್ನು ಶೂನ್ಯಕ್ಕೆ ಇಳಿಸುವ ದಿಶೆಯಲ್ಲಿ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ದಶಕಗಳ ಹಿಂದೆ ಪ್ರತಿದಿನ ವರದಿಯಾಗುತ್ತಿದ್ದ ಮಲೇರಿಯಾ ಪ್ರಕರಣಗಳು ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಸಿಬ್ಬಂದಿಯರ ಪರಿಶ್ರಮದಿಂದ ಹೆಚ್ಚು ಪ್ರಕರಣಗಳು ಕಂಡು ಬರುತ್ತಿದ್ದ ಈಚನಾಳ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೃಷ್ಣಾ ನದಿಯ ದ್ವೀಪ ಪ್ರದೇಶದ ಕೆಲವು ಹಳ್ಳಿಗಳಲ್ಲಿ ನಿರಂತರವಾಗಿ ನಿಗಾವಹಿಸಿ ನಿಯಂತ್ರಣ ಮಾಡಲಾಗಿದ್ದು, ವಲಸೆ ಜನವಸತಿ, ದೊಡ್ಡಿ, ಹಟ್ಟಿಗಳ ಜನರ ನಿಗಾವಹಿಸಿ ಜ್ವರ ಬಂದ ತಕ್ಷಣ ರಕ್ತಲೇಪನ ಹಾಗೂ ಖಚಿತ ಪಟ್ಟಲ್ಲಿ ಚಿಕಿತ್ಸೆ ಒದಗಿಸಲಾಗುತ್ತಿದೆ. ಕುಟುಂಬದ ಸದಸ್ಯರಲ್ಲಿ ಯಾರಿಗಾದರೂ ಜ್ವರ ಕಂಡುಬದಲ್ಲಿ ನಿರ್ಲಕ್ಷ್ಯ ಮಾಡದೆ ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಹಕಾರವಾಗುವುದು ಎಂದರು.

ಜಿಲ್ಲಾ ಸರ್ವೇಕ್ಷಣಾ ಮತ್ತು ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಗಣೇಶ್ ಕೆ. ಅವರು ಮಾತನಾಡಿ, ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ, ಮಣ್ಣು ಹಾಕಿ ಮುಚ್ಚಲು, ಮಲಗುವಾಗ ಇಲಾಖೆಯಿಂದ ಒದಗಿಸಿದ ಮೆಡಿಕೆಟೆಡ್ ಸೊಳ್ಳೆಪರದೆಗಳ ಬಳಕೆ, ಬೇರೆ ಊರಿನಿಂದ ಬಂದಾಗ ಜ್ವರ ಇದ್ದರೆ ತಕ್ಷಣ ಪರೀಕ್ಷೆ, ಮಾಡಿಸಲು ತಿಳಿಸಿದರಲ್ಲದೆ ಕೀಟ ನಾಶಕ ಸಿಂಪರಣೆಗೆ ಇಲಾಖೆಯ ತಂಡ ಮನೆಗಳಿಗೆ ಬಂದಾಗ ಜನತೆ ಸಂಪೂರ್ಣ ಸಹಕಾರ ನೀಡಲು ತಿಳಿಸಿದರು.

ಇದೇ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮರೇಶ ಪಾಟೀಲ್, ಆಡಳಿತ ವೈದ್ಯಾಧಿಕಾರಿ ಡಾ.ಹನಮಂತರಾಯ ತಳ್ಳಿಳ್ಳಿ, ವೈದ್ಯಾಧಿಕಾರಿ ಡಾ.ರಾಜೇಶ್ವರಿ ಮುಖಂಡರಾದ ಆದೇಪ್ಪ, ಪೀರಸಾಬ್, ಬಸವರಾಜ್, ಹನುಮಂತ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅಡಿವೆಪ್ಪ, ಶರಣಬಸವ ಪಾಟೀಲ್, ಬಸವರಾಜ್, ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ, ಅಮರೇಶ, ಜಗದೀಶ್, ಅಲಿ, ಪಿಹೆಚ್‌ಸಿಓ, ಅಂಬಮ್ಮ, ಮಲ್ಲಮ್ಮ, ರಾಧಾ, ಹುಲಿಗೆಮ್ಮ, ಸಿಹೆಚ್‌ಓ ಪ್ರತಾಪ್, ಸಿದ್ದಲಿಂಗ, ಶಾರದಾ, ಎಪಡಮಾಲಿಜಿಷ್ಟ್ ಅಶೋಕ ಮಡಿರ್ಕ, ಫಾರ್ಮಸಿ ಅಧಿಕಾರಿ ಜುಬೇರ್, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ನರೇಗಾ ಕೆಲಸದಲ್ಲಿ ಕೃಷಿ ಕೂಲಿಕಾರರಿಂದ ವಿಶ್ವ ಕಾರ್ಮಿಕರ ದಿನ ಆಚರಣೆ

ಉದ್ಯೋಗ ಖಾತ್ರಿ ಕೆಲಸದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಕಲ್ಪಿಸಬೇಕು

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಬಿಎಪ್ಟಿ ರಂವಿಚಂದ್ರ, ನಾಯಕ, ಕೃಷಿ ಕೂಲಿಕಾರರ ಸಂಘಟನೆ ತಾಲ್ಲೂಕು ಅಧ್ಯಕ್ಷ ಲಿಂಗಣ್ಣ ಮಕಾಶಿ, ಹೇರುಂಡಿ ಗ್ರಾಮ ಘಟಕ ಅಧ್ಯಕ್ಷ ಶಿವಣ್ಣ,ಕಾರ್ಯದರ್ಶಿ ದೇವಮ್ಮ ಸೇರಿದಂತೆ ಇತರರು ಇದ್ದರು.

ಗ್ಯಾಸ್ ಬೆಲೆ ಏರಿಕೆ: ಕೇಂದ್ರ ಸರಕಾರದ ವಿರುದ್ಧ ಡಾ.ರಝಾಕ ಉಸ್ತಾದ ಖಂಡನೆ

ಪರದಾಡುತ್ತಿದ್ದ ಹೋಟೆಲ ಮಾಲಿಕರು ಈಗ ಬೆಲೆ ಹೆಚ್ಚಳದಿಂದ ಜೀವನ ದುಸ್ತರವಾಗಿದೆ.

ಪಂಚ ರಾಜ್ಯಗಳ ಚುನಾವಣೆ ಮುಗಿಯುವವರೆಗೂ ಕಾದು, ಮತದಾನ ಮುಗಿದ ತಕ್ಷಣ ಜನರಿಗೆ ಕೇಂದ್ರದ ಬಿಜೆಪಿ ಸರಕಾರ ಬೆಲೆಯೇರಿಕೆಗೆ ಮುಂದಾಗಿದೆ ಎಂದರೆ ಇವರಿಗೆ ಚುನಾವಣೆ ಮಾತ್ರ ಮುಖ್ಯ, ಜನರ ಬದುಕಲ್ಲ. ವಾಣಿಜ್ಯ ಗ್ಯಾಸ್ ದರ ಏರಿಕೆಯಿಂದ ಕೇವಲ ವ್ಯಾಪಾರಸ್ಥರು ಮಾತ್ರ ಸಂಕಷ್ಟಕ್ಕೆ ಒಳಗಾಗುವದಿಲ್ಲ, ದೇಶದ ಪ್ರತಿಯೊಂದು ಮನೆಯ ಮೇಲೂ ದರ ಏರಿಕೆಯ ಪರಿಣಾಮ ಬೀರುತ್ತದೆ. ಗ್ಯಾಸ್ ದರ ಏರಿಕೆಯಿಂದ ಹೋಟೆಲ್ ಗಳು, ರೆಸ್ಟೋರೆಂಟ್ ಗಳು, ಸಣ್ಣ ಪುಟ್ಟ ಹ್ಯಾಂಟೀನ್ ಗಳು ಹಾಗೂ ಕೆಟೆರಿಂಗ್ ಸೇವೆಗಳಿಗೆ ತಮ್ಮ ಆಹಾರ ಪದಾರ್ಥಗಳ ದರ ಹೆಚ್ಚಿಸುವದು ಅನಿವಾರ್ಯವಾಗುತ್ತದೆ, ಇದರಿಂದ ಸಾರ್ವಜನಿಕರು ಅದರ ಹೊರೆ ಹೊರಬೇಕಾಗುತ್ತದೆ.

ಕೇಂದ್ರ ಬಿಜೆಪಿ ಸರಕಾರದ ಟೊಳ್ಳು ವಿದೇಶಾಂಗ ನೀತಿಯಿಂದಾಗಿ ಜನಸಾಮಾನ್ಯರು ಸಂಕಷ್ಟ ಅನುಭವಿಸುವಂತಾಗಿದೆ, ಜಾಗತಿಕ ಪರಸ್ಥಿತಿಗಳು ಬದಲಾಗುತ್ತಿರುತ್ತವೆ, ಇಂತಹ ಸಂದರ್ಭದಲ್ಲಿ ಭಾರತದ ನಾಗರೀಕರನ್ನು ಕಾಪಾಡುವದು ಕೇಂದ್ರ ಸರಕಾರದ ಕರ್ತವ್ಯವಾಗಿದೆ, ಆದರೆ ಕೇಂದ್ರ ಸರಕಾರ ಜನಸಾಮಾನ್ಯರನ್ನು ರಕ್ಷಿಸುವ ಬದಲು ಬೆಲೆ ಏರಿಕೆಯ ಹೊರೆ ಹೊರಿಸುವದು ಅರ್ಥಹೀನವಾಗಿದೆ. ಗ್ಯಾಸ್ ಮಾತ್ರವಲ್ಲ ಪೆಟ್ರೋಲ್ ಮತ್ತು ಡಿಜೆಲ್ ಬೆಲೆ ಸಹ ಏರಿಕೆಯಾಗುವ ಸಾದ್ಯತೆಯಿದೆ ಎಂದು ಹೇಳಲಾಗಿದೆ, ಇದು ಕೇಂದ್ರ ಸರಕಾರದ ದುರಾಡಳಿತದ, ಜನವಿರೋಧಿ ನೀತಿಯ ಪರಿಣಾಮ ಎಂದೇ ಹೇಳಬಹುದಾಗಿದೆ ಎಂದು ಕೆಪಿಸಿಸಿ ಮಾದ್ಯಮ ವಿಭಾಗದ ರಾಜ್ಯ ವಕ್ತಾರ ಡಾ.ರಝಾಕ ಉಸ್ತಾದ) ತಿಳಿಸಿದ್ದಾರೆ.

ಡಿ ಸಿ ಎಂ. ಡಿ ಕೆ. ಶಿವಕುಮಾರ ಸೇರಿ ಹಲವಾರು ಸಚಿವರ ಆಗಮನದ ನಿರೀಕ್ಷೆ

ಇದ್ದು. ಈ ಹಿನ್ನೆಲೆಯಲ್ಲಿ ಬೃಹತ್ ಗಾತ್ರದ ಪೆಂಡಾಲ್ ಹಾಕಲಾಗಿದ್ದು. ಬೇಸಿಗೆ ಹಿನ್ನೆಲೆಯಲ್ಲಿ ಬೃಹತ್ ಪೆಂಡಾಲಿನಲ್ಲಿ ದೊಡ್ಡ ದೊಡ್ಡ ಗಾತ್ರದ ಫ್ಯಾನುಗಳನ್ನು ಅಳವಡಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ಜನಸ್ತೋಮಕ್ಕೆ ಮಳೆ ಹಾಗೂ ಬಿಸಿಲಿನಿಂದ ಯಾವುದೇ ರೀತಿಯ ಸಮಸ್ಯೆಯಾಗದಂತೆ ಪೆಂಡಾಲುಗಳಿಗೆ ವಾಟರ್ ಪ್ರೂಫ್ ಪ್ಲಾಸ್ಟಿಕ್ ಹೊದಿಕೆಯನ್ನು ಹಾಕಲಾಗಿದೆ. ಕಾರ್ಯಕ್ರಮಕ್ಕೆ ಉಪಮುಖ್ಯಮಂತ್ರಿಗಳು ಸೇರಿದಂತೆ ಸಚಿವರು ಆಗಮಿಸುವ ಹಿನ್ನೆಲೆಯಲ್ಲಿ ನಗರದ ಪ್ರಮುಖ ಬೀದಿಗಳಲ್ಲಿ. ಉಪಮುಖ್ಯಮಂತ್ರಿಗಳಿಗೆ ಸಚಿವರಿಗೆ ಸ್ವಾಗತ ಕೋರುವ ಬ್ಯಾನರುಗಳು ನಗರದಲ್ಲಿ ರಾರಾಜಿಸುತ್ತಿರುವ ದೃಶ್ಯವನ್ನು ಕಾಣಬಹುದು.

ಜನಿವಾರ ತೆಗೆಸಿದ ಕೃತ್ಯ 'ಪೆಹಲ್ಗಾಂ' ಮಾದರಿಯ ದಬ್ಬಾಳಿಕೆ: ಬ್ರಾಹ್ಮಣ ಮಹಾಸಭಾ ತೀವ್ರ ಖಂಡನೆ

ನ್ಯಾಯಾಲಯದ ಆದೇಶದ ಉಲ್ಲಂಘನೆ

ಕಳೆದ ವರ್ಷವೂ ಇಂತಹದ್ದೇ ಘಟನೆಗಳು ನಡೆದಿದ್ದವು. ಈ ಬಗ್ಗೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ನ್ಯಾಯಾಲಯದ ಮೆಟ್ಟಿಲೇರಿತ್ತು. ಆಗ ಸಿಇಟಿ ಕೌನ್ಸಿಲ್ ಇನ್ಮುಂದೆ ಇಂತಹ ಕೃತ್ಯಗಳಿಗೆ ಆಸ್ಪದ ನೀಡುವುದಿಲ್ಲ ಎಂದು ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಿತ್ತು. ಹೀಗಿದ್ದರೂ ಈ ವರ್ಷವೂ ಅದೇ ಕೃತ್ಯ ಪುನರಾವರ್ತನೆಯಾಗಿರುವುದು ಸಂವಿಧಾನ ವಿರೋಧಿ ಮತ್ತು ನ್ಯಾಯಾಂಗ ನಿಂದನೆಯಾಗಿದೆ ಎಂದು ಅವರು ದೂರಿದರು.

ಮಹಾಸಭಾದ ಪ್ರಮುಖ ಬೇಡಿಕೆಗಳು: ಪಾರದರ್ಶಕ ತನಿಖೆ: ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಈ ಘಟನೆಯ ಹಿಂದೆ ಇರುವ ಶಕ್ತಿಗಳ ಬಗ್ಗೆ ತನಿಖೆ ನಡೆಸಬೇಕು. ವಿದ್ಯಾಸಂಸ್ಥೆಗಳ ಮಾನ್ಯತೆ ರದ್ದು: ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿರುವ ಕೃಪಾನಿಧಿ ಮತ್ತು ನಾಗಾರ್ಜುನ ವಿದ್ಯಾಸಂಸ್ಥೆಗಳ ಮಾನ್ಯತೆಯನ್ನು ತಕ್ಷಣವೇ ರದ್ದುಗೊಳಿಸಬೇಕು. ವ್ಯಕ್ತಿಗಳ ಬಂಧನ: ಜನಿವಾರ ತೆಗೆಸಿದ ಕೃತ್ಯದ ಹಿಂದಿರುವ ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು.

ಇಂತಹ ಕೃತ್ಯಗಳು ವಿದ್ಯಾರ್ಥಿಗಳ ಆತ್ಮಸ್ಥೈರ್ಯವನ್ನು ಕುಗ್ಗಿಸುತ್ತವೆ. ಪರೀಕ್ಷೆ ಬರೆಯಲು ವಿದ್ಯಾರ್ಥಿಗಳು ಹಿಂದೇಟು ಹಾಕುವ ಪರಿಸ್ಥಿತಿಯನ್ನು ಸರ್ಕಾರವೇ ನಿರ್ಮಾಣ ಮಾಡುತ್ತಿದೆ. ಸರ್ಕಾರ ಕಠಿಣ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಇರುವ ಬ್ರಾಹ್ಮಣ ಸಂಘಟನೆಗಳು ಹಾಗೂ ಹಿಂದೂ ಬಾಂಧವರು ಸೇರಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು, ಎಂದು ರಾಘವೇಂದ್ರ ಮಯ್ಯ ಎಚ್ಚರಿಸಿದರು.

ಅಂಗನವಾಡಿ ಕೇಂದ್ರಗಳ ರಜೆ ವಿಸ್ತರಣೆಗೆ ಅಪರ ಜಿಲ್ಲಾಧಿಕಾರಿಗೆ ಮನವಿ

ವರೆಗೆ ಉಷ್ಣಾಂಶ ದಾಖಲಾಗುತ್ತಿರು ವುದರಿಂದ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ರಜೆ ವಿಸ್ತರಣೆ ಅಗತ್ಯವಿದೆ ಎಂದು ಸಂಘ ಮನವಿಯಲ್ಲಿ ತಿಳಿಸಿದೆ. 3ರಿಂದ 5 ವರ್ಷದ ಮಕ್ಕಳು ಅಂಗನವಾಡಿಗಳಿಗೆ ಹಾಜರಾಗುವುದರಿಂದ ತೀವ್ರ ಬಿಸಿಲು ಅವರ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಕ್ಕಳು ದೂರ ಪ್ರಯಾಣಿಸಿ ಅಂಗನವಾಡಿಗೆ ಬರಬೇಕಾಗಿರುವುದು ಮತ್ತಷ್ಟು ಸಂಕಷ್ಟ ಉಂಟುಮಾಡುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಇದಲ್ಲದೆ ಅಂಗನವಾಡಿ ನೌಕರರು ರಜೆ ಅವಧಿಯಲ್ಲಿಯೂ ಜನಗಣತಿ, ಚುನಾವಣೆ ಸೇರಿದಂತೆ ವಿವಿಧ ಇಲಾಖೆಯೇತರ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದಾಗಿ ಸಂಘ ತಿಳಿಸಿದೆ. ಆದ್ದರಿಂದ ಮಕ್ಕಳ, ಪೋಷಕರ ಹಾಗೂ ಅಂಗನವಾಡಿ ಸಿಬ್ಬಂದಿಯ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಹೆಚ್ಚುವರಿ 15 ದಿನಗಳ ರಜೆ ಘೋಷಿಸಬೇಕೆಂದು ಸಂಘ ಒತ್ತಾಯಿಸಿದೆ. ಮನವಿ ಸಲ್ಲಿಸುವ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷೆ ಹೆಚ್. ಪದ್ಮಾ, ಜಿಲ್ಲಾ ಕಾರ್ಯದರ್ಶಿ ರಂಗಮ್ಮ ಅನ್ವರ್ ವರಲಕ್ಷ್ಮಿ, ನಿರ್ಮಲಾ, ಶಾಂತಮ್ಮ, ಮಲ್ಲಮ್ಮ, ಶರಣಮ್ಮ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ರಾಜಕಾರಣಿಗಳ ಓಲೈಸಬೇಡಿ, ಕಾನೂನು ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸಿ: ಕಾರ್ಯದರ್ಶಿಗಳಿಗೆ ಸಿಎಂ ತಾಕೀತು



ಬೆಂಗಳೂರು,ಮೇ.02-

ನೀವು ಕಾನೂನಿನ ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸಿ, ಸಚಿವರಿಗೆ ಕಾನೂನಿನ ವ್ಯಾಪ್ತಿಯೊಳಗೆ ಸಲಹೆಗಳನ್ನು ನೀಡಿ. ಸರ್ಕಾರಕ್ಕೆ ಒಳ್ಳೆಯ ಹೆಸರು ತರುವುದು ಕಾರ್ಯದರ್ಶಿಗಳ ಕಾರ್ಯ ಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ. ಆಡಳಿತಕ್ಕೆ ಇನ್ನಷ್ಟು ಚುರುಕು ಮೂಡಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

ಅವರು ಇಂದು ವಿಧಾನಸೌಧದ ಸಭಾಂಗಣದಲ್ಲಿ ನಡೆಸಿದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳ ಸಭೆಯಲ್ಲಿ ಸಲಹೆ, ಸೂಚನೆಗಳನ್ನು ನೀಡಿದರು. ರಾಜಕಾರಣಿಗಳನ್ನು ಓಲೈಕೆ ಮಾಡಲು ಅಧಿಕಾರಿಗಳು ಹೋಗಬಾರದು. ಇದು ಸರ್ವಾಧಿಕಾರಕ್ಕೆ ಹಾದಿ ಮಾಡುತ್ತದೆ ಎಂದು ಅಂಬೇಡ್ಕರ್ ಅವರು ಎಚ್ಚರಿಕೆ ನೀಡಿದ್ದರು ಎಂದು ತಿಳಿಸಿದರು. ರಾಜ್ಯದ ಆಡಳಿತ ಸಮರ್ಪಕವಾಗಿ ನಡೆಯಲು ಇಲಾಖಾ ಕಾರ್ಯದರ್ಶಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಇದನ್ನು ಸಂವಿಧಾನದಲ್ಲಿಯೇ ಉಲ್ಲೇಖಿಸಲಾಗಿದೆ. ಅಧಿಕಾರಿಗಳು ಯಾವತ್ತೂ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಬಾರದು ಹಾಗೂ ತಪ್ಪು ಹಾದಿಗೆ ಎಳೆಯಬಾರದು. ನಮ್ಮ ನಿಲುವುಗಳು, ತೀರ್ಮಾನಗಳು ಯಾವತ್ತೂ ಜನಪರವಾಗಿ ರಬೇಕು. ಅಧಿಕಾರಿಗಳು 30-35 ವರ್ಷಗಳ ಕಾಲ ಆಡಳಿತ ವ್ಯವಸ್ಥೆಯಲ್ಲಿದ್ದರೆ, ಜನಪ್ರತಿ ನಿಧಿಗಳು ಕೇವಲ 5 ವರ್ಷಗಳ ಕಾಲ ಮಾತ್ರ ಇರುತ್ತಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಧಿಕಾರಿಗಳ ಜವಾಬ್ದಾರಿ ಹೆಚ್ಚಾಗಿದೆ ಎಂದು ತಾಕೀತು ಮಾಡಿದರು.

ಬಜೆಟ್‌ನಲ್ಲಿ ಮಾಡಿರುವ ಘೋಷಣೆಗಳನ್ನು ಜಾರಿಗೊಳಿಸುವ ಕಾರ್ಯ ಅಧಿಕಾರಿಗಳದ್ದು. ಕಳೆದ ವರ್ಷದ ಬಜೆಟ್‌ನ 15 ಘೋಷಣೆಗಳ ಜಾರಿ ಇನ್ನೂ ಆಗಿಲ್ಲ. ಇದಕ್ಕೆ ಯಾರು ಹೊಣೆ?. ಈ ವರ್ಷದ ಬಜೆಟ್‌ನಲ್ಲಿ 218 ಹೊಸ ಘೋಷಣೆಗಳು ಸೇರಿದಂತೆ ಒಟ್ಟಾರೆ 565 ಘೋಷಣೆಗಳನ್ನು ಮಾಡಿದ್ದೇವೆ. ಬಜೆಟ್‌ನ ಎಲ್ಲಾ ಘೋಷಣೆಗಳನ್ನು ಅದೇ ವರ್ಷ ಜಾರಿಗೊಳಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಬಜೆಟ್ ಘೋಷಣೆಗಳು ಯಾವುದೇ ಕಾರಣಕ್ಕೂ ಅನುಷ್ಠಾನಗೊಳ್ಳದೆ ಇರಬಾರದು. ಅನುಷ್ಠಾನದಲ್ಲಿನ ಪ್ರಾಯೋಗಿಕ ತೊಡಕುಗಳನ್ನು ನೇರವಾಗಿ ನನ್ನ ಅಥವಾ ಮುಖ್ಯ ಕಾರ್ಯದರ್ಶಿಯವರ ಗಮನಕ್ಕೆ ತರಬೇಕು ಎಂದು ಸೂಚಿಸಿದರು.

ಕಾರ್ಯದರ್ಶಿಗಳೇ ಹೊಣೆಗಾರರು: 2026-27ನೇ ಬಜೆಟ್‌ನಲ್ಲಿನ ಘೋಷಣೆಗಳ ಪೈಕಿ ಕೇವಲ 5 ಘೋಷಣೆಗಳ ಬಗ್ಗೆ ಮಾತ್ರ ಸರ್ಕಾರಿ ಆದೇಶ ಮಾಡಲಾಗಿದೆ. ಮೇ ತಿಂಗಳ ಒಳಗಾಗಿ ಎಲ್ಲಾ ಸರ್ಕಾರಿ ಆದೇಶಗಳನ್ನು ಜಾರಿಗೊಳಿಸಿ, ಅನುಷ್ಠಾನ ಕಾರ್ಯ ಆರಂಭಿಸಬೇಕು. ಇಲ್ಲದಿದ್ದರೆ ಆಯಾ ಕಾರ್ಯದರ್ಶಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅಧಿಕಾರಕ್ಕೆ ಬಂದ ಬಳಿಕ ರಾಜ್ಯಮಟ್ಟದಲ್ಲಿ ಎರಡು ಜನಸ್ಪಂದನ ಸಭೆಯಲ್ಲಿ ಸ್ವೀಕರಿಸಲಾಗಿದ್ದ 15,334 ಸ್ವೀಕೃತಿಗಳ ಪೈಕಿ 15,295 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿಯಿರುವ 45 ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಸಾರ್ವಜನಿಕ ಕುಂದುಕೊರತೆ ()ಯಡಿ 3,27,052 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, 3,17,576 ವಿಲೇವಾರಿ ಮಾಡಲಾಗಿದೆ. 1828 ಅರ್ಜಿಗಳ ವಿಲೇವಾರಿ ನಿಗದಿತ ಕಾಲಾವಧಿ ಮುಗಿದಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡದಿದ್ದರೆ ಜನರಿಗೆ ಸರ್ಕಾರದ ಮೇಲಿನ ನಂಬಿಕೆಯೇ ಹೊರಟು ಹೋಗುತ್ತದೆ. ಇದಕ್ಕೆ ಅವಕಾಶ ಮಾಡಬಾರದು. ಇದೇ ರೀತಿ ಸಕಾಲ ಅಡಿ ಸ್ವೀಕರಿಸಲಾಗುವ ಅರ್ಜಿಗಳನ್ನು ಸಹ ಸಕಾಲದಲ್ಲಿಯೇ ವಿಲೇವಾರಿ ಮಾಡಬೇಕು ಎಂದು ಸಿಎಂ ತಿಳಿಸಿದರು.

ಮಂಜೂರಾತಿ ನೀಡಲಾಗಿರುವ ಹುದ್ದೆಗಳ ಭರ್ತಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು. ಆರ್ಥಿಕ ಇಲಾಖೆಯಿಂದ 24,300 ಹುದ್ದೆಗಳ ಭರ್ತಿಗೆ ಮಂಜೂರಾತಿ ನೀಡಲಾಗಿದೆ. ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದ ವೃಂದದಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗದೇ ಬಾಕಿಯಿರುವ 32,132 ಹುದ್ದೆಗಳಿವೆ. ಕೆಲವು ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ ಪರಿಷ್ಕರಣೆ ಬಾಕಿಯಿದ್ದು, ಇದನ್ನು ಆದಷ್ಟು ಬೇಗನೆ ಮುಗಿಸಬೇಕು ಎಂದು ಸೂಚಿಸಿದರು.

ಕೇಂದ್ರದಿಂದ 11,367 ಕೋಟಿ ಬಾಕಿ: ವಿವಿಧ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಡಿಯಲ್ಲಿ 2025-26 ನೇ ಸಾಲಿನಲ್ಲಿ ರಾಜ್ಯ ಸರ್ಕಾರ ತನ್ನ ಪಾಲಿನ ರೂ. 22,768 ಕೋಟಿ ಬಿಡುಗಡೆ ಮಾಡಿದ್ದು, ಕೇಂದ್ರ ಸರ್ಕಾರ ರೂ. 16,729 ಕೋಟಿ ಬಿಡುಗಡೆ ಮಾಡಿದೆ. ಕೇಂದ್ರದಿಂದ ರೂ.11,367 ಕೋಟಿ ಅನುದಾನ ಬಿಡುಗಡೆಗೆ ಬಾಕಿಯಿದೆ. ಈ ಅವಧಿಯಲ್ಲಿ ಒಟ್ಟಾರೆ ರೂ.42,222 ಕೋಟಿ ಲಭ್ಯ ಅನುದಾನವಿದ್ದು, ರೂ.38,236 ಕೋಟಿ ವೆಚ್ಚ ಮಾಡಲಾಗಿದೆ. ಅನುದಾನವನ್ನು ನಿಗದಿತ ಅವಧಿಯ ಒಳಗಾಗಿ ಖರ್ಚು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ರೂ.2 ಕೋಟಿವರೆಗೆ ಮೀಸಲಾತಿ ಕಲ್ಪಿಸಲಾಗಿದೆ. ವಿವಿಧ ಕಾಮಗಾರಿಗಳನ್ನು ಒಟ್ಟು ಸೇರಿಸಿ ಪ್ಯಾಕೇಜ್ ಮಾಡುವ ಮೂಲಕ ಮೀಸಲಾತಿ ತಪ್ಪಿಸಲು ಅವಕಾಶ ನೀಡಬಾರದು. ಎಲ್ಲಾ ಕಾಮಗಾರಿಗಳನ್ನು ನಿಗದಿತ ಅವಧಿಯ ಒಳಗಾಗಿ ಪೂರ್ಣಗೊಳಿಸಬೇಕು. ಕಾಮಗಾರಿ ವಿಳಂಬದಿಂದ ನಿರ್ಮಾಣ ವೆಚ್ಚ ಹೆಚ್ಚಳಕ್ಕೆ ಅವಕಾಶ ಮಾಡಬಾರದು ಎಂದು ಸೂಚಿಸಿದರು.

ಈ ವರ್ಷ ಶೇ.5ರಷ್ಟು ಮಳೆ ಕಡಿಮೆ ಯಾಗುವ ಸಾಧ್ಯತೆಯಿದ್ದು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಯ ಜಿಲ್ಲೆಯಲ್ಲಿನ ಕುಡಿಯುವ ನೀರಿನ ಪರಿಸ್ಥಿತಿ ಬಗ್ಗೆ ನಿರಂತರ ನಿಗಾ ವಹಿಸಬೇಕು. ಈ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಜೊತೆ ಸಭೆ ನಡೆಸಬೇಕು. ತಮ್ಮ ಉಸ್ತುವಾರಿಯಲ್ಲಿನ ಜಿಲ್ಲೆಯ ಸಮಸ್ಯೆಗಳನ್ನು ಬಗೆಹರಿಸುವುದು ಆಯಾ ಕಾರ್ಯದರ್ಶಿಗಳ ಜವಾಬ್ದಾರಿಯಾಗಿದೆ. ಯಾವುದೇ ಕಾರಣಕ್ಕೂ ಕುಡಿಯುವ ನೀರಿಗೆ ತೊಂದರೆಯಾಗಬಾರದು ಎಂದು ಸಿಎಂ ಸೂಚಿಸಿದರು.

ಮಲ್ಲಿಕಾರ್ಜುನ ಖರ್ಗೆಯವರ ಮಾತನ್ನು ಗಮನಿಸಿದರೆ ರಾಜ್ಯದಲ್ಲಿ ಸಿಎಂ ಬದಲಾವಣೆ ಆಗಬಹುದು: ಬಿ. ವೈ. ವಿಜಯೇಂದ್ರ



ಮೈಸೂರು,ಮೇ.02-

ಮಲ್ಲಿಕಾರ್ಜುನ ಖರ್ಗೆಯವರ ಮಾತನ್ನು ಗಮನಿಸಿದರೆ ರಾಜ್ಯದಲ್ಲಿ ಸಿಎಂ ಬದಲಾವಣೆ ಆಗಬಹುದು ಅನಿಸುತ್ತದೆ. ಆದರೆ, ಕೆಲವರು ಖರ್ಗೆ ಸಿಎಂ ಆಗಲಿ ಎನ್ನುತ್ತಾರೆ, ಮತ್ತೆ ಕೆಲವರು ಡಿ. ಕೆ. ಶಿವಕುಮಾರ್ ಮೇ 15ಕ್ಕೆ ಸಿಎಂ ಆಗುತ್ತಾರೆ ಎನ್ನುತ್ತಾರೆ. ನೋಡೋಣ ಎಂದು ಬಿ. ವೈ. ವಿಜಯೇಂದ್ರ ಹೇಳಿದರು.

ಇಂದು ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಸೂತ್ತೂರು ಮಠಕ್ಕೆ ಭೇಟಿ ನೀಡಿ, ಶ್ರೀಗಳ ಆಶೀರ್ವಾದ ಪಡೆದ ವಿಜಯೇಂದ್ರ ಅವರು ಮಾಧ್ಯಮದವರ ಜೊತೆ ಮಾತನಾಡಿದರು.

ಕಾರ್ಯಕ್ರಮಕ್ಕೆ ಶ್ರೀಗಳು ಬರಲು ಒಪ್ಪಿದ್ದಾರೆ : ಸ್ವಾಮೀಜಿಯನ್ನು ಭೇಟಿ ಮಾಡಿ, ಮೇ 9 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪ ಅವರ 50 ವರ್ಷದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದ್ದೇವೆ. ಕಾರ್ಯಕ್ರಮಕ್ಕೆ ಬರಲು ಸ್ವಾಮೀಜಿ ಒಪ್ಪಿದ್ದಾರೆ. ಮೇ 8 ರಂದು ಯಡಿಯೂರಪ್ಪ ಚಿತ್ರದುರ್ಗದ ಪುರ ಪ್ರವೇಶ ಮಾಡ್ತಾರೆ. ಅದ್ದೂರಿಯಾಗಿ ಅವರಿಗೆ ಸ್ವಾಗತ ಕೋರುತ್ತೇವೆ. 9 ರಂದು ಅಮಿತ್ ಶಾ ವೇದಿಕೆ ಕಾರ್ಯಕ್ರಮಕ್ಕೆ ಆಗಮಿಸುತ್ತಾರೆ. ನಾಡಿನ ರೈತರು, ಮಹಿಳೆಯರು, ಸ್ವಾಮೀಜಿಗಳು ಎಲ್ಲರೂ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಾರೆ. 10 ಲಕ್ಷ ಜನ ಸೇರುವ ಐತಿಹಾಸಿಕ ಕಾರ್ಯಕ್ರಮ ಇದಾಗಲಿದೆ. ಕಾರ್ಯಕ್ರಮಕ್ಕಾಗಿ ಯಡಿಯೂರಪ್ಪ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಮಿನಿ ದಸರಾ ಮಾದರಿಯಲ್ಲಿ ಕಾರ್ಯಕ್ರಮ ಮಾಡುತ್ತೇವೆ ಎಂದು ಹೇಳಿದರು.

ವಿಜಯೇಂದ್ರ ಬೂಸ್ಟ್ ಕಾರ್ಯಕ್ರಮ ಅಲ್ಲ : ಚುನಾವಣೆ ಸಮೀಪ ಕಾರ್ಯಕ್ರಮ ಆಯೋಜನೆ ಮಾಡಿದ್ರೆ, ವಿಜಯೇಂದ್ರ ಅಥವಾ ಬಿಜೆಪಿಗೆ ಬೂಸ್ಟ್ ಆಗುತ್ತಿತ್ತು. ಈಗ ಯಾವುದೇ ಚುನಾವಣೆ ಇಲ್ಲ, ಇದು ಯಡಿಯೂರಪ್ಪ ಅವರಿಗೆ ಕೃತಜ್ಞತೆ ಸಲ್ಲಿಸುವ ಕಾರ್ಯಕ್ರಮ. ಈ ರಾಜ್ಯದಲ್ಲಿ ಅನೇಕರು ಅದೃಷ್ಟದ ಸಿಎಂ ಆಗಿದ್ದಾರೆ. ಆದ್ರೆ, ಯಡಿಯೂರಪ್ಪ ಅದೃಷ್ಟದ ಸಿಎಂ ಅಲ್ಲ. ಜನರಿಂದ ಜನರಿಗಾಗಿ ಜನರಿಗೋಸ್ಕರ ಇದ್ದವರು. ಅದಕ್ಕಾಗಿ ಕಾರ್ಯಕ್ರಮ ಮಾಡುತ್ತಿದ್ದೇವೆ. ಗೋವಿಂದ ಕಾರಜೋಳ ಅವರ ಅಪೇಕ್ಷೆಯಂತೆ ಚಿತ್ರದುರ್ಗದಲ್ಲಿ ಮಾಡುತ್ತಿದ್ದೇವೆ ಎಂದು ಹೇಳಿದರು.

ಉಪಚುನಾವಣೆ ಫಲಿತಾಂಶ ಕಾಂಗ್ರೆಸ್‌ಗೆ ಪಾಠವಾಗಲಿದೆ : ಎರಡು ಕ್ಷೇತ್ರಗಳಲ್ಲಿ ಬೈ ಎಲೆಕ್ಷನ್ ಗೆಲ್ಲುವ ವಿಶ್ವಾಸ ಇಲ್ಲ ಅಂತ ಕಾಂಗ್ರೆಸ್ ಮುಖಂಡರೇ ನನಗೆ ಹೇಳಿದ್ದಾರೆ. ಫಲಿತಾಂಶ ಬಂದ ಮೇಲೆ ರಾಜ್ಯದ ಸಿಎಂ ಹಾಗೂ ಕಾಂಗ್ರೆಸ್‌ಗೆ ಪಾಠವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು. ಮೈಸೂರು ಪಂಜಾಬ್ ಆಗಿದೆ, ಡ್ರಗ್ಸ್ ಹಾವಳಿ ಜಾಸ್ತಿಯಾಗಿದೆ. ಕಾಂಗ್ರೆಸ್ ಸರ್ಕಾರ ಮನುಷ್ಯತ್ವ ಇಲ್ಲದ ಸರ್ಕಾರ. ಮೈಸೂರಿನಲ್ಲಿ 3 ವರ್ಷದಿಂದ ಒಂದೇ ಒಂದು ಅಭಿವೃದ್ಧಿ ಆಗಿಲ್ಲ. ರಾಜ್ಯದ ಅಭಿವೃದ್ಧಿಗೆ ಕಾಂಗ್ರೆಸ್ ಮನಸ್ಸು ಮಾಡಿಲ್ಲ. ಭ್ರಷ್ಟಾಚಾರ ತಾಂಡವವಾಡುತ್ತಿದೆ. ಕೇವಲ ಕುರ್ಚಿ ಉಳಿಸಿಕೊಳ್ಳುವ ಹಪಾಹಪಿ ಅಷ್ಟೇ ಕಾಣಿಸುತ್ತಿದೆ. ದೆಹಲಿಗೆ ಒಬ್ಬರ ಹಿಂದೆ ಒಬ್ಬರು ಹೋಗ್ತಿದ್ದಾರೆ ಎಂದು ವಿಜಯೇಂದ್ರ ಟೀಕಿಸಿದರು.

ಕಿಲ್ಲೇಶ್ರೀಗಳ 57ನೇ ಜನ್ಮ ದಿನಾಚರಣೆ, 31ನೇ ವರ್ಷದ ಪಟ್ಟಾಧಿಕಾರ ವರ್ಧಂತಿ ಮಹೋತ್ಸವ

ಮಾಜಿ ಸಚಿವರಿಂದ ಶ್ರೀಗಳಿಗೆ ಗೌರವ ಸನ್ಮಾನ





ರಾಯಚೂರು,ಮೇ.01

ನಗರದ ಸಾವಿರ ದೇವರ ಸಂಸ್ಥಾನ ಕಿಲ್ಲೇಬೃಹನ್ಮಠದ ಪೂಜ್ಯಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿಯವರ 57ನೇ ವರ್ಷದ ಜನ್ಮ ದಿನಾಚರಣೆ ಹಾಗೂ 31ನೇ ವರ್ಷದ ಪಟ್ಟಾಧಿಕಾರ ವರ್ಧಂತಿ ಮಹೋತ್ಸವವನ್ನು ಅಮೇರಿಕದ ವೈಟ್ ಹೌಸ್ ನಂತೆ ಬಿಂಬಿಸುವ ರಾಯಚೂರು ಜಿಲ್ಲೆಯ ವೈಟ್ ಹೌಸ್ ಎಂದೇ ಪ್ರಸಿದ್ಧ ಪಡೆದ ಶ್ರೀಮಠದ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ನಗರದ ಹಿರಿಯ ಜ್ಯೋತಿಷ್ಯ ಶಾಸ್ತ್ರಿಗಳಾದ ವೇ.ಮೂ. ಪಂಪಾಪತಿ ನಾಡಂಗಮಠ, ದೇವದುರ್ಗ ಕ್ಷೇತ್ರದ ಮಾಜಿ ಶಾಸಕರು ಸಚಿವರಾದ ಕೆ. ಶಿವನಗೌಡ ನಾಯಕ, ಮಾಜಿ ಶಾಸಕರಾದ

ಬ್ಯಾಗವಾಟ ಬಸನಗೌಡ, ರಾಯಚೂರು ಗ್ರಾಮಾಂತರ ಮಾಜಿ ಶಾಸಕರಾದ ತಿಪ್ಪರಾಜ ಹವಾಲ್ದಾರ, ಎಸ್.ಎಲ್. ಕೇಶವರೆಡ್ಡಿ, ತ್ರಿವಿಕ್ರಮ ಜ್ಯೋಷಿ, ಜಿ. ಶಿವಕುಮಾರ, ಕೆ. ಶಾಂತಪ್ಪ, ಬಿ.ಜೆ.ಪಿ. ಮುಖಂಡ ನರಸಪ್ಪ ಯಕ್ಲಾಸಪೂರ, ಅ.ಭಾ.ವೀ.ಲಿಂ. ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಪಾಟೀಲ ಮಿರ್ಜಾಪೂರ, ನಗರದ ಹಿರಿಯ ವೈದ್ಯರಾದ ಡಾ. ನಿಜಗುಣ ಶಿವಯೋಗಪ್ಪ, ಸಹಕಾರ ಕ್ಷೇತ್ರದ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ಶಾವಂತಗೇರಿ ಹಾಗೂ ಇನ್ನಿತರ ಗಣ್ಯರ ಸಮ್ಮುಖದಲ್ಲಿ 3157 ಎಂಬ ಪುಷ್ಪ ಮತ್ತು ಪ್ರಣತಿಗಳಿಂದ ಅಲಂಕಾರಗೊಳಿಸಿದ ಕೇಕ್ ನಲ್ಲಿ ದೀಪವನ್ನು ಪ್ರಜ್ವಲಿಸುವ ಮೂಲಕ ತಮ್ಮ ಜನ್ಮ ದಿನಾಚರಣೆಯನ್ನು ಆಚರಿಸಿಕೊಂಡರು.

ನಂತರ ಶ್ರೀಮಠದ ನೂರಾರು ಸದ್ಭಕ್ತರು ಶ್ರೀಮಠದ ಶ್ರೀಗಳಿಗೆ ಸನ್ಮಾನಿಸಿ ಜನ್ಮ ದಿನದ ಹಾಗೂ ಪಟ್ಟಾಧಿಕಾರ ಮಹೋತ್ಸವದ ಹಾರ್ದಿಕ ಶುಭಾಶಯಗಳನ್ನು ತಿಳಿಸಿ ಶ್ರೀಗಳಿಂದ ಶುಭಾಶೀರ್ವಾದ ಪಡೆದರು.

ನಂತರ ಶ್ರೀಮಠದ ಹೊರ ಆವರಣದಲ್ಲಿ ಸರ್ವ ಸದ್ಭಕ್ತರಿಗೆ ಅಲ್ಪ ಉಪಹಾರ ಪ್ರಸಾದವನ್ನು ಏರ್ಪಡಿಸಲಾಗಿತ್ತು, ನೂರಾರು ಸದ್ಭಕ್ತರು ಪ್ರಸಾದವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಶ್ರೀಮಠದ ಕಾರ್ಯದರ್ಶಿ ವೇ.ಮೂ. ರೇಣುಕರಾಧ್ಯಯ್ಯ ಸ್ವಾಮಿ, ವೇ.ಮೂ. ವೀರ ಸೋಮೇಶ್ವರ ಪ್ರಸಾದ, ಶರಣಯ್ಯ ಸ್ವಾಮಿ ಜಾಗೀರ ವೆಂಕಟಾಪೂರ, ಬಸವರಾಜ ಶಾಸ್ತ್ರಿ ಮನ್ಸಲಾಪೂರ, ಸೋಮವಾರಪೇಟೆ ಹಿರೇಮಠದ ಸರ್ವ ಸದ್ಭಕ್ತರು, ತಾಲೂಕಾ ಬೇಡ ಜಂಗಮ ಸಮಾಜದ ಸರ್ವ ಪದಾಧಿಕಾರಿಗಳು, ವೀರಶೈವ ಜಂಗಮ ಪುರೋಹಿತ ಅರ್ಚಕರ ಸಂಘದ ಸರ್ವ ಪದಾಧಿಕಾರಿಗಳು, ಬಿ.ಜೆ.ಪಿ. ಕಾಂಗ್ರೆಸ್, ಜೆಡಿಎಸ್. ಪಕ್ಷಗಳ ಸರ್ವ ಮುಖಂಡರುಗಳು, ಇಸ್ಲಾಂ ಧರ್ಮದ ರಾಜಕೀಯ ಮುಖಂಡರು, ಮಡಿವಾಳ ಸಮುದಾಯದ ಸರ್ವ ಮುಖಂಡರು, ಮಮದಾಪೂರ, ಅರೋಲಿ, ಮಟಮಾರಿ, ಹಟ್ಟಿ, ದೇವದುರ್ಗಾ, ಮಾನ್ವಿ, ಪಿಕಳಿಹಾಳ ಹಾಗೂ ಇನ್ನುಳಿದ ಅನೇಕ ಸಮುದಾಯಗಳ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಕರ್ನಾಟಕ ಮಹಿಳಾ ಕ್ರಿಕೆಟ್ ಸಾಗಬೇಕಾದ ಹಾದಿ ಯಾವುದು? ಕೆಎಸ್‌ಸಿಎ ತೋರಿಸಬೇಕಿದೆ ದಿಕ್ಕು

ಭಾರತ ಕ್ರಿಕೆಟ್ ತಂಡದ ಮಾಜಿ ವೇಗಿ ವೆಂಕಟೇಶ್ ಪ್ರಸಾದ್ ನೇತೃತ್ವದ ನೂತನ ಪದಾಧಿಕಾರಿಗಳ ತಂಡ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ನ ಆಡಳಿತ ಚುಕ್ಕಾಣಿಯನ್ನು ಹಿಡಿದಿದೆ. ಅವರ ಮುಂದೆ ಬೆಟ್ಟದಷ್ಟು ಸವಾಲುಗಳಿವೆ. ಕೆ.ಎಸ್.ಸಿ.ಎ ಲೀಗ್ ಕ್ರಿಕೆಟ್ ಟೂರ್ನಿಗಳನ್ನು ನಡೆಸುವುದರ ಜೊತೆಗೆ ಪ್ರತಿಭಾವಂತ ಆಟಗಾರರಿಗೆ ಸೂಕ್ತ ಅವಕಾಶಗಳನ್ನು ಒದಗಿಸಬೇಕಿದೆ. ಅದರಲ್ಲೂ ಸಮಕಾಲೀನ ಸಂದರ್ಭದಲ್ಲಿ ಮಹಿಳಾ ಕ್ರಿಕೆಟಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಹಾಕಿಕೊಳ್ಳಬೇಕಿದೆ.

ಭಾರತದಲ್ಲಿ ಕ್ರಿಕೆಟ್ ತನ್ನ ಆರಂಭದ ದಿನಗಳಿಂದ ಇಪ್ಪತ್ತನೇ ಶತಮಾನದ ಕೊನೆಯವರೆಗೂ, ಕ್ರಿಕೆಟ್ ಅಭಿಮಾನಿಗಳಿಂದ ಪುರುಷ ಕ್ರಿಕೆಟ್ ಆಟಗಾರರಿಗೆ ಗೌರವಾದರಗಳನ್ನು ದೊರಕಿಸಿಕೊಡುತ್ತಿತ್ತು. ಕಪಿಲ್ ದೇವ್, ಗವಾಸ್ಕರ್, ಕಿರ್ಮಾನಿ, ಅಜರುದ್ದೀನ್, ದ್ರಾವಿಡ್, ಲಕ್ಷ್ಮಣ್, ಸಚಿನ್ ತೆಂಡೂಲ್ಕರ್ ಅಂತಹ ಮಹಾನ್ ಆಟಗಾರರ ಹೆಸರು ದೇಶದ ಮೂಲೆಮೂಲೆಗಳಲ್ಲೂ ಕೇಳಿ ಬರುತ್ತಿತ್ತು. ಸಮೂಹ ಮಾಧ್ಯಮಗಳಲ್ಲಿ ಬರುತ್ತಿದ್ದ ಜಾಹೀರಾತುಗಳಲ್ಲಿಯೂ ಅವರೇ ಕಾಣಿಸಿಕೊಳ್ಳುತ್ತಿದ್ದರು. ಪುರುಷ ಕ್ರಿಕೆಟ್ ಹೆಚ್ಚು ಪ್ರಚಲಿತವಿದ್ದ ಸಂದರ್ಭದಲ್ಲಿ ಮಹಿಳಾ ಕ್ರಿಕೆಟ್ ನಗಣ್ಯವಾಗಿತ್ತು. ಒಬ್ಬ ಮಹಿಳಾ ಆಟಗಾರ್ತಿಯ ಹೆಸರು ಯಾರಿಗೂ ಗೊತ್ತಿರಲಿಲ್ಲ. ಎಷ್ಟೇ ಆದರೂ ಭಾರತ ಪುರುಷ ಪ್ರಧಾನ ಸಮಾಜ ಹೊಂದಿರುವಂತಹ ರಾಷ್ಟ್ರ. ಮಹಿಳೆಯರು ನಾಲ್ಕು ಗೋಡೆಗಳ ಮಧ್ಯೆ ಕೆಲಸ ಮಾಡಿಕೊಂಡಿರಬೇಕೆಂದು ಅವರಿಗೆ ನಿರ್ಬಂಧತೆಯ ಸೆರೆಮನೆಯಲ್ಲಿ ಇಡಲಾಗಿತ್ತು. ಹಾಗೆ ನೋಡಿದರೆ ಹನ್ನೆರಡನೇ ಶತಮಾನದಲ್ಲಿ ಅಕ್ಕ ಮಹಾದೇವಿ ಮೊದಲ ಬಾರಿಗೆ ಸಮಾಜ ಹಾಕಿದ ಬೇಡಿಯನ್ನು ಕಳಚಿಟ್ಟು ನಿರ್ವಸ್ತ್ರಳಾಗಿ ತನ್ನ ದಾರಿಯನ್ನು ಹುಡುಕುತ್ತಾ ಹೊರಟವಳು. ಅಲ್ಲಿಂದ ಇಲ್ಲಿಯವರೆಗಿನ ಮಹಿಳೆಯರ ಬದುಕಿನ ಸಂಘರ್ಷ ನಿರಂತರವಾಗಿ ಸಾಗಿದೆ. ಇದರ ಮಧ್ಯೆ ಇಪ್ಪತ್ತೊಂದನೇ ಶತಮಾನದಲ್ಲಿ ಜಾಗತೀಕರಣ, ಆಧುನೀಕರಣದ ಹಿನ್ನೆಲೆಯಲ್ಲಿ ಸ್ತ್ರೀಯರು ಎಲ್ಲಾ ಕ್ಷೇತ್ರಗಳಲ್ಲಿಯೂ ಕಾಣಿಸಿಕೊಳ್ಳುತ್ತಿರುವುದು ಸಕಾರಾತ್ಮಕ ಅಂಶವಾಗಿದೆ.



ಆದರೆ ಮುಖ್ಯವಾಗಿ ತಮ್ಮ ದೈಹಿಕ ಸಾಮರ್ಥ್ಯವನ್ನು ಪರೀಕ್ಷೆ ಮಾಡುವ ಕ್ರೀಡೆಗಳಲ್ಲಿ ಅದರಲ್ಲೂ ಹೆಚ್ಚು ಜನಪ್ರಿಯವಾಗುತ್ತಿರುವ ಕ್ರಿಕೆಟ್‌ನಲ್ಲಿ, ಮಹಿಳೆಯರ ಪಾಲ್ಗೊಳ್ಳುವಿಕೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಬೇಕು. ಒಂದು ಸಮಾಧಾನಕರ ಸಂಗತಿಯೆಂದರೆ 1970ರ ದಶಕದಲ್ಲಿ ಆರಂಭವಾದ ನಮ್ಮ ದೇಶದ ಮಹಿಳಾ ಕ್ರಿಕೆಟ್ ತಂಡ, ಸಂಘರ್ಷ, ಅನಾದರಗಳ ಮಧ್ಯೆ ಹೋರಾಡಿ ಮೇಲೆ ಬಂದಿದೆ. ಅದಕ್ಕೆ ಇತ್ತೀಚೆಗೆ ಗೌರವಾದರಗಳು ಸಿಗುತ್ತಿವೆ. ಮಿಥಾಲಿ ರಾಜ್ ರಿಂದ ಹಿಡಿದು ಹರ್ಮನ್ ಪ್ರೀತ್ ಕೌರ್, ಸ್ಮೃತಿ ಮಂಧಾನ, ಜೆಮಿಮಾ ರೋಡ್ರಿಗಸ್, ದೀಪ್ತಿ ಶರ್ಮಾ, ಶಫಾಲಿ ವರ್ಮಾವರೆಗೂ ಎಲ್ಲರಿಗೂ ಕ್ರಿಕೆಟ್, ಹೆಸರು ಮತ್ತು ಹಣ ತಂದುಕೊಟ್ಟಿದೆ. ಕ್ರಿಕೆಟ್ ಅಭಿಮಾನಿಗಳು ಅವರ ಹೆಸರು ಹೇಳುವಷ್ಟರ ಮಟ್ಟಿಗೆ ಚಿರಪರಿಚಿತರಾಗಿದ್ದಾರೆ. ಅಷ್ಟೇ ಅಲ್ಲದೇ ವಿರಾಟ್ ಕೊಹ್ಲಿ ಪಡೆದುಕೊಳ್ಳುತ್ತಿರುವ ವೇತನದಷ್ಟೇ ಸ್ಮೃತಿ ಮಂಧಾನಗೆ ಲಭಿಸುತ್ತಿದೆ.

ಭಾರತ ಮಹಿಳಾ ಕ್ರಿಕೆಟ್ ತಂಡದಂತೆ ಕರ್ನಾಟಕ ಕ್ರಿಕೆಟ್ ತಂಡವು 1970ರ ಮಧ್ಯಭಾಗದಲ್ಲಿ ರೂಪುಗೊಳ್ಳಲು ಪ್ರಾರಂಭಿಸಿತು. 1976ರಲ್ಲಿ ಭಾರತವನ್ನು ತಮ್ಮ ಮೊದಲ ಟೆಸ್ಟ್‌ನಲ್ಲಿ ಮುನ್ನಡೆಸಿದ ಶಾಂತಾ ರಂಗಸ್ವಾಮಿಯಂತಹವರು ಮುಂಚೂಣಿಯಲ್ಲಿ ನಿಂತು ಇದನ್ನು ಪ್ರವರ್ತಿಸಿದರು. ಅಲ್ಲಿಂದ ಇಲ್ಲಿಯವರೆಗೆ ಕರ್ನಾಟಕ ಮಹಿಳಾ ತಂಡ ರಾಷ್ಟ್ರೀಯ ಮಟ್ಟದಲ್ಲಿ ಪಂದ್ಯಾವಳಿಗಳಲ್ಲಿ ಭಾಗವಹಿಸಿಕೊಂಡೇ ಬಂದಿದೆ. ಕರ್ನಾಟಕದಲ್ಲಿ 15 ವರ್ಷದೊಳಗಿನ ಮಹಿಳೆಯರ 19 ವರ್ಷದೊಳಗಿನ ಮಹಿಳೆಯರ ಹಾಗೂ ಹಿರಿಯ ಮಹಿಳೆಯರ ಕ್ರಿಕೆಟ್ ತಂಡ. ಈ ಮೂರು ಬಗೆಯ ತಂಡಗಳಿಗಾಗಿ ಮಾತ್ರ ಕೆ.ಎಸ್.ಸಿ.ಎ ಆಯ್ಕೆ ಪ್ರಕ್ರಿಯೆಯನ್ನು ಕೈಗೊಂಡಿರುತ್ತದೆ. ಮಹಿಳೆಯರು ಈ ಮೂರು ಮಾದರಿಯಲ್ಲಿ ರಾಜ್ಯವನ್ನು ಪ್ರತಿನಿಧಿಸುವ ಮುಂಚೆ, ಕೆ.ಎಸ್.ಸಿ.ಎ ಅಡಿಯಲ್ಲಿ ಬರುವ ಯಾವುದಾದರೂ ಒಂದು ಕ್ಲಬ್ ಪರವಾಗಿ ಆಡಿ ತಮ್ಮ ಅಮೋಘ ಆಟದ ಮೂಲಕ ಗಮನ ಸೆಳೆದಿರಬೇಕು. ಆಗ ಮಾತ್ರ ರಾಜ್ಯ 15, 19 ಹಾಗೂ ಸೀನಿಯರ್ ತಂಡಕ್ಕೆ ಆಯ್ಕೆಯಾಗಬಹುದು.

ಇತ್ತೀಚೆಗೆ ಕ್ರಿಕೆಟ್ ಕ್ಲಬ್‌ಗಳು ಕೂಡ ಮಹಿಳಾ ಕ್ರಿಕೆಟ್‌ಗೆ ಪ್ರಾಶಸ್ತ್ಯವನ್ನು ನೀಡುತ್ತಿವೆ. ಆಯ್ಕೆ ಟ್ರಯಲ್ಸ್ ಗಳನ್ನು ಹಮ್ಮಿಕೊಂಡು ಉಚಿತವಾಗಿ ಅವರಿಗೆ ತರಬೇತಿ ಹಾಗೂ ಅಭ್ಯಾಸ ಪಂದ್ಯಗಳನ್ನು ಆಡಿಸುತ್ತಿವೆ. ಬ್ರಿಜೇಶ್ ಪಟೇಲ್ ಕ್ರಿಕೆಟ್ ಅಕಾಡೆಮಿ, ಸಿಕ್ಸ್ ಕ್ರಿಕೆಟ್, ಜಸ್ಟ್ ಕ್ರಿಕೆಟ್, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕ್ರಿಕೆಟ್, ಸಂಪ್ರಸಿದ್ಧಿ, ರಾಮ್ ಸ್ಪೋರ್ಟ್ಸ್, ಎಸ್.ಎಲ್.ಎಸ್. ಕ್ರಿಕೆಟ್ ಅಕಾಡೆಮಿ, ಕವರ್ ಡ್ರೈವ್ ಮುಂತಾದವು. ಆದರೆ ಅದಕ್ಕೆ ಪ್ರತಿಕ್ರಿಯೆ ನಿರಾಶಾದಾಯಕ. ಬಹಳ ಕಡಿಮೆ ಹುಡುಗಿಯರು ಈ ಅವಕಾಶವನ್ನು ಬಳಸಿಕೊಳ್ಳುತ್ತಿದ್ದಾರೆ. ಕೆ.ಎಸ್.ಸಿ.ಎ ಅಡಿ ಬರುವ ಎಲ್ಲಾ ಕ್ರಿಕೆಟ್ ಕ್ಲಬ್‌ಗಳು ಮಹಿಳಾ ಕ್ರಿಕೆಟ್ ತಂಡಗಳನ್ನು ಕಟ್ಟಲು ಸಾಧ್ಯವಾಗಿಲ್ಲ. ಅಷ್ಟು ಮಹಿಳಾ ಆಟಗಾರ್ತಿಯರು ಸಿಗುತ್ತಿಲ್ಲ.

ಕೆಲವು ಕ್ಲಬ್‌ಗಳಲ್ಲಿ ಒಂದಿಬ್ಬರು ಹುಡುಗಿಯರು ಕಲಿಯಲು ಬರುತ್ತಿರುವುದಾದರೂ, ಹುಡುಗರ ಜೊತೆ ಆಡಬೇಕಾದ ಅನಿವಾರ್ಯತೆಯಿಂದ ಕೆಲಕಾಲ ಆಡಿ ಕ್ರಿಕೆಟ್ ನಿಲ್ಲಿಸುವ ಸಾಧ್ಯತೆಗಳು ನಿಚ್ಚಳವಾಗಿರುತ್ತವೆ. ಬೇರೆ ಕ್ಲಬ್‌ಗಳು ಅವರು ವಾಸವಿರುವ ಜಾಗದಿಂದ ಬಹಳ ದೂರದಲ್ಲಿರುವುದರಿಂದ ಶಿಕ್ಷಣದ ಜೊತೆಗೆ ಅದನ್ನು ಸರಿದೂರಿಸಲು ಸಾಧ್ಯವಾಗುವುದಿಲ್ಲ. ಹಾಗಾಗಿ ಮಹಿಳಾ ಕ್ರಿಕೆಟ್ ಸ್ಪರ್ಧೆ ಹೇಳಿಕೊಳ್ಳುವಂತಿಲ್ಲ. ನಮ್ಮ ನಾಡಿನ ಮಹಿಳೆಯರಿಗೆ ಈಗಾಗಲೇ ಭಾರತ ತಂಡವನ್ನು ಪ್ರತಿನಿಧಿಸಿರುವ ನಮ್ಮವರೇ ಆದ ಶಾಂತಾ ರಂಗಸ್ವಾಮಿ, ವೇದ ಕೃಷ್ಣಮೂರ್ತಿ, ರಾಜೇಶ್ವರಿ ಗಾಯಕ್ವಾಡ್, ವೆಲ್ಲಾಸ್ವಾಮಿ ವನಿತಾ, ಕರುಣಾ ಜೈನ್, ಮಮತಾ ಮಬೇನ್, ಇತ್ತೀಚೆಗೆ ಹೆಸರು ಮಾಡುತ್ತಿರುವ ಶ್ರೇಯಾಂಕಾ ಪಾಟೀಲ್ ಮಾದರಿಯಾಗಬೇಕು. ಇವರಲ್ಲಿ ಬಹುಪಾಲು ಆಟಗಾರ್ತಿಯರ ಹಾದಿ ಹೂವಿನ ಹಾದಿಯಾಗಿರಲಿಲ್ಲ. ಮುಳ್ಳಿನ ಹಾದಿಯಾಗಿತ್ತು. ಅನೇಕರು ಅವಮಾನ, ಹೀಗಳಿಕೆ ಎಲ್ಲವನ್ನು ಸಹಿಸಿ ಮೇಲೆ ಬಂದಿದ್ದಾರೆ. ತಮ್ಮ ಆತ್ಮವಿಶ್ವಾಸ, ಬದ್ಧತೆ, ತಾಳ್ಮೆ, ತ್ಯಾಗ, ಧೈರ್ಯ, ಸಾಧನೆ ಮಾಡಬೇಕೆಂಬ ಹಂಬಲ ಈ ಹಂತಕ್ಕೆ ಏರುವಂತೆ ಮಾಡಿದೆ.

ಮಹಿಳಾ ಕ್ರಿಕೆಟಿಗರಿಗೂ ಪುರುಷರ ಐ.ಪಿ.ಎಲ್ ನಂತೆ ಡಬ್ಲ್ಯೂ.ಪಿ.ಎಲ್ ಇದೆ. ರಾಷ್ಟ್ರವನ್ನು ಪ್ರತಿನಿಧಿಸಲು ಸಾಧ್ಯವಾಗದಿದ್ದರೂ ಡಬ್ಲ್ಯೂ.ಪಿ.ಎಲ್ ಮೂಲಕ ಹಣ, ಹೆಸರು ಗಳಿಸಲು ಸಾಧ್ಯ. ಮಹಿಳೆಯರಲ್ಲಿ ಇರಬಹುದಾದ ಮಾನಸಿಕ, ದೈಹಿಕ ಹಿಂಜರಿಕೆಯನ್ನು ದೂರವಿಟ್ಟು ಮೈದಾನಕ್ಕೆ ಇಳಿಯಬೇಕು. ಇದಕ್ಕೆ ಪುರುಷರೂ ಬೆನ್ನೆಲುಬಾಗಿರಬೇಕು. ಆಗ ಮಾತ್ರ ಕ್ರಿಕೆಟ್‌ನಲ್ಲೂ ಆರೋಗ್ಯಕರವಾದ ಸ್ಪರ್ಧಾತ್ಮಕವಾದ ಜಗತ್ತು ಸೃಷ್ಟಿಯಾಗುತ್ತದೆ. ಬಿ.ಸಿ.ಸಿ.ಐ ಹಾಗೂ ಕೆ.ಎಸ್.ಸಿ.ಎ ಮಹಿಳಾ ಕ್ರಿಕೆಟಿಗರಿಗೆ ಅನೇಕ ಯೋಜನೆಗಳನ್ನು ಹಾಕಿಕೊಂಡಿವೆ.

ಭಾರತ ಕ್ರಿಕೆಟ್ ತಂಡ ಮಾಜಿ ವೇಗಿ ವೆಂಕಟೇಶ್ ಪ್ರಸಾದ್ ನೇತೃತ್ವದ ನೂತನ ಪದಾಧಿಕಾರಿಗಳ ತಂಡ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ನ ಆಡಳಿತ ಚುಕ್ಕಾಣಿಯನ್ನು ಹಿಡಿದಿದೆ. ಅವರ ಮುಂದೆ ಬೆಟ್ಟದಷ್ಟು ಸವಾಲುಗಳಿವೆ. ಕೆ.ಎಸ್.ಸಿ.ಎ ಲೀಗ್ ಕ್ರಿಕೆಟ್ ಟೂರ್ನಿಗಳನ್ನು ನಡೆಸುವುದರ ಜೊತೆಗೆ ಪ್ರತಿಭಾವಂತ ಆಟಗಾರರಿಗೆ ಸೂಕ್ತ ಅವಕಾಶಗಳನ್ನು ಒದಗಿಸಿಕೊಡಬೇಕಿದೆ. ಅದರಲ್ಲೂ ಸಮಕಾಲೀನ ಸಂದರ್ಭದಲ್ಲಿ ಮಹಿಳಾ ಕ್ರಿಕೆಟಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಹಾಕಿಕೊಳ್ಳಬೇಕಿದೆ. ರಾಜ್ಯ ಕ್ರಿಕೆಟ್ ಸಂಸ್ಥೆ ಇತ್ತೀಚೆಗೆ ಒಂದು ಸುತ್ತೋಲೆ ಹೊರಡಿಸಿ ಪ್ರತಿ ತಿಂಗಳು ಕರ್ನಾಟಕ ಸೀನಿಯರ್ ತಂಡಕ್ಕೆ ಆಡಿದ ಮಾಜಿ ಆಟಗಾರ್ತಿಯರಿಗೆ ಗೌರವ ಸನ್ಮಾನವನ್ನು ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು ಘೋಷಿಸಿದೆ. ಅಷ್ಟೇ ಅಲ್ಲದೆ ಮೊದಲ ಬಾರಿಗೆ ಹದಿನೈದು ವರ್ಷದೊಳಗಿನ ಹುಡುಗಿಯರ ಕೆ.ಎಸ್.ಸಿ.ಎ ಲೀಗ್ ಪಂದ್ಯಗಳನ್ನು ಆಯೋಜಿಸಿದೆ. ಈ ಮೊದಲು ನೇರವಾಗಿ ರಾಜ್ಯ ತಂಡದ ಆಯ್ಕೆ ಪ್ರಕ್ರಿಯೆ ನಡೆಯುತ್ತಿತ್ತು. ಈ ಹೊಸ ಸಮಿತಿಯು ಮಹಿಳಾಪರವಾದ ನಿರ್ಣಯಗಳನ್ನು ಕೈಗೊಳ್ಳುತ್ತಿರುವುದು ಮಹಿಳೆಯರು ಕ್ರಿಕೆಟ್ ಕಡೆ ವಾಲುವಂತೆ ಮಾಡುತ್ತಿದೆಯಾದರೂ, ಅವರ ಸಂಪೂರ್ಣ ಸಹಭಾಗಿತ್ವಕ್ಕೆ ಇನ್ನಷ್ಟು ವಿನೂತನವಾದ ಹೆಜ್ಜೆಗಳನ್ನು ಇಡಬೇಕಿದೆ. ಕರ್ನಾಟಕ ಕ್ರಿಕೆಟ್ ಸಂಸ್ಥೆ ಆರು ರೀತಿಗಳಲ್ಲಿ ಇದನ್ನು ಕಾರ್ಯರೂಪಕ್ಕೆ ತರಬಹುದಾಗಿದೆ.

ಶಾಲಾ ಮತ್ತು ಕಾಲೇಜಿನ ಹುಡುಗಿಯರಿಗೆ ಕ್ರಿಕೆಟ್ ಲೀಗ್ ಪಂದ್ಯಗಳನ್ನು ಆರಂಭಿಸಿ ಹೆಚ್ಚಿನ ಶಾಲಾ, ಕಾಲೇಜುಗಳು ಭಾಗವಹಿಸುವಂತೆ ನೋಡಿಕೊಳ್ಳುವುದು. ಪ್ರೋತ್ಸಾಹದಾಯಕ ನಗದು ಬಹುಮಾನಗಳನ್ನು ಕೊಡುವುದು.

ಕೆ.ಎಸ್.ಸಿ.ಎ ಯ ಅಡಿ ಬರುವ ಎಲ್ಲಾ ಕ್ಲಬ್‌ಗಳಿಗೂ ಮಹಿಳಾ ತಂಡಗಳನ್ನು ಕಡ್ಡಾಯವಾಗಿ ರೂಪಿಸುವಂತೆ ಆದೇಶ ಹೊರಡಿಸಿ, ಪುರುಷರಿಗೆ ಚಾಲ್ತಿ ಇರುವ ಲೀಗ್‌ನಂತೆ ಮಹಿಳೆಯರಿಗೂ ಕಡೆ ಪಕ್ಷ ಮೊದಲ ಡಿವಿಷನ್, ಎರಡನೇ ಡಿವಿಷನ್ ಲೀಗ್ ಪ್ರಾರಂಭಿಸುವುದು.

ಇದನ್ನು ಮುಂದಿನ ಹಂತದಲ್ಲಿ ಎಲ್ಲಾ ಜಿಲ್ಲೆ, ತಾಲ್ಲೂಕುಗಳಿಗೂ ವಿಸ್ತರಿಸುವುದು. ಕೆ.ಎಸ್.ಸಿ.ಎ.ಯಿಂದಲೇ ನಿರಂತರವಾಗಿ ಮುಂದಿನ ಹಂತ ತಲುಪಬಹುದಾದ ಹೆಚ್ಚಿನ ಸಂಖ್ಯೆಯ ಪ್ರತಿಭಾವಂತ ಹುಡುಗಿಯರನ್ನು ಗುರುತಿಸಿ, ನುರಿತ ತರಬೇತುದಾರರಿಂದ ತರಬೇತಿ ಕೊಡಿಸುವುದು.

ಬಡ ಕುಟುಂಬದಿಂದ ಆಯ್ಕೆಯಾಗುವ ಹೆಣ್ಣು ಮಕ್ಕಳಿಗೆ ಕ್ರಿಕೆಟ್ ಕಿಟ್‌ಗಳನ್ನು ಉಚಿತವಾಗಿ ವಿತರಿಸುವ ಕಾರ್ಯವನ್ನು ಕೆ.ಎಸ್.ಸಿ.ಎ ಯೇ ಮಾಡಬೇಕು ಹಾಗೂ ಮಹಿಳಾ ಕ್ರಿಕೆಟ್ ಬೆಳೆಯುವವರೆಗೂ ಬೇರೆ ಜಿಲ್ಲೆಗಳಿಂದ ಆಯ್ಕೆಯಾಗಿ ಬರುವ ಹುಡುಗಿಯರಿಗೆ ಬೆಂಗಳೂರಿನಲ್ಲಿಯೇ ವಾಸ್ತವ್ಯ ಹೂಡಲು ವ್ಯವಸ್ಥೆ ಮಾಡುವುದು.

ಅಂಪೈರಿಂಗ್, ಸ್ಕೋರಿಂಗ್ ಪರೀಕ್ಷೆಗಳಲ್ಲಿ ಮಹಿಳೆಯರಿಗೂ ಅವಕಾಶ ಮಾಡಿಕೊಟ್ಟು, ಹೆಚ್ಚು ಮಹಿಳೆಯರು ಕ್ರಿಕೆಟ್‌ನಲ್ಲಿ ಆಸಕ್ತಿ ತೋರುವಂತೆ ಮಾಡುವುದು.

ಹೀಗೆ ಕ್ರಮವಹಿಸಿದಾಗ ಮಹಿಳಾ ಕ್ರಿಕೆಟ್ ಉತ್ತುಂಗ ಶಿಖರವನ್ನು ತಲುಪುವ ನಿರೀಕ್ಷೆಯನ್ನು ಇಟ್ಟುಕೊಳ್ಳಬಹುದು. ಜೊತೆಗೆ ಕರ್ನಾಟಕ ಮಹಿಳಾ ಕ್ರಿಕೆಟ್ ಸಂಸ್ಥೆ ಭಾರತದ ಎಲ್ಲಾ ರಾಜ್ಯ ಕ್ರಿಕೆಟ್ ಸಂಸ್ಥೆಗಳಿಗೂ ಮಾದರಿಯಾಗಬಲ್ಲದು. ಮಹಿಳಾ ಸಬಲೀಕರಣದ ಮಾತುಗಳು ಕೇವಲ ಬಾಯಿ ಮಾತಿನಿಂದ ಬಂದರೆ ಪ್ರಯೋಜನವಿಲ್ಲ. ಪ್ರಾಯೋಗಿಕವಾಗಿ ಅದು ಸಾಧ್ಯವಾಗಬೇಕಿದೆ. ಅದಕ್ಕಾಗಿ ಇನ್ನಷ್ಟು ಶ್ರಮವಹಿಸಬೇಕಿದೆ.

ಬೆಲೆಏರಿಕೆ ಬಿಸಿ ;ಮೋದಿ ಚೇಲಾಗಳಾದರೇ ಕರ್ನಾಟಕದ ಸಚಿವರು?



ಪಂಚರಾಜ್ಯಗಳ ಚುನಾವಣೆಯ ಅಬ್ಬರ ಅಡಗುತ್ತಿದ್ದಂತೆಯೇ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರಿಗೆ ನಿರೀಕ್ಷಿತವಾದರೂ ಅನಿರೀಕ್ಷಿತವೆಂಬಂತೆ ಬೆಲೆ ಏರಿಕೆಯ ಶಾಕ್ ನೀಡಿದೆ. ಮೇ ತಿಂಗಳ ಮೊದಲ ದಿನವೇ ಇಡೀ ದೇಶದ ಜನತೆ ಬೆಲೆ ಏರಿಕೆಯ ಬಿಸಿಯನ್ನು ಅನುಭವಿಸುವಂತಾಗಿದೆ. ದೇಶದಲ್ಲಿ ಪ್ರಜಾಪ್ರಭುತ್ವದ ಹಬ್ಬ ಮುಗಿಯುತ್ತಿದ್ದಂತೆಯೇ ಇಂತಹದೊಂದು ಆರ್ಥಿಕ ಹೊಡೆತ ಬೀಳಬಹುದು ಎಂಬ ಆತಂಕ ಜನರಲ್ಲಿತ್ತು, ಅದು ಈಗ ನಿಜವಾಗಿದೆ. ಮೇ 1ರ ಬೆಳಗ್ಗೆಯೇ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಬರೋಬ್ಬರಿ 993 ರೂಪಾಯಿ ಏರಿಕೆ ಮಾಡುವ ಮೂಲಕ ಕೇಂದ್ರ ಸರ್ಕಾರ ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮದ ಮೇಲೆ ದೊಡ್ಡ ಪ್ರಹಾರ ಮಾಡಿದೆ. ಈ ಮೊದಲು 2,162 ರೂಪಾಯಿ ಇದ್ದ ವಾಣಿಜ್ಯ ಸಿಲಿಂಡರ್ ಬೆಲೆ ಈಗ ಏಕಾಏಕಿ 3,155 ರೂಪಾಯಿಗೆ ತಲುಪಿದೆ. ಇಷ್ಟು ದೊಡ್ಡ ಮೊತ್ತದ ಏರಿಕೆ ಇತಿಹಾಸದಲ್ಲೇ ಮೊದಲು. ಇದು ಕೇವಲ ಹೋಟೆಲ್ ಮಾಲೀಕರಿಗೆ ಸೀಮಿತವಾದ ಸಮಸ್ಯೆಯಲ್ಲ, ಬದಲಿಗೆ ಹೋಟೆಲ್‌ಗಳನ್ನು ಅವಲಂಬಿಸಿರುವ ಲಕ್ಷಾಂತರ ಜನಸಾಮಾನ್ಯರ ಜೇಬಿಗೆ ಬೀಳುತ್ತಿರುವ ಕತ್ತರಿ.

ವಾಣಿಜ್ಯ ಗ್ಯಾಸ್ ಬೆಲೆ ಏರಿಕೆಯಿಂದಾಗಿ ಹೋಟೆಲ್ ಉದ್ಯಮ ಕಂಗೆಟ್ಟಿದೆ. ಈಗಾಗಲೇ ದಿನಸಿ ಪದಾರ್ಥಗಳು, ತರಕಾರಿ ಮತ್ತು ಹಾಲಿನ ಬೆಲೆ ಏರಿಕೆಯಿಂದ ತತ್ತರಿಸಿದ್ದ ಮಾಲೀಕರಿಗೆ ಗ್ಯಾಸ್ ಬೆಲೆ ಏರಿಕೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಈಗಾಗಲೇ ಅನೇಕ ಹೋಟೆಲ್‌ಗಳಲ್ಲಿ ತಿಂಡಿಗಳ ಬೆಲೆಯನ್ನು 15 ರಿಂದ 20 ರೂಪಾಯಿಗಳಷ್ಟು ಹೆಚ್ಚಿಸಲಾಗಿದೆ. ಈಗ ಗ್ಯಾಸ್ ಬೆಲೆ ಏರಿಕೆಯಿಂದಾಗಿ ಮುಂದಿನ ದಿನಗಳಲ್ಲಿ ಕಾಫಿ, ಟೀ ಮತ್ತು ಊಟದ ದರಗಳು ಮತ್ತಷ್ಟು ದುಬಾರಿಯಾಗಲಿವೆ. ಗ್ಯಾಸ್ ಬೆಲೆ ಹೆಚ್ಚಳ ತಾಳಲಾರದೆ ಈಗಾಗಲೇ ಹಲವು ಸಣ್ಣ ಹೋಟೆಲ್‌ಗಳು ಮುಚ್ಚಲ್ಪಟ್ಟಿವೆ. ಹೋಟೆಲ್ ನಡೆಸಿದರೂ ಲಾಭವಿಲ್ಲ, ಮುಚ್ಚಿದರೂ ಬಾಡಿಗೆ ಮತ್ತು ಕಾರ್ಮಿಕರ ವೇತನ ಪಾವತಿಸಲೇಬೇಕಾದ ಅನಿವಾರ್ಯತೆಯಲ್ಲಿ ಮಾಲೀಕರಿದ್ದಾರೆ. ಬೆಲೆ ಹೆಚ್ಚಿಸಿದರೆ ಗ್ರಾಹಕರು ಹೋಟೆಲ್‌ಗೆ ಬರುವುದನ್ನು ಕಡಿಮೆ ಮಾಡುತ್ತಾರೆ, ಬೆಲೆ ಹೆಚ್ಚಿಸದಿದ್ದರೆ ಉದ್ಯಮ ನಡೆಸುವುದು ಸಾಧ್ಯವಿಲ್ಲ ಎಂಬ ಇಕ್ಕಟ್ಟಿನಲ್ಲಿ ಹೋಟೆಲ್ ಮಾಲೀಕರು ಸಿಲುಕಿದ್ದಾರೆ.

ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಯ ಬೆನ್ನಲ್ಲೇ ಪೆಟ್ರೋಲ್ ಮತ್ತು ಡೀಸೆಲ್ ದರ ಕೂಡ ಗಗನಕ್ಕೇರುವ ಲಕ್ಷಣಗಳು ಕಾಣಿಸುತ್ತಿವೆ. ಸಾರಿಗೆ ವೆಚ್ಚ ಹೆಚ್ಚಾದಲ್ಲಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಪ್ರತಿಯೊಂದು ಅವಶ್ಯಕ ವಸ್ತುವಿನ ಬೆಲೆ ದುಪ್ಪಟ್ಟಾಗಲಿದೆ. ಈಗಾಗಲೇ ಆಟೋ ಚಾಲಕರು ಮತ್ತು ಸಣ್ಣ ಸಾರಿಗೆ ಉದ್ಯಮಿಗಳು ದೈನಂದಿನ ಜೀವನ ನಡೆಸಲು ಹರಸಾಹಸ ಪಡುತ್ತಿದ್ದಾರೆ.

ಜನಸಾಮಾನ್ಯರು ಇಷ್ಟೆಲ್ಲಾ ಸಂಕಷ್ಟ ಅನುಭವಿಸುತ್ತಿದ್ದರೂ, ಕೇಂದ್ರದಲ್ಲಿರುವ ಕರ್ನಾಟಕದ ಮಂತ್ರಿಗಳು ಮತ್ತು ರಾಜ್ಯದ ಪ್ರಭಾವಿ ನಾಯಕರು ಜನರ ಪರವಾಗಿ ಧ್ವನಿ ಎತ್ತುತ್ತಿಲ್ಲ ಎಂಬ ಆಕ್ರೋಶ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಜನರಿಂದ ಆಯ್ಕೆಯಾದ ಪ್ರತಿನಿಧಿಗಳು ಕೇಂದ್ರ ಸರ್ಕಾರದ ನೀತಿಗಳನ್ನು ಪ್ರಶ್ನಿಸುವ ಬದಲು ಸಮರ್ಥನೆಗಿಳಿದಿರುವುದು ದುರಂತ.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ನಡೆ ಇದಕ್ಕೆ ಸ್ಪಷ್ಟ ಉದಾಹರಣೆ. ಪತ್ರಕರ್ತರೊಬ್ಬರು ''ಚುನಾವಣೆ ಮುಗಿದ ತಕ್ಷಣ ಸಿಲಿಂಡರ್ ಬೆಲೆ ಏರಿಸಿದ್ದೀರಿ, ಇದರ ಬಗ್ಗೆ ಏನು ವಿಫಲರಾದ ಅವರು, ಸಂಬಂಧವೇ ಇಲ್ಲದ ಮಹಿಳಾ ಮೀಸಲಾತಿ ಮತ್ತು ಡಿಲಿಮಿಟೇಶನ್ ಬಿಲ್ ಬಗ್ಗೆ ಮಾತನಾಡಿ ವಿಷಯಾಂತರ ಮಾಡಿದರು. ಕೇಳಿದ ಪ್ರಶ್ನೆಗೂ ನೀಡಿದ ಉತ್ತರಕ್ಕೂ ಯಾವುದೇ ತಾರ್ಕಿಕ ಸಂಬಂಧವಿರಲಿಲ್ಲ. ಇದು ಕೇವಲ ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುವ ರಾಜಕೀಯ ತಂತ್ರವಷ್ಟೇ.

ಈ ಹಿಂದೆ ಕರ್ನಾಟಕದಲ್ಲಿ ಬೆಲೆ ಏರಿಕೆಯಾದಾಗ ಬೀದಿಗಿಳಿದು ಹೋರಾಡುತ್ತಿದ್ದ ಬಿಜೆಪಿ ನಾಯಕರು ಈಗ ಮೌನಕ್ಕೆ ಶರಣಾಗಿದ್ದಾರೆ. ಹಿಂದೆ ಮೆಟ್ರೋ ದರ ಏರಿಕೆಯಾದಾಗ ಖಾಲಿ ಟ್ರಂಕ್ ಹಿಡಿದು ಪ್ರತಿಭಟಿಸುತ್ತಿದ್ದ ಸಂಸದ ತೇಜಸ್ವಿ ಸೂರ್ಯ ಅವರು ಈಗ ಸಾಮಾನ್ಯ ಜನರ ಸಂಕಷ್ಟಕ್ಕೆ ಸ್ಪಂದಿಸುತ್ತಿಲ್ಲ. ಬಸ್ ದರ ಏರಿಕೆಯಾದಾಗ ಪ್ರಯಾಣಿಕರಿಗೆ ಗುಲಾಬಿ ಹೂವು ನೀಡಿ ಗಮನ ಸೆಳೆದಿದ್ದ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಕೇಂದ್ರದ ಈ ಜನವಿರೋಧಿ ಧೋರಣೆಯ ಬಗ್ಗೆ ತುಟಿ ಬಿಚ್ಚುತ್ತಿಲ್ಲ.

ಕರ್ನಾಟಕದ ಕೇಂದ್ರ ಮಂತ್ರಿಗಳಿಗೆ ಮತ್ತು ಬಿಜೆಪಿ ನಾಯಕರಿಗೆ ಬೆಲೆ ಏರಿಕೆಯ ಬಗ್ಗೆ ಮಾತನಾಡಲು ಭಯವಿದೆಯೇ ಎಂಬ ಪ್ರಶ್ನೆ ಕಾಡುತ್ತಿದೆ. ಕೇಂದ್ರದ ನಾಯಕರ ವಿರುದ್ಧ ಧ್ವನಿ ಎತ್ತಿದರೆ ತಮ್ಮ ಸ್ಥಾನಕ್ಕೆ ಕುತ್ತು ಬರಬಹುದು ಎಂಬ ಆತಂಕ ಅವರಲ್ಲಿ ಮನೆ ಮಾಡಿರುವಂತೆ ತೋರುತ್ತಿದೆ. ಜನರ ಸಂಕಷ್ಟಕ್ಕಿಂತ ಪಕ್ಷದ ನಿಷ್ಠೆಯೇ ಮುಖ್ಯವಾಯಿತೇ ಎಂಬುದು ಈಗಿನ ಮಿಲಿಯನ್ ಡಾಲರ್ ಪ್ರಶ್ನೆ.

ಅಷ್ಟೇ ಯಾಕೆ ತೆರಿಗೆ ಹಂಚಿಕೆಯ ವಿಚಾರದಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಸತತವಾಗಿ ಅನ್ಯಾಯ ಮಾಡುತ್ತಾ ಬಂದಿದ್ದರೂ, ರಾಜ್ಯದ ಬಿಜೆಪಿ ನಾಯಕರು ಆ ಬಗ್ಗೆ ಧ್ವನಿ ಎತ್ತದೆ ಮೌನಕ್ಕೆ ಶರಣಾಗಿರುವುದು ಕನ್ನಡಿಗರ ಆಕ್ರೋಶಕ್ಕೆ ಕಾರಣವಾಗಿತ್ತು. ಕರ್ನಾಟಕವು ದೇಶದ ಬೊಕ್ಕಸಕ್ಕೆ ಅತಿ ಹೆಚ್ಚು ತೆರಿಗೆ ಪಾವತಿಸುವ ರಾಜ್ಯಗಳಲ್ಲಿ ಒಂದಾಗಿದ್ದರೂ, ಮರಳಿ ರಾಜ್ಯಕ್ಕೆ ಸಿಗಬೇಕಾದ ಪಾಲು ಮಾತ್ರ ಅತ್ಯಂತ ನಗಣ್ಯವಾಗಿದೆ. ಚುನಾವಣೆಯ ಸಮಯದಲ್ಲಿ ಮತ ಕೇಳಲು ರಾಜ್ಯದ ಮೂಲೆ ಮೂಲೆಗೆ ಬರುವ ನಾಯಕರಿಗೆ, ಇಲ್ಲಿನ ಜನರ ತೆರಿಗೆಯ ಹಣದಲ್ಲಿ ನ್ಯಾಯಯುತ ಪಾಲು ಪಡೆಯುವ ಇಚ್ಛಾಶಕ್ತಿಯಿಲ್ಲದಿರುವುದು ದುರಂತ. ಕನ್ನಡಿಗರ ಮತಗಳಿಂದ ಗೆದ್ದು ಕೇಂದ್ರದಲ್ಲಿ ಅಧಿಕಾರ ಅನುಭವಿಸುತ್ತಿರುವ ಈ ಪ್ರತಿನಿಧಿಗಳು, ಜನರ ಕಷ್ಟಕಾಲದಲ್ಲಿ ಕೇಂದ್ರದ ಮುಂದೆ ನಿಂತು ಹಕ್ಕೊತ್ತಾಯ ಮಾಡುವ ಬದಲು, ಹೈಕಮಾಂಡ್ ವಿಧೇಯರಂತೆ ವರ್ತಿಸುತ್ತಿರುವುದು ಅವರ ಜನವಿರೋಧಿ ಧೋರಣೆಯನ್ನು ಎತ್ತಿ ತೋರಿಸುತ್ತದೆ. ಜನರ ಹಿತಕ್ಕಿಂತ ಪಕ್ಷದ ನಿಷ್ಠೆಯೇ ಮುಖ್ಯವೆಂದು ಭಾವಿಸಿರುವ ಇವರ ನಡೆ ವೋಟ್ ಇಲ್ಲಿನದು, ಲಾಭ ಅಲ್ಲಿನದು ಎನ್ನುವಂತಿದೆ.

ಚುನಾವಣೆಗಳ ಸಮಯದಲ್ಲಿ ಮತದಾರರಿಗೆ ಹತ್ತಾರು ಭರವಸೆ ನೀಡುವ ಸರ್ಕಾರಗಳು, ಅಧಿಕಾರಕ್ಕೆ ಬಂದ ಮೇಲೆ ಅಥವಾ ಚುನಾವಣೆ ಮುಗಿದ ಮೇಲೆ ಜನಸಾಮಾನ್ಯರನ್ನೇ ಶೋಷಿಸುವುದು ಪ್ರಜಾಪ್ರಭುತ್ವದ ವ್ಯವಸ್ಥೆಗೆ ಶೋಭೆಯಲ್ಲ. ಅಂತರಾಷ್ಟ್ರೀಯ ಮಾರುಕಟ್ಟೆಯ ನೆಪವೊಡ್ಡಿ ಬೆಲೆ ಏರಿಕೆಯನ್ನು ಸಮರ್ಥಿಸಿಕೊಳ್ಳುವುದು ಸುಲಭ, ಆದರೆ ಬಡವ ಮತ್ತು ಮಧ್ಯಮ ವರ್ಗದ ಕುಟುಂಬಗಳು ಪ್ರತಿ ರೂಪಾಯಿಗೂ ಪಡುತ್ತಿರುವ ಪಾಡನ್ನು ಆಳುವವರು ಅರ್ಥಮಾಡಿಕೊಳ್ಳಬೇಕಿದೆ.

ಇನ್ನು ಅಂಧಭಕ್ತರ ವಿಚಿತ್ರ ಮನಸ್ಥಿತಿಯ ಬಗ್ಗೆ ಹೇಳುವುದಾದರೆ, ಇವರ ಕುರುಡು ಆರಾಧನೆ ದೇಶದ ವಾಸ್ತವವನ್ನೇ ಮರೆಮಾಚುವಂತಿದೆ. ಬೆಲೆ ಏರಿಕೆಯಿಂದ ಇಡೀ ದೇಶವೇ ತತ್ತರಿಸುತ್ತಿದ್ದರೂ, ಇವರು ಮಾತ್ರ ಯಾವುದೋ ಮಾಯಾಲೋಕದಲ್ಲಿ ವಿಹರಿಸುತ್ತಾ ಮೋದಿ ಮಾಡಿದ್ದೆಲ್ಲವೂ ಸರಿ ಎಂದು ಬೊಬ್ಬೆ ಹೊಡೆಯುತ್ತಿರುವುದು ಹಾಸ್ಯಾಸ್ಪದ. ಈ ಹಿಂದೆ ಕೊರೊನಾದಂತಹ ಸಂಕಷ್ಟದ ಸಮಯದಲ್ಲಿ ವೈಜ್ಞಾನಿಕ ದಾರಿ ಹುಡುಕುವ ಬದಲು ಗಂಟೆ, ಜಾಗಟೆ ಬಾರಿಸಿ ರೋಗ ಓಡಿಸುತ್ತೇವೆ ಎಂದು ಹೊರಟಿದ್ದ ಇವರು, ಈಗ ಅಡುಗೆ ಅನಿಲ ದುಬಾರಿಯಾದಾಗ ಹಳೆಯ ಕಾಲದಂತೆ ಸಗಣಿ ತಟ್ಟಿ, ಬೆರಣಿ ಬಳಸಿ ಅಡುಗೆ ಮಾಡಿ, ಆರೋಗ್ಯಕ್ಕೆ ಒಳ್ಳೆಯದು ಎಂಬ ಅಸಂಬದ್ಧ ಉಪದೇಶ ನೀಡಿದರೂ ಅಚ್ಚರಿಯಿಲ್ಲ. ದೇಶದ ಜನಸಾಮಾನ್ಯರ ಹೊಟ್ಟೆ ಉರಿಯುತ್ತಿದ್ದರೆ, ಇವರು ಮಾತ್ರ ವಾಸ್ತವಕ್ಕೆ ಕಣ್ಣುಮುಚ್ಚಿ ಕೇವಲ ಭಜನೆಯಲ್ಲಿ ಮಗ್ನರಾಗಿರುವುದು ದೇಶದ ದೌರ್ಭಾಗ್ಯವೇ ಸರಿ. ಜನಸಾಮಾನ್ಯರ ಸಂಕಷ್ಟಕ್ಕೆ ಸ್ಪಂದಿಸದ ಇಂತಹ ಕುರುಡು ಅಭಿಮಾನ ದೇಶದ ಪ್ರಗತಿಗೆ ದೊಡ್ಡ ಅಡ್ಡಿಯಾಗಿದೆ.

ಕನ್ನಡಿಗರಿಂದ ಆಯ್ಕೆಯಾದ ಜನಪ್ರತಿನಿಧಿಗಳು ಕೇವಲ ಹೈಕಮಾಂಡ್ ಆಜ್ಞಾಪಾಲಕರಾಗದೆ, ಕರ್ನಾಟಕದ ಜನರ ದನಿಯಾಗಿ ದೆಹಲಿಯಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯತೆ ಇದೆ. ಇಲ್ಲದಿದ್ದರೆ, ಜನಸಾಮಾನ್ಯರ ಆಕ್ರೋಶ ಮುಂದಿನ ದಿನಗಳಲ್ಲಿ ಸ್ಫೋಟಗೊಳ್ಳುವುದರಲ್ಲಿ ಸಂಶಯವಿಲ್ಲ. ಬೆಲೆ ಏರಿಕೆಯ ಈ ಸರಣಿ ಹೀಗೆಯೇ ಮುಂದುವರೆದರೆ, ಸಾಮಾನ್ಯ ಮನುಷ್ಯನ ಬದುಕು ಕೇವಲ ಹೋರಾಟಕ್ಕಷ್ಟೇ ಸೀಮಿತವಾಗಲಿದೆ.

ಮೇ ದಿನ ಬೆವರು ಸುರಿಸುವ ಕೈಗಳಿಗೆ ಸಿಗದ 'ಬೆಲೆ': ಅಸಂಘಟಿತ ಕಾರ್ಮಿಕರ ನೋವಿನ ಕಥೆ



ಪ್ರತಿ ವರ್ಷ ಮೇ 1ರಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನವನ್ನಾಗಿ ಆಚರಿಸಲಾಗುತ್ತದೆ. 1886ರಲ್ಲಿ ಅಮೆರಿಕಾದ ಚಿಕಾಗೋದಲ್ಲಿ ಕಾರ್ಮಿಕರು 8 ಗಂಟೆಗಳ ಕೆಲಸದ ಅವಧಿಗಾಗಿ ನಡೆಸಿದ ಹೋರಾಟದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ. ಕಾರ್ಮಿಕರ ಕೊಡುಗೆ, ತ್ಯಾಗ ಮತ್ತು ಹಕ್ಕುಗಳನ್ನು ಈ ದಿನ ಸ್ಮರಿಸಲಾಗುತ್ತದೆ. ಆದರೆ ಸಮಾಜದ ಬೆನ್ನೆಲುಬಾಗಿ ನಿಂತಿರುವ ಅಸಂಘಟಿತ ವಲಯದ ಕಾರ್ಮಿಕರ ಬದುಕಿನಲ್ಲಿ ಮಾತ್ರ ಇಂದಿಗೂ ಕತ್ತಲು ಆವರಿಸಿದೆ.

ಕಟ್ಟಡ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಕೃಷಿ ಕೂಲಿಗಳು, ಮನೆಗೆಲಸದವರು ಮತ್ತು ಗಾರ್ಮೆಂಟ್ಸ್ ನೌಕರರು ಹೀಗೆ ಅಸಂಘಟಿತ ವಲಯದ ಕಾರ್ಮಿಕರ ಸುರಿಸಿದ ಬೆವರಿನ ಹನಿಗಳಿಂದಲೇ ನಮ್ಮ ನಗರಗಳು ನಿರ್ಮಾಣವಾಗಿರುವುದು. ಆದರೆ ಈ ಕಾರ್ಮಿಕರ ಬೆವರ ಹನಿಗಳಿಗೆ ಸರಿಯಾದ ಬೆಲೆ ಮಾತ್ರ ಇಂದಿಗೂ ಸಿಗುತ್ತಿಲ್ಲ.

ಮೋದಿ ಚೇಲಾಗಳಾದರೇ ಕರ್ನಾಟಕದ ಬಿಜೆಪಿಗರು?

ಪಂಚರಾಜ್ಯಗಳ ಚುನಾವಣೆಯ ಅಬ್ಬರ ಅಡಗುತ್ತಿದ್ದಂತೆಯೇ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರಿಗೆ ನಿರೀಕ್ಷಿತವಾದರೂ ಅನಿರೀಕ್ಷಿತವೆಂಬಂತೆ ಬೆಲೆ ಏರಿಕೆಯ ಶಾಕ್ ನೀಡಿದೆ. ಮೇ ತಿಂಗಳ ಮೊದಲ ದಿನವೇ ಇಡೀ ದೇಶದ ಜನತೆ ಬೆಲೆ ಏರಿಕೆಯ ಬಿಸಿಯನ್ನು...

ಕನಿಷ್ಠ ವೇತನದ ಕೊರತೆ ಅಸಂಘಟಿತ ವಲಯದ ಅತಿದೊಡ್ಡ ದುರಂತ. ಬೆಲೆ ಏರಿಕೆ ಆಕಾಶಕ್ಕೆ ಏಣಿ ಇಟ್ಟು ಮೇಲೆ ಸಾಗುತ್ತಲೇ ಇದೆ. ಇಂತಹ ಕಾಲದಲ್ಲಿ ದಿನವಿಡೀ ದುಡಿದರೂ ಅಸಂಘಟಿತ ವಲಯದ ಕಾರ್ಮಿಕರ ಕೈಗೆ ಬರುವ ಕೂಲಿ ಅತ್ಯಲ್ಪ. ನಮ್ಮ ಅಸಂಘಟಿತ ವಲಯದ ಕಾರ್ಮಿಕರಿಗೆ ಸಿಗುವುದು ಒಂದು ಹೊತ್ತಿನ ದಿನಸಿ ಖರೀದಿಸುವಷ್ಟರಲ್ಲಿ ಮಿಂಚಿನಷ್ಟು ವೇಗದಲ್ಲಿ ಮಾಯವಾಗುವಷ್ಟೇ ಕೂಲಿ. ಈ ಕೂಲಿ ಒಂದು ಹೊತ್ತಿನ ಊಟಕ್ಕೆ ಮತ್ತು ಕುಟುಂಬದ ನಿರ್ವಹಣೆಗೂ ಸಾಕಾಗುತ್ತಿಲ್ಲ. ''ಇಂದು ದುಡಿದರೆ ಮಾತ್ರ ಇಂದು ಊಟ'' ಎನ್ನುವ ಸ್ಥಿತಿ ಕೋಟ್ಯಂತರ ಜನರದ್ದು. ಹೀಗಿರುವಾಗ ಆರೋಗ್ಯ, ಶಿಕ್ಷಣಕ್ಕಾಗಿ ಹಣ ಉಳಿತಾಯ ಎಂಬುದು ಈ ಕಾರ್ಮಿಕರಿಗೆ ಕನಸಿನ ಮಾತು.

ಸುರಕ್ಷತೆ ಇಲ್ಲದ ಬದುಕು ಅಸಂಘಟಿತ ಕಾರ್ಮಿಕರದ್ದು

ದೇಶ ಇಷ್ಟು ಮುಂದುವರೆದರೂ ಕಾರ್ಮಿಕರ ಮೇಲಿನ ಶೋಷಣೆ ಮುಗಿದಿಲ್ಲ. ಕಾರ್ಪೋರೇಟ್ ದೊರೆಗಳು ಬೆಳೆದಷ್ಟು ಅಸಂಘಟಿತ ವಲಯದ ಕಾರ್ಮಿಕರು ಇನ್ನಷ್ಟೂ ಶೋಷಣೆಗೆ ಒಳಗಾಗುತ್ತಲೇ ಇದ್ದಾರೆ. ಇಂದಿನ ಆಧುನಿಕ ಯುಗದಲ್ಲೂ ಶೋಷಣೆ ಬೇರೆ ಬೇರೆ ರೂಪದಲ್ಲಿ ಮುಂದುವರಿದಿದೆ. ನೇರವಾಗಿ ಜೀತ ಎಂದು ಹೇಳಲಾಗದಿದ್ದರೂ, ಇಂದಿಗೂ ಇರುವುದು ಪರೋಕ್ಷ ಜೀತ ಪದ್ಧತಿಯೇ.

ಯಾವುದೇ ವಿಮೆ ಇಲ್ಲದೆ, ಜೀವದ ಹಂಗು ತೊರೆದು ಅಪಾಯಕಾರಿ ಜಾಗಗಳಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯ ಸ್ಥಿತಿಗೆ ನಮ್ಮ ವ್ಯವಸ್ಥೆ ಈ ಕಾರ್ಮಿಕರನ್ನು ದೂಡಿದೆ. ಎಂಟು ಗಂಟೆಗಳ ಕೆಲಸದ ನಿಯಮ ಕೇವಲ ಕಾಗದದ ಮೇಲಿದೆ. ಅಸಂಘಟಿತ ವಲಯದಲ್ಲಿ ದುಡಿಮೆಗೆ ಮಿತಿ ಇಲ್ಲ, ಆದರೆ ಅದಕ್ಕೆ ತಕ್ಕ ಪ್ರತಿಫಲವೂ ಇಲ್ಲ. (ಇತರೆ ಕಾರ್ಮಿಕರ ಸ್ಥಿತಿಯೂ ಇದೆ! ಎಂಬುದು ಗಮನಾರ್ಹ). ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆಯೂ ಇಲ್ಲ. ನಿವೃತ್ತಿ ವೇತನ, ಆರೋಗ್ಯ ವಿಮೆ ಅಥವಾ ಉದ್ಯೋಗದ ಖಾತರಿ ಎಂಬುದು ಇಲ್ಲದೆ ಸದಾ ಅತಂತ್ರ ಸ್ಥಿತಿಯಲ್ಲಿ ಈ ಕಾರ್ಮಿಕರು ಇರುವಂತಾಗಿದೆ.

ಕೇವಲ ಒಂದು ದಿನದ ಆಚರಣೆಯಿಂದ ಕಾರ್ಮಿಕರ ಬದುಕು ಹಸನಾಗುವುದಿಲ್ಲ. ಆದರೆ ಈ ದಿನದ ನೆಪದಲ್ಲಾದರೂ ಕಾರ್ಮಿಕರ ಹಕ್ಕುಗಳನ್ನು ನೆನಪಿಸಿಕೊಳ್ಳುವುದು ಸ್ವಾಗತಾರ್ಹ. ಈ ಹೋರಾಟ ವರ್ಷಪೂರ್ತಿ ಮುಂದುವರೆಸುವ ಹಲವು ಕಾರ್ಮಿಕ ಸಂಘಟನೆಗಳು ನಮ್ಮಲ್ಲಿವೆ. ಇನ್ನುಳಿದಿರುವುದು ಸರ್ಕಾರಗಳ ಮೇಲೆ. ಬಂಡವಾಳಶಾಹಿಗಳೆಡೆ ವಾಲಿರುವ ಸರ್ಕಾರವು ಕಾರ್ಮಿಕರೆಡೆ ನೋಡಲು ಚುನಾವಣೆಗಳು ಬರಬೇಕಷ್ಟೆ. ಕಾರ್ಮಿಕರನ್ನು ಕೇವಲ ಯಂತ್ರಗಳಂತೆ ನೋಡದೆ, ಅವರನ್ನು ಘನತೆಯುಳ್ಳ ಮನುಷ್ಯರೆಂದು ಪರಿಗಣಿಸುವ ಮನೋಭಾವ ಸಮಾಜದಲ್ಲಿ ಬೆಳೆಯಬೇಕು.

ಒಟ್ಟಿನಲ್ಲಿ ಸುಡುವ ಬಿಸಿಲಿನಲ್ಲಿ ರಸ್ತೆ ನಿರ್ಮಾಣ ಮಾಡುವವರಿಗೆ ಇಂದಿಗೂ ನೆರಳಿಲ್ಲ. ಅರಮನೆಯಂತಹ ಕಟ್ಟಡ ಕಟ್ಟುವವರಿಗೆ ಸ್ವಂತ ಮನೆಯಿಲ್ಲ. ಇದು ಇಂದಿನ ವಿಪರ್ಯಾಸ. ಕಾರ್ಮಿಕ ದಿನಾಚರಣೆ ಕೇವಲ ರಜೆಯ ದಿನವಾಗದೆ, ಶೋಷಿತರ ಧ್ವನಿಯಾಗಲಿ. ಕಾರ್ಮಿಕರ ಕೈಗಳಿಗೆ ಶಕ್ತಿ ಸಿಕ್ಕಾಗ ಮಾತ್ರ ದೇಶದ ಪ್ರಗತಿ ಅರ್ಥಪೂರ್ಣ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 114 RNI Number : KNKAN/25/A2770 03-05-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :114 ರಾಯಚೂರು 03-05-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಮೆಗಾ ಕೃಷಿ 'ಮಾರುಕಟ್ಟೆ' ಸ್ಥಾಪನೆಗೆ ಸುಪ್ರೀಂಕೋರ್ಟ್ ಅಸ್ತು

ಬೆಂಗಳೂರು,ಮೇ.02-

ಬೆಂಗಳೂರಿನಲ್ಲಿ ಮೆಗಾ ಕೃಷಿ ಮಾರುಕಟ್ಟೆ ಸ್ಥಾಪನೆಗೆ ಸುಪ್ರೀಂ ಕೋರ್ಟ್ ಅಸ್ತು ನೀಡಿರುವ ಬಗ್ಗೆ ಸಕ್ಕರೆ, ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹರ್ಷ ವ್ಯಕ್ತಪಡಿಸಿದರು.

ಈ ಕುರಿತು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿದ ಅವರು, ಕಾನೂನು ಪ್ರಕ್ರಿಯೆಯಲ್ಲಿ ಎಪಿಎಂಸಿಗೆ ಜಯ ಸಿಕ್ಕಿದೆ. ಪ್ರಕರಣ 1994ರಿಂದ ಕೆಲವು ನ್ಯಾಯಾಲಯದಲ್ಲಿದ್ದವು. ಹೈಕೋರ್ಟ್, ಸುಪ್ರೀಂನಲ್ಲಿ ಕೇಸ್‌ಗಳಿದ್ದವು. ಎರಡು ವರ್ಷದಲ್ಲಿ ಎರಡು ಮಹತ್ತರ ಕೇಸ್ ಗೆದ್ದಿದ್ದೇವೆ. ಹುಲಿಮಂಗಲದಲ್ಲಿ 42 ಎಕರೆ ಸ್ವಾಧೀನಕ್ಕೆ ಅರ್ಜಿ ಹಾಕಿದ್ದೆವು. ಆ ಭೂಮಿಯನ್ನು ಪಡೆಯಲು ಹರಸಾಹಸ ಪಡಬೇಕಾಯಿತು. ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಹಾಕಿ ನಾವು ಗೆದ್ದಿದ್ದೇವೆ ಎಂದರು.

211 ಕೋಟಿ ಹಣವನ್ನು ನೀಡಿದ್ದೇವೆ. ಫ್ರೂಟ್ಸ್, ವೆಜಿಟೇಬಲ್ ಮಾರ್ಕೆಟ್ ಮಾಡಿದ್ದೇವೆ. ಮಾಗಡಿ ರಸ್ತೆಯಲ್ಲಿ 270 ಎಕರೆ ಭೂಮಿ ವಿವಾದ ಇತ್ತು. ಶ್ರೀಗಂಧ ಕಾವಲ್‌ನಲ್ಲಿ ಭೂ ಸ್ವಾಧೀನ ವಿವಾದ ಇತ್ತು. ಸುಪ್ರೀಂ ಕೋರ್ಟ್‌ನಲ್ಲಿ ಕೇಸ್ ನಮ್ಮ ಪರ ಬಂದಿದೆ. 485 ಕೋಟಿ ಹಣವನ್ನು ನೀಡಿದ್ದೇವೆ. ಆ ಭೂಮಿಯನ್ನು ನಾವು ವಶಕ್ಕೆ ಪಡೆದಿದ್ದೇವೆ. ಮೆಗಾ ಮಾಲ್ ಮಾಡುವ ಉದ್ದೇಶವಿತ್ತು. ಆದರೆ, ವ್ಯಾಜ್ಯದಿಂದಾಗಿ ಇಲ್ಲಿವರೆಗೆ ಎಳೆಯಿತು. 1994 ರಿಂದ ಕೇಸ್ ವ್ಯಾಜ್ಯ ನಡೆದಿತ್ತು ಎಂದು ಸಚಿವರು ತಿಳಿಸಿದರು.

ಕಾರಟಗಿಯಲ್ಲಿ 136 ಎಕರೆ ಸ್ವಾಧೀನ ಮಾಡಿದ್ದೇವೆ. ಇದು ಕೂಡ ಕುಂಟುತ್ತಾ ಸಾಗಿತ್ತು. ಇದೀಗ 12 ಕೋಟಿ ಪರಿಹಾರವನ್ನ ನೀಡಲಾಗಿದೆ. ಭೂಮಿಯನ್ನು ನಾವು ವಶಕ್ಕೆ ತೆಗೆದುಕೊಂಡಿದ್ದೇವೆ. ಮೂರು ಪ್ರತಿಷ್ಠಿತ ಕೇಸ್ ಗೆದ್ದಂತಾಗಿದೆ. ಬೆಂಗಳೂರಿನಲ್ಲೇ 300 ಎಕರೆ ಪ್ರೈಮ್ ಲ್ಯಾಂಡ್ ಪಡೆದಿದ್ದೇವೆ. ಯಶವಂತಪುರ ಮಾರ್ಕೆಟ್ ಶಿಫ್ಟ್ ಆಗುತ್ತಿದೆ. ಈರುಳ್ಳಿ, ಬೆಳ್ಳುಳ್ಳಿ ಮಾರ್ಕೆಟ್ ಶಿಫ್ಟ್ ಮಾಡಿದ್ದೇವೆ. ಸಾರಿಗೆ ಇಲಾಖೆ ಭೂಮಿಯನ್ನು ಪಡೆದಿದ್ದೇವೆ. ದಾಸನಪುರದ ಬಳಿಯ ಭೂಮಿ ಪಡೆದಿದ್ದೇವೆ. ಆ ಪ್ರಾಪರ್ಟಿ ಮಾರ್ಕೆಟ್‌ಗೆ ಬಳಸಿಕೊಳ್ಳುತ್ತಿದ್ದೇವೆ. ಸಣ್ಣ ಪುಟ್ಟ ಲಿಟಿಗೇಶನ್ ಇನ್ನೂ ಇವೆ. ಅವುಗಳು ನ್ಯಾಯಾಲಯದ ವಿವಿಧ ಹಂತಗಳಲ್ಲಿವೆ. ಆದರೆ, ಮೇಜರ್ ಈ ಮೂರು ಕೇಸ್‌ಗಳಲ್ಲಿ ನಮ್ಮ ಪರವಾಗಿ ತೀರ್ಪು ಬಂದಿದೆ ಎಂದು ಸಚಿವರು ವಿವರಿಸಿದರು.

ಮೆಗಾ ಕೃಷಿ ಮಾರುಕಟ್ಟೆಗಿದ್ದ ಕಾನೂನು ತೊಡಕೇನು? ರೈತರು, ವ್ಯಾಪಾರಿಗಳು ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಬೆಂಗಳೂರಿನಲ್ಲಿ ಬೃಹತ್ ಪ್ರಮಾಣದ 'ಮೆಗಾ ಕೃಷಿ ಮಾರುಕಟ್ಟೆ' ಸ್ಥಾಪಿಸುವ ಸರ್ಕಾರದ ಯೋಜನೆಗೆ ಇದ್ದ ಕಾನೂನು ಅಡೆತಡೆಗಳು ನಿವಾರಣೆಯಾಗಿದೆ. ಬೆಂಗಳೂರು ಉತ್ತರ ತಾಲೂಕಿನ ಮಾಗಡಿ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಶ್ರೀಗಂಧ ಕಾವಲ್ ಮತ್ತು ಹೇರೋಹಳ್ಳಿ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳ ಸುಮಾರು 272.33 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆಯು ಕ್ರಮಬದ್ಧವಾಗಿದೆ ಎಂದು ಸರ್ವೋಚ್ಚ ನ್ಯಾಯಾಲಯ ತೀರ್ಪು ನೀಡಿದೆ.

ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಮೆಗಾ ಮಾರುಕಟ್ಟೆ ಸ್ಥಾಪನೆಗಾಗಿ ಶ್ರೀಗಂಧ ಕಾವಲ್ ಗ್ರಾಮದ 172 ಎಕರೆ 22 ಗುಂಟೆ ಹಾಗೂ ಹೇರೋಹಳ್ಳಿ ಗ್ರಾಮದ 100 ಎಕರೆ 11 ಗುಂಟೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿತ್ತು. ಇದನ್ನು ಪ್ರಶ್ನಿಸಿ ಜಮ್ನಾಲಾಲ್ ಬಜಾಜ್ ಸೇವಾ ಟ್ರಸ್ಟ್ ನ್ಯಾಯಾಲಯದ ಮೆಟ್ಟಿಲೇರಿತ್ತು. ಈ ಹಿಂದೆ ರಾಜ್ಯ ಉಚ್ಚ ನ್ಯಾಯಾಲಯವು 2014 ರಿಂದ 2019ರವರೆಗೆ ಭೂಸ್ವಾಧೀನ ಪ್ರಕ್ರಿಯೆ 'ಲ್ಯಾಪ್ಸ್' ಆಗಿದೆ ಎಂದು ತೀರ್ಪು ನೀಡಿತ್ತು. ಸಮಿತಿಯು ಸಲ್ಲಿಸಿದ್ದ ಮೇಲ್ಮನವಿ ಹಾಗೂ ಪುನರ್ ಪರಿಶೀಲನಾ ಅರ್ಜಿಗಳು ವಜಾಗೊಂಡಿದ್ದವು.

2022 ರಿಂದ 2025 ರವರೆಗೆ ಸಮಿತಿಯು ಸುಪ್ರೀಂ ಕೋರ್ಟ್‌ನಲ್ಲಿ ಎಸ್‌ಎಲ್‌ಪಿ ದಾಖಲಿಸಿದ ನಂತರ, ಪ್ರಕರಣವನ್ನು ಹೊಸದಾಗಿ ವಿಚಾರಣೆ ನಡೆಸಲು ಹೈಕೋರ್ಟ್‌ಗೆ ಸೂಚಿಸಲಾಯಿತು. 2025ರ ಫೆಬ್ರವರಿಯಲ್ಲಿ ಹೈಕೋರ್ಟ್‌ನ ಏಕ ಸದಸ್ಯ ಪೀಠವು ಭೂಸ್ವಾಧೀನ ಕ್ರಮಬದ್ಧವಾಗಿದೆ ಎಂದು ತೀರ್ಪು ನೀಡಿತು.

ಈ ತೀರ್ಪನ್ನು ಪ್ರಶ್ನಿಸಿ ಭೂಮಾಲೀಕರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಬಿ. ವಿ. ನಾಗರತ್ನ ಹಾಗೂ ಉಜ್ವಲ್ ಭುಯಾನ್ ಅವರಿದ್ದ ಪೀಠವು, ಏಪ್ರಿಲ್ 27, 2026 ರಂದು ಹೈಕೋರ್ಟ್ ಆದೇಶವನ್ನು ಎತ್ತಿಹಿಡಿದು ಅರ್ಜಿಯನ್ನು ವಜಾಗೊಳಿಸಿತು. ಈ ತೀರ್ಪಿನೊಂದಿಗೆ ರೈತರು, ಕಾರ್ಮಿಕರು ಮತ್ತು ಗ್ರಾಹಕರಿಗೆ ಆಧುನಿಕ ಸೌಲಭ್ಯಗಳನ್ನು ಒದಗಿಸುವ ಮೆಗಾ ಮಾರುಕಟ್ಟೆ ನಿರ್ಮಾಣಕ್ಕೆ ಇದ್ದ ದೊಡ್ಡ ವಿಘ್ನ ದೂರವಾದಂತಾಗಿದೆ.

ಸೊಳ್ಳೆ ಪರದೆ ಕಡ್ಡಾಯವಾಗಿ ಬಳಸಿ, ಮಲೇರಿಯಾ ರೋಗ ಹರಡದಂತೆ ನೋಡಿಕೊಳ್ಳಿ: ಡಾ.ಸುರೇಂದ್ರ ಬಾಬು



ರಾಯಚೂರು,ಮೇ.02-

ಸೋಂಕಿಗೆ ಒಳಪಡುವ ಅನಾಫಿಲಿಸ್ ಹೆಣ್ಣು ಸೊಳ್ಳೆಯಿಂದ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಮಲಗುವಾಗ ಸೊಳ್ಳೆ ಪರದೆಗಳನ್ನು ಕಡ್ಡಾಯವಾಗಿ ಬಳಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಶ ಬಾಬು ಅವರು ಹೇಳಿದರು.

ಮೇ.02ರ ಶನಿವಾರ ದಂದು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಈಚನಾಳ ಪ್ರಾಥಮಿಕ ಅರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು ಇವರ ಆಶ್ರಯದಲ್ಲಿ ಜಿಲ್ಲಾ ಮಟ್ಟದ ವಿಶ್ವ ಮಲೇರಿಯಾ ದಿನಾಚರಣೆ ಚಾಲನೆ ನೀಡಿ ಅವರು ಮಾತನಾಡಿದರು.

ಮಲೇರಿಯಾ ರೋಗಕ್ಕೆ ತುತ್ತಾದ ವ್ಯಕ್ತಿಗೆ ಕಚ್ಚುವ ಸೊಳ್ಳೆಗಳು, ಆರೋಗ್ಯವಂತ ಮನುಷ್ಯನಿಗೆ ಕಚ್ಚಿದಾಗ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಜ್ವರ ಬಂದಾಗ ತಕ್ಷಣ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು. ನೀರು ಸಂಗ್ರಹ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಬೇಕು. ಯಾವುದೇ ರೋಗವನ್ನು ನಿಯಂತ್ರಣಕ್ಕೆ ತರಲು ಸಾರ್ವಜನಿಕರ ಸಹಕಾರ ಅಗತ್ಯವಾಗಿರುತ್ತದೆ. ಸಾರ್ವಜನಿಕರ ಸಹಕಾರವಿಲ್ಲದೇ ಯಾವುದೇ ಕಾರ್ಯಗಳು ಪರಿಪೂರ್ಣವಾಗುವುದಿಲ್ಲ ಎಂದರು.

ಅನಾಫೀಲಿಸ್ ಹೆಣ್ಣು ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಮಲೇರಿಯಾವನ್ನು ಜಿಲ್ಲೆಯಲ್ಲಿ ಕಳೆದ ಒಂದು ದಶಕದಲ್ಲಿ ಸೂಕ್ತ ಚಿಕಿತ್ಸೆ , ನಿಗಾವಣೆ, ಪರಿಣಾಮಕಾರಿಯಾಗಿ ಕೀಟನಾಶಕ ಸಿಂಪರಣೆಯಿಂದ ಗಣನೀಯವಾಗಿ ಕಡಿಮೆ

3 ನೇ ಪುಟಕ್ಕೆ...



ನರೇಗಾ ಕೆಲಸದಲ್ಲಿ ಕೃಷಿ ಕೂಲಿಕಾರರಿಂದ ವಿಶ್ವ ಕಾರ್ಮಿಕರ ದಿನ ಆಚರಣೆ

ಜಾಲಹಳ್ಳಿ,ಮೇ.02-

ಇಲ್ಲಿಗೆ ಹತ್ತಿರವಿರುವ ಬಾಗೂರ ಗ್ರಾಮದ ಹೊರವಲಯದಲ್ಲಿ ನಡೆದ ಕೂಲಿಕಾರರ ಕೆಲಸದ ಸ್ಥಳದಲ್ಲಿ ಕೃಷಿ ಮತ್ತು ಗ್ರಾಮೀಣ ಕಾರ್ಮಿಕ ಸಂಘಟನೆಯಿಂದ ವಿಶ್ವ ಕಾರ್ಮಿಕರ ದಿನ ಆಚರಣೆ ಮಾಡಲಾಯಿತು.

ಹಿರಿಯ ಕೂಲಿಕಾರರಿಂದ ಕೇಕ್ ಕತ್ತರಿಸಿ ಒಬ್ಬರಿಗೊಬ್ಬರು ಸಿಹಿ ತಿನಿಸಿ ಸಂಭ್ರಮಿಸಿದರು.ನಂತರ ಕೃಷಿ ಕೂಲಿಕಾರರ ಸಂಘಟನೆ ಜಿಲ್ಲಾ ಕಾರ್ಯದರ್ಶಿ ಸಂಗಮೇಶ ಮೂಲಿಮನಿ ಮಾತನಾಡಿ ಈ ದೇಶದ ಬೆಳವಣಿಗೆಯಲ್ಲಿ ಕಾರ್ಮಿಕ ವರ್ಗದ ಶ್ರಮ ಬಹುದೊಡ್ಡ ಕೊಡುಗೆ ಇದೆ.ಕಾರ್ಮಿಕರನ್ನು ಗೌರವದಿಂದ ದುಡಿಸಿಕೊಳ್ಳಬೇಕು, ದುಡಿಮೆಗೆ ತಕ್ಕ ಕೂಲಿ ನೀಡಬೇಕು, ಕೆಲಸದ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು, ದೌರ್ಜನ್ಯ ದಬ್ಬಾಳಿಕೆ ವಿರುದ್ಧ ಕಾರ್ಮಿಕರು ಒಗ್ಗೂಡಬೇಕು.

3 ನೇ ಪುಟಕ್ಕೆ...

ಗ್ಯಾಸ್ ಬೆಲೆ ಏರಿಕೆ: ಕೇಂದ್ರ ಸರಕಾರದ ವಿರುದ್ಧ ಡಾ.ರಝಾಕ ಉಸ್ತಾದ ಖಂಡನೆ



ರಾಯಚೂರು,ಮೇ.02-

ಕೇಂದ್ರದ ಬಿಜೆಪಿ ಸರಕಾರ ಪಂಚ ರಾಜ್ಯಗಳ ಚುನಾವಣೆ ಮುಗಿದ ತಕ್ಷಣ ವಾಣಿಜ್ಯ ಗ್ಯಾಸ್ ಸಿಲೆಂಡರ್ ಗಳ ಬೆಲೆ ಒಮ್ಮೆಲೆ 993 ರೂ ಹೆಚ್ಚಳ ಮಾಡಿದ್ದು ಜನರ ಲೂಟಿಗೆ ಸಮವಾಗಿದೆ, ಕೇಂದ್ರದ ಸಚಿವರು ಒಂದು ಕಡೆ ಗ್ಯಾಸ್ ಸಿಲೆಂಡರ್ ಗಳ ಕೊರತೆಯಿಲ್ಲ ಎಂದು ಹೇಳುತ್ತಾರೆ, ಇನ್ನೊಂದು ಕಡೆ ಕಳೆದ ಎರಡು ತಿಂಗಳಿಂದ ಜನರಿಗೆ ಗ್ಯಾಸ್ ಸಿಲೆಂಡರ್ ಸಿಗದೇ ಪರದಾಡುವಂತಹ ಸ್ಥಿತಿ ದೇಶದಲ್ಲಿದೆ, ಇಂತಹ ಸಂದರ್ಭದಲ್ಲಿ 19ಕೆಜಿ ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 993 ರೂ ವರೆಗೆ ಹೆಚ್ಚಿಸಿರುವದು ಜನರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಅಲ್ಲದೇ 5ಕೆಜಿ ಯ ಸಣ್ಣ ಸಿಲೆಂಡರ್ ಬೆಲೆ ಕೂಡ 261 ರೂ ಹೆಚ್ಚಿಸಲಾಗಿದೆ, ಇದು ನಗರ ಪ್ರದೇಶದಲ್ಲಿ ವಾಸಿಸುವ ಸಣ್ಣ ಕುಟುಂಬಗಳ ಬದುಕಿಗೆ ಬೆಂಕಿ ಹಾಕಿದಂತಾಗಿದೆ.

2026ರ ಫೆಬ್ರವರಿ ಮೊದಲ ವಾರದಲ್ಲಿ ಮನೆ ಬಳಕೆ ಗ್ಯಾಸ್ ಸಿಲೆಂಡರ್ 60ರೂ ಹೆಚ್ಚಿಸಲಾಗಿತ್ತು ಮತ್ತು ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 49 ರೂ, ಮಾರ್ಚ 2026ಕ್ಕೆ 114.5 ರೂ, ಎಪ್ರಿಲ್ 2026ಕ್ಕೆ 195.5 ರೂ ಹಾಗೂ ಈಗ 993 ರೂ ಹೆಚ್ಚಳ ಮಾಡಲಾಗಿದೆ, ಕಳೆದ ನಾಲ್ಕು ತಿಂಗಳಲ್ಲಿ ವಾಣಿಜ್ಯ ಗ್ಯಾಸ್ ಸಿಲೆಂಡರ್ ಬೆಲೆ 1352 ರೂ ಹೆಚ್ಚಳ ಮಾಡಲಾಗಿದೆ, ಈಗ ಅದರ ಬೆಲೆ 3071.50 ರೂ ಆಗಿದೆ, ಇದರಿಂದ ಹೊಟೆಲ್ ಮಾಲಿಕರಿಗೆ ಸಾಕಷ್ಟು ತೊಂದರೆಯಾಗುತ್ತದೆ, ಕಳೆದ ಮೂರು ತಿಂಗಳಿಂದ ಗ್ಯಾಸ್ ಸಿಗದೇ

3 ನೇ ಪುಟಕ್ಕೆ...



ಕಲಬೆರಕೆ ಸೇಂದಿ ಮಾರಾಟ: ಇಬ್ಬರು ಆರೋಪಿಗಳ ಬಂಧನ

ರಾಯಚೂರು,ಮೇ.02-

ತಾಲೂಕಿನ ಕೊರ್ತಕುಂದ ಗ್ರಾಮದಲ್ಲಿ ಕಲಬೆರಕೆ ಸೇಂದಿ ಮಾರಾಟ ಮಾಡುತ್ತಿದ್ದ ಆರೋಪದಲ್ಲಿ ಇಬ್ಬರನ್ನು ಯಾಪಲದಿನ್ನಿ ಪೊಲೀಸರು ಬಂಧಿಸಿದ್ದಾರೆ. ನೀಲಮ್ಮ ಹಾಗೂ ವೆಂಕಟೇಶ್ ಬಂಧಿತ ಆರೋಪಿಗಳು. ಬಂದಿತ ಆರೋಪಿಗಳಿಂದ 67 ಲೀಟರ್ ಸೇಂದಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಕಲಬೆರಕೆ ಸೇಂದಿಯನ್ನು ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿ ಸಿದ್ದಾರೆ. ನ್ಯಾಯಾಲಯವು ಆರೋಪಿಗಳಿಗೆ ನ್ಯಾಯಾಂಗ ಬಂಧನ ವಿಧಿಸಿದೆ.

ಜನಿವಾರ ತೆಗೆಸಿದ ಕೃತ್ಯ 'ಪೆಹಲ್ಗಾಂ' ಮಾದರಿಯ ದಬ್ಬಾಳಿಕೆ: ಬ್ರಾಹ್ಮಣ ಮಹಾಸಭಾ ತೀವ್ರ ಖಂಡನೆ



ರಾಯಚೂರು,ಮೇ.02-

ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷಾ ಸಮಯದಲ್ಲಿ ಬೆಂಗಳೂರಿನ ಕೃಪಾನಿಧಿ ವಿದ್ಯಾಸಂಸ್ಥೆ ಹಾಗೂ ಚಿಕ್ಕಬಳ್ಳಾಪುರದ ನಾಗಾರ್ಜುನ ವಿದ್ಯಾಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಜನಿವಾರ ಹಾಗೂ ಧಾರ್ಮಿಕ ಆಚರಣೆಯ ಕುರುಹುಗಳನ್ನು ಬಲವಂತವಾಗಿ ತೆಗೆಸಿರುವುದು ಸಮಾಜಕ್ಕೆ ಮಾರಕವಾದ ಕೃತ್ಯ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಸಂಘಟನಾ ಕಾರ್ಯದರ್ಶಿಗಳಾದ ರಾಘವೇಂದ್ರ ಮಯ್ಯ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಘಟನೆಯನ್ನು ಕಾಶ್ಮೀರದ ಪೆಹಲ್ಗಾಂನಲ್ಲಿ ಜಾತಿ ಕೇಳಿ ಗುಂಡಿಕ್ಕಿದ ಘಟನೆಗೆ ಹೋಲಿಸಿದರು. ವಿದ್ಯಾಸಂಸ್ಥೆಗಳಲ್ಲಿ ಜನಿವಾರ, ಶಿವದಾರ, ಕಾಶಿದಾರ, ಮಾಂಗಲ್ಯ, ಕಿವಿ ಓಲೆ, ಕಾಲುಂಗರದಂತಹ ಹಿಂದೂ ಧರ್ಮದ ಅವಿಭಾಜ್ಯ ಅಂಗಗಳ ಮೇಲೆ ದಬ್ಬಾಳಿಕೆ ನಡೆಸಲಾಗುತ್ತಿದೆ. ಇದು ಲವ್ ಜಿಹಾದ್ ಹಾಗೂ ಕಾರ್ಪೊರೇಟ್ ಜಿಹಾದ್ ಮಾದರಿಯಲ್ಲೇ ನಡೆಯುತ್ತಿರುವ 'ವಿದ್ಯಾ ಜಿಹಾದ್' ಎಂಬ ಶಂಕೆ ಮೂಡುತ್ತಿದೆ, ಎಂದು ಆತಂಕ ವ್ಯಕ್ತಪಡಿಸಿದರು.

3 ನೇ ಪುಟಕ್ಕೆ...

ಮೇ 3ರಂದು ಬಸನಗೌಡ ಬಾದರ್ಲಿ ಫೌಂಡೇಶನ್ ನಿಂದ ಸರ್ವಧರ್ಮದ ಸಾಮೂಹಿಕ ವಿವಾಹ

ಡಿ ಸಿ ಎಂ. ಡಿ ಕೆ. ಶಿವಕುಮಾರ ಸೇರಿ ಹಲವಾರು ಸಚಿವರ ಆಗಮನದ ನಿರೀಕ್ಷೆ



ಸಿಂಧನೂರು,ಮೇ.02-

ವಿಧಾನಪರಿಷತ್ ಶಾಸಕ ಬಸನಗೌಡ ಬಾದರ್ಲಿ ಅವರ ನೇತೃತ್ವದಲ್ಲಿ. ಬಸನಗೌಡ ಫೌಂಡೇಶನ್ ವತಿಯಿಂದ. ಮೇ 3. ಭಾನುವಾರ ರಂದು. ನಗರದ ಕುಷ್ಟಗಿ ರಸ್ತೆಯಲ್ಲಿರುವ ತಾಲೂಕು ಕ್ರೀಡಾಂಗಣದಲ್ಲಿ 160ಕ್ಕೂ ಹೆಚ್ಚು ಉಚಿತ ಸಾಮೂಹಿಕ ವಿವಾಹ ಹಾಗೂ 5001 ಮಾತೆಯರಿಗೆ ಉಡಿ ತುಂಬುವ ಕಾರ್ಯಕ್ರಮಕ್ಕೆ. ಹಾಗೂ ಅವರ ಒಂದು ವರ್ಷದ ಸಾಧನೆಯ ಕೈಪಿಡಿ ಪುಸ್ತಕದ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿದ್ದು. ಮೊಟ್ಟ ಮೊದಲ ಬಾರಿಗೆ ಸಿಂಧೂ ನೀರಿನ ಕ್ರೀಡಾಂಗಣದಲ್ಲಿ ಬೆಂಗಳೂರು ಮಾದರಿಯಲ್ಲಿ ಬೃಹತ್ ಪೆಂಡಾಲು ಹಾಕಲಾಗಿದ್ದು ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಜನರು ಆಗಮಿಸುವ ನಿರೀಕ್ಷೆಯಿದ್ದು ಈ ಹಿನ್ನೆಲೆಯಲ್ಲಿ ಬೃಹತ್ ಪೆಂಡಾಲು ಹಾಕಲಾಗಿದ್ದು. ಮುಖ್ಯ ವೇದಿಕೆ ಪಕ್ಕದಲ್ಲಿ ಊಟದ ವ್ಯವಸ್ಥೆಗೆ ಪ್ರತ್ಯೇಕ ಪೆಂಡಾಲು ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ ಕ್ರೀಡಾಂಗಣ ಗೋಡೆಗೆ ಹೊಂದಿಕೊಂಡು ನಾಲ್ಕೈದು ಕಡೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ಜನ ದಟ್ಟಣೆ ನಿಯಂತ್ರಿಸಲು ಕ್ರೀಡಾಂಗಣದ ಹೊರ ಭಾಗದಲ್ಲಿ ಅಲ್ಲಲ್ಲಿ ವಾಹನಗಳ ನಿಲುಗಡೆಗೆ ಬಹಳಷ್ಟು ಸ್ಥಳಾವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮಕ್ಕೆ ಉಪಮುಖ್ಯ ಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ. ಡಿಕೆ ಶಿವಕುಮಾರ್ ಅವರು ಮಧ್ಯಾಹ್ನ 12 ಗಂಟೆಗೆ ಆಗಮಿಸುವ ನಿರೀಕ್ಷೆಯಿದ್ದು. ಮೂರು ಗಂಟೆಯವರೆಗೂ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆಯಾದ. ಶ್ರೀ ಲಕ್ಷ್ಮಿ ಹೆಬ್ಬಾಳ್ಕರ್ ಶಿವಾನಂದ್ ಪಾಟೀಲ್. ಆರ್ ಬಿ ತಿಮ್ಮಾಪುರ್ ಎಚ್ ಕೆ ಮುನಿಯಪ್ಪ. ಈಶ್ವರ್ ಖಂಡ್ರೆ. ಎನ್‌ಎಸ್ ಬೋಸರಾಜ್. ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಶರಣ ಪ್ರಕಾಶ್ ಪಾಟೀಲ್. ಶಿವರಾಜ್ ಎಸ್ ತಂಗಡಗಿ. ಮಧು ಬಂಗಾರಪ್ಪ. ಸತೀಶ್ ಜಾರಕಿಹೊಳಿ. ಸೇರಿದಂತೆ ಹಲವು ಸಚಿವರು ಸಂಸದರು ಶಾಸಕರು ಸೇರಿದಂತೆ ಗಣ್ಯರು ಈ ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ ಎಂದು ತಿಳಿದು ಬಂದಿದೆ. ಈ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ. 40 ರಿಂದ 50, ಸಾವಿರಕ್ಕೂ ಅಧಿಕ ಜನಸಂಖ್ಯೆಯಲ್ಲಿ ಜನರು ಆಗಮಿಸುವ ನಿರೀಕ್ಷೆ

3 ನೇ ಪುಟಕ್ಕೆ...

ಅಂಗನವಾಡಿ ಕೇಂದ್ರಗಳ ರಜೆ ವಿಸ್ತರಣೆಗೆ ಅಪರ ಜಿಲ್ಲಾಧಿಕಾರಿಗೆ ಮನವಿ



ರಾಯಚೂರು,ಮೇ.02-

ಜಿಲ್ಲೆಯಲ್ಲಿನ ತೀವ್ರ ಬಿಸಿಲಿನ ಹಿನ್ನೆಲೆ ಅಂಗನವಾಡಿ ಕೇಂದ್ರಗಳ ರಜೆಯನ್ನು ಮತ್ತಷ್ಟು 15 ದಿನ ವಿಸ್ತರಿಸುವಂತೆ ಬೃಹತ್ ಸಂಖ್ಯ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿ.ಐ.ಟಿ.ಯು.) ಜಿಲ್ಲಾ ಸಮಿತಿಯಿಂದ ಅಪಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ರಾಜ್ಯ ಸರ್ಕಾರದ ಆದೇಶದಂತೆ ಏಪ್ರಿಲ್ 16ರಿಂದ ಮೇ 1ರವರೆಗೆ ಅಂಗನವಾಡಿ ಕೇಂದ್ರಗಳಿಗೆ ರಜೆ ನೀಡಲಾಗಿದ್ದು, ಮೇ 2ರಿಂದ ಪುನರಾರಂಭಿಸಲು ಸೂಚಿಸಲಾಗಿದೆ. ಆದರೆ ರಾಯಚೂರು ಜಿಲ್ಲೆಯಲ್ಲಿ 42ರಿಂದ 44 ಡಿಗ್ರಿ ಸೆಲ್ಸಿಯಸ್

3 ನೇ ಪುಟಕ್ಕೆ...

ಬುದ್ಧನ ಶಾಂತಿ, ಅಹಿಂಸೆಯ ಸಂದೇಶಗಳು ಇಂದಿನ ಜಗತ್ತಿಗೆ ಅಗತ್ಯ : ಶಾಸಕ ಅಲ್ಲಮಪ್ರಭು ಪಾಟೀಲ್



ಕಲಬುರಗಿ,ಮೇ.02-

ವಿಶ್ವವ್ಯಾಪಿ ಬುದ್ಧನ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಇಂದಿನ ಸಂಘರ್ಷಮಯ ಜಗತ್ತಿಗೆ ಅತ್ಯಗತ್ಯವಾಗಿವೆ. ಬುದ್ಧನ ಜ್ಞಾನೋದಯದ ಕಿರಣಗಳು ಕೇವಲ ಒಂದು ಧರ್ಮಕ್ಕೆ ಸೀಮಿತವಾಗದೆ ಇಡೀ ಮಾನವಕುಲಕ್ಕೆ ಬೆಳಕಾಗಿವೆ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಹೇಳಿದರು. ನಗರದ ಜಗತ್ ವೃತ್ತದ ಬಳಿಯ ಲುಂಬಿನಿ ಉದ್ಯಾನವನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬುದ್ಧ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಶೋಷಿತರ ಪರ ಹೋರಾಟ ನಡೆಸುತ್ತಾ ಅಂತಿಮವಾಗಿ ಬುದ್ಧನ ವೈಜ್ಞಾನಿಕ ಮತ್ತು ಮಾನವೀಯ ತತ್ವಗಳಿಂದ ಪ್ರಭಾವಿತರಾದರು. 1956ರಲ್ಲಿ ಲಕ್ಷಾಂತರ ಅನುಯಾಯಿಗಳೊಂದಿಗೆ ಬೌದ್ಧ ಧರ್ಮ ಸ್ವೀಕರಿಸುವ ಮೂಲಕ ಸಮಾನತೆಯ ಹೊಸ ಯುಗ ಆರಂಭಿಸಿದರು ಎಂದು ಹೇಳಿದರು.

ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾಪರಿನಿರ್ವಾಣ ಈ ಮೂರು ಘಟನೆಗಳು ವೈಶಾಖ ಪೂರ್ಣಿಮೆಯಂದೇ ಸಂಭವಿಸಿರುವುದು ವಿಶ್ವ ಇತಿಹಾಸದ ಅಪರೂಪದ ಸಂಗತಿ. ಅಶೋಕ ಚಕ್ರವರ್ತಿಯ ಕಾಲದಿಂದ ಹರಡಿದ ಈ ಧರ್ಮದ ಹಾದಿಯಲ್ಲಿ ಇಂದಿನ ಯುವ ಪೀಳಿಗೆ ಸಾಗಬೇಕು ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್ ಮಾತನಾಡಿ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಈ ಮೂವರ ಆಶಯ ಒಂದೇ ಆಗಿತ್ತು. ಶಾಂತಿ, ಕರುಣೆ ಮತ್ತು ಸತ್ಯದ ಮಾರ್ಗವನ್ನು ಬುದ್ಧ ತೋರಿಸಿದರೆ, ಸಂವಿಧಾನದ ಮೂಲಕ ಗೌರವಯುತ ಜೀವನವನ್ನು ಅಂಬೇಡ್ಕರ್ ಕಲಿಸಿಕೊಟ್ಟಿದ್ದಾರೆ ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಬಡಿಗೇರ ವಿಶೇಷ ಉಪನ್ಯಾಸ ನೀಡಿ, ಬಸವಣ್ಣನವರ ಅನುಭವ ಮಂಟಪಕ್ಕಿಂತಲೂ 2500 ವರ್ಷಗಳ ಹಿಂದೆಯೇ ಬುದ್ಧ ಸಮಾನತೆಯ ಸಂಘಟನೆ ರೂಪಿಸಿದ್ದರು ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಎ. ನಾಸಿ ಸ್ವಾಗತಿಸಿದರು. ಭಂತೆ ಧಮ್ಮ ಜ್ಯೋತಿ ಬುದ್ಧ ವಂದನೆ ಸಲ್ಲಿಸಿದರು. ಸಿದ್ಧಾರ್ಥ ಚಿಮ್ಮಾಇದ್ಲಾಯಿ ಪ್ರಾರ್ಥನೆ ಗೀತೆ ನಡೆಸಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಬುದ್ಧ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರು ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ,ಕರ್ನಾಟಕ ರಾಜ್ಯ ಸರ್ಕಾರಿ-ಅರೆ ಸರ್ಕಾರಿ ಎಸ್.ಸಿ-ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಬಳ್ಳಿ, ಸಮಾಜದ ಮುಖಂಡರ ಎ.ಬಿ. ಹೊಸಮನೆ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಮಾಜದ ಮುಖಂಡರು ಭಾಗವಹಿಸಿದ್ದರು.

ಗೌತಮ ಬುದ್ಧ ಏಷಿಯಾದ ಬೆಳಕು: ಕೆ ರಾಘವೇಂದ್ರ ಹಿಟ್ನಾಳ



ಕೊಪ್ಪಳ,ಮೇ.02-

ಭಗವಾನ್ ಗೌತಮ ಬುದ್ಧ ಅವರು ಇಡೀ ಏಷಿಯಾದ ಬೆಳಕು ಎಂದು ಶಾಸಕರಾದ ಕೆ ರಾಘವೇಂದ್ರ ಹಿಟ್ನಾಳ ಅವರು ಗೌತಮ ಬುದ್ಧ ವ್ಯಕ್ತಿತ್ವವನ್ನು ಬಣ್ಣಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಮೇ 01ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ನಡೆದ ಭಗವಾನ್ ಬುದ್ಧ ಜಯಂತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಮ್ಮ ಮನೆಯಲ್ಲಿದ್ದ ಸಿರಿ ಸಂಪತ್ತನ್ನು ತ್ಯಜಿಸಿ ಸರಳ ಬದುಕಿಗೆ ಬಂದ ಬುದ್ಧ ಅವರು ಈ ಜಗತ್ತು ಕಂಡ ಮಹಾಮಹೀಮರಾಗಿದ್ದಾರೆ. ಇಂತಹ ಮಹಾತ್ಮನ ಜಯಂತಿಯು ರಾಜ್ಯ ಸರ್ಕಾರದಿಂದ ನಡೆಯುತ್ತಿರುವುದು ವಿಶೇಷ ಎಂದರು. 75 ವರ್ಷಗಳಾದರು ಸಹ ಸಮಾಜದಲ್ಲಿರುವ ಅಸಮಾನತೆಯನ್ನು ಹೋಗಲಾಡಿಸುವ ಕೆಲಸ ಮಾಡಬೇಕಿದೆ. ಅಂದಾಗ ಸಮಾನತೆ ಕಾಣಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಮಾಜಿ ಸಂಸದರಾದ ಕರಡಿ ಸಂಗಣ್ಣ ಅವರು ಮಾತನಾಡಿ, ಬುದ್ಧ ಪೂರ್ಣಿಮೆಯು ಸಂಭ್ರಮದ ದಿನವಾಗಿದೆ. ಬುದ್ಧ, ಬಸವ, ಅಂಬೇಡ್ಕರ ಅವರು ಜಗತ್ತಿಗೆ ಬೆಳಕು ನೀಡಿದ ಮಹಾನ್ ನಾಯಕರು. ಯುದ್ಧ ಬೇಡ ಬುದ್ಧ ಬೇಕು ಎಂದು ಈಗ ಇಡೀ ಜಗತ್ತೇ ಹೇಳುತ್ತಿದೆ. ಸಾಮರಸ್ಯದ ಬದುಕು ಕಟ್ಟಿಕೊಳ್ಳಲಾಗದಂತಹ ಪರಿಸ್ಥಿತಿ ಇಂದು ಜಗತ್ತಿನಲ್ಲಿ ಮುಂದುವರೆದಿದೆ. ಅಹಿಂಸೆ ಬೇಡ, ನಾವು ಬದುಕಬೇಕು ಮತ್ತು ಇತರರಿಗೂ ಬದುಕಲು ಬಿಡಬೇಕು ಎಂಬ ಮಹತ್ವದ ಸಂದೇಶವನ್ನು ಗೌತಮ ಬುದ್ಧ ನೀಡಿದ್ದಾರೆ ಎಂದು ತಿಳಿಸಿದರು.

ನಿವೃತ್ತ ಉಪ ಅಧೀಕ್ಷಕರಾದ ಗಿರೀಶ ಕಾಂಬ್ಳೆ ಅವರು ವಿಶೇಷ ಉಪನ್ಯಾಸ ನೀಡಿ, ಬುದ್ಧ ಅವರು ಕೇವಲ ಭಾರತದ ಬೆಳಕಲ್ಲ; ಅವರು ಇಡೀ ಜಗತ್ತಿನ ಬೆಳಕು. ಬುದ್ಧ ಅಂದರೆ ಅದು ಮಹಾಸಾಗರ ಇದ್ದಂತೆ. ನಮ್ಮ ಮುಂದಿನ ಏಳ್ಗೇಗೆ, ನಮ್ಮ ಮುಂದಿನ ಬಾಳ್ವೆಗೆ ಬುದ್ಧ ಬೇಕು. ಬುದ್ಧನನ್ನು ಅರ್ಥ ಮಾಡಿಕೊಂಡವರು ಈ ಜಗತ್ತಿನಲ್ಲಿ ನೆಮ್ಮದಿಯಿಂದ ಬದುಕುತ್ತಾರೆ. ಬುದ್ಧ ಒಂದು ಜಾತಿ, ಭಾಷೆ, ಪ್ರದೇಶ, ದೇಶಕ್ಕೆ ಸೀಮೀತರಾಗಿಲ್ಲ. ಅವರ ವಿಚಾರ ವಿಶ್ವವ್ಯಾಪಿ ಎಂದರು.

ಬುದ್ಧನ ಆಶಯದಂತೆ ಡಾ.ಅಂಬೇಡ್ಕರ್ ಅವರು ಸಂವಿಧಾನ ಬರೆದರು ಎಂದು ತಿಳಿಸಿದರು. ರೋಗಿಯನ್ನು, ಸತ್ತವನನ್ನು ನೋಡಿದ ಗೌತಮ ಬುದ್ಧ ಆಸ್ತಿ ಕೇಳಲಿಲ್ಲ; ಸಂಪತ್ತು ಕೇಳಲಿಲ್ಲ. ಈ ಭೂಮಿಯ ಮೇಲೆ ಜನಿಸಿದ ಪ್ರತಿಯೊಬ್ಬರಿಗೂ ನೆಮ್ಮದಿಯಿಂದ ಬದುಕುವ ಹಕ್ಕಿದೆ ಎಂದು ತಿಳಿಸಿದವರು ಬುದ್ಧ. ಬುದ್ಧ ಎಂದರೆ ಶಾಂತಿಯ ದ್ಯೋತಕ. ಆದರೆ ಬುದ್ಧನ ವಿಚಾರಗಳು ಬೆಳೆಯಲು ಕೆಲವರು ಬಿಡುತ್ತಿಲ್ಲ ಎಂದರು.

ಸಮಾರಂಭದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ, ಪ್ರಸನ್ನ ವೀರಣ್ಣ ಗಡಾದ್, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ನಗರಸಭೆ ಪೌರಾಯುಕ್ತರಾದ ಮಂಜುನಾಥ ಗುಂಡೂರ, ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಮುಖಂಡರಾದ ಕೃಷ್ಣ ಇಟ್ಟಂಗಿ, ಮುತ್ತುರಾಜ್ ಕುಷ್ಟಗಿ, ಸಿದ್ರಾಮ ಹೊಸಮನಿ, ನಾಗರಾಜ ಬೆಲ್ಲದ, ರಘು ಬೆಲ್ಲದ, ಜಗದೀಶ ಚಲವಾದಿ, ಹನುಮಂತಪ್ಪ ಬಂಗಾಳಿಗಿಡದ, ಮಹಾವೀರ ಅಳ್ಳಳ್ಳಿ, ಗವಿಸಿದ್ದಪ್ಪ ಬೆಲ್ಲದ ಹಾಗೂ ಇತರರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಸ್ವಾಗತಿಸಿದರು. ಬಿ ಎನ್ ಹೊರಪೇಟೆ ನಿರೂಪಿಸಿದರು. ನಗರಸಭೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಇದ್ದರು.

ಆಗಸ್ಟ್‌ನಲ್ಲಿ ಸುಪ್ರೀಂ ಕೋರ್ಟ್‌ನಿಂದ ಸಮಾಧಾನ ಸಮಾರೋಹ್ ವಿಶೇಷ ಲೋಕ ಅದಾಲತ್ ಆಯೋಜನೆ: ಅನು ಶಿವರಾಮನ್



ಬಳ್ಳಾರಿ,ಮೇ 02-

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ತ್ವರಿತ ವಿಲೇವಾರಿಗಾಗಿ, ಬರುವ ಆಗಸ್ಟ್ 21, 22 ಮತ್ತು 23 ರಂದು 'ಸಮಾಧಾನ ಸಮಾರೋಹ್' ಎಂಬ ವಿಶೇಷ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಹಾಗೂ ಕೆಎಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷರಾದ ಅನು ಶಿವರಾಮನ್ ಅವರು ಹೇಳಿದರು.

'ಸಮಾಧಾನ ಸಮಾರೋಹ್' ವಿಶೇಷ ಲೋಕ ಅದಾಲತ್ ಕುರಿತು, ಆನ್ ಲೈನ್ ಮೂಲಕ ಕರ್ನಾಟಕ ಹೈಕೋರ್ಟ್ ನ ಮೊದಲ ಮಹಡಿಯಲ್ಲಿರುವ ಕಾರ್ಯನಿರ್ವಾಹಕ ಅಧ್ಯಕ್ಷರ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಸುಪ್ರೀಂ ಕೋರ್ಟ್ ಪ್ರಕರಣಗಳ ಇತ್ಯರ್ಥಕ್ಕೆ ಇದು ವಿಶೇಷ ಲೋಕ್ ಅದಾಲತ್ ಆಗಿದೆ. ಸಾರ್ವಜನಿಕರಿಗೆ ಇದು ಸುವರ್ಣಾವಕಾಶವಾಗಿದ್ದು, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ದಾವೆಗಳನ್ನು ಪರಸ್ಪರ ಒಪ್ಪಿಗೆ ಮತ್ತು ಸಂಧಾನದ ಮೂಲಕ ಬಗೆಹರಿಸಿ, ದಾವೆದಾರರಿಗೆ ಶೀಘ್ರ ನ್ಯಾಯ ಒದಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಹೈಕೋರ್ಟ್ ಕಾನೂನು ಸೇವಾ ಸಮಿತಿಯ ಅಧ್ಯಕ್ಷ ನ್ಯಾಯಮೂರ್ತಿ ಆರ್.ದೇವದಾಸ್ ಅವರು ಮಾತನಾಡಿ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿರುವ ಸಾವಿರಾರು ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು 'ವಿಶೇಷ ಲೋಕ್ ಅದಾಲತ್' ಎಂಬ ವಿನೂತನ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಹಿಂದೆ ಎಂದೂ ನಡೆಯದ ಈ ವಿಶೇಷ ಕಾರ್ಯಕ್ರಮದ ಮೂಲಕ ಜನಸಾಮಾನ್ಯರಿಗೆ ತಮ್ಮ ಕಾನೂನು ಹೋರಾಟವನ್ನು ಸುಲಭವಾಗಿ ಮುಕ್ತಾಯಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ರಾಜ್ಯದ 4,328 ಪ್ರಕರಣಗಳ ಗುರುತಿಸುವಿಕೆ:

ಕರ್ನಾಟಕ ರಾಜ್ಯದ ವಿವಿಧ ತಾಲೂಕು ಮತ್ತು ಜಿಲ್ಲಾ ಮಟ್ಟಗಳಿಂದ ಸುಪ್ರೀಂ ಕೋರ್ಟ್‌ಗೆ ಹೋದ ಸುಮಾರು 4,328 ಪ್ರಕರಣಗಳನ್ನು ಈಗಾಗಲೇ ಸುಪ್ರೀಂ ಕೋರ್ಟ್ ಗುರುತಿಸಿ, ಪಟ್ಟಿಯನ್ನು ಕಳುಹಿಸಿಕೊಟ್ಟಿದೆ. ರಾಜಿ ಸಂಧಾನದ ಮೂಲಕ ಬಗೆಹರಿಸಬಹುದಾದ ಪ್ರಕರಣಗಳನ್ನು ಗುರುತಿಸಿ, ಅವುಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವುದು ಈ ಲೋಕ್ ಅದಾಲತ್‌ನ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.


ವರ್ಷಾನುಗಟ್ಟಲೆ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುವ ಕಾನೂನು ಪ್ರಕ್ರಿಯೆಗಳು ಜನರಿಗೆ ಹೊರೆಯಾಗಬಹುದು. ಈ ಲೋಕ್ ಅದಾಲತ್ ಮೂಲಕ ಪರಸ್ಪರ ಒಪ್ಪಿಗೆಯ ಮೇರೆಗೆ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವುದರಿಂದ ಸಮಯ ಮತ್ತು ಹಣ ಎರಡೂ ಉಳಿತಾಯವಾಗಲಿದೆ. ತಮ್ಮ ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವವರು ಕೂಡಲೇ ಸಂಬಂಧಪಟ್ಟ ತಾಲ್ಲೂಕು ಅಥವಾ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಿ ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬೇಕೆಂದು ವಿನಂತಿಸಿದರು.

ವಿಡಿಯೋ ಸಂವಾದ ಬಳಿಕ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು, ಸಾರ್ವಜನಿಕರು ಮತ್ತು ದಾವೆದಾರರು ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬೇಕು. ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಬಹುದು ಎಂದರು.

ಸುಪ್ರೀಂ ಕೋರ್ಟ್ ನೀಡಿರುವ ಪಟ್ಟಿಯ ಅನ್ವಯ, ಕರ್ನಾಟಕ ರಾಜ್ಯದಿಂದ ಸುಮಾರು 4,328 ಪ್ರಕರಣಗಳನ್ನು ಗುರುತಿಸಲಾಗಿದೆ. ಈ ಪೈಕಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಿಗೆ ಸಂಬಂಧಿಸಿದ 109 ಪ್ರಕರಣಗಳು ಇತ್ಯರ್ಥಕ್ಕೆ ಲಭ್ಯವಿವೆ. ಸುಪ್ರೀಂ ಕೋರ್ಟ್‌ಗೆ ಅಲೆಯುವ ಬದಲು, ಸ್ಥಳೀಯವಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಥವಾ ತಾಲೂಕು ಕಾನೂನು ಸೇವಾ ಸಮಿತಿಗಳ ಮೂಲಕವೇ ಸಂಧಾನ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು ಎಂದು ತಿಳಿಸಿದರು.

ಪಕ್ಷಕಾರರು ಭೌತಿಕವಾಗಿ ಹಾಜರಾಗಲು ಸಾಧ್ಯವಾಗದಿದ್ದರೆ, ವಿಡಿಯೋ ಕಾನ್ಫರೆನ್ಸ್ ಮೂಲಕವೂ ಸಂಧಾನದಲ್ಲಿ ಪಾಲ್ಗೊಳ್ಳಲು ಅವಕಾಶವಿದೆ. ಉದಾಹರಣೆಗೆ, ಒಬ್ಬರು ಬಳ್ಳಾರಿಯಲ್ಲಿದ್ದು ಇನ್ನೊಬ್ಬರು ಮುಂಬೈ ಅಥವಾ ವಿದೇಶದಲ್ಲಿದ್ದರೂ ತಂತ್ರಜ್ಞಾನದ ಮೂಲಕ ಸಂಧಾನ ನಡೆಸಬಹುದು. ತರಬೇತಿ ಪಡೆದ ಪರಿಣಿತ ಮಧ್ಯಸ್ಥಿಕೆದಾರರು ಮತ್ತು ವಕೀಲರು ಉಭಯ ಪಕ್ಷಗಳ ನಡುವೆ ಸಮಾಲೋಚನೆ ನಡೆಸಿ, ಇಬ್ಬರಿಗೂ ಒಪ್ಪಿಗೆಯಾಗುವಂತಹ ಪರಿಹಾರ ಕಂಡುಕೊಳ್ಳಲು ನೆರವಾಗುತ್ತಾರೆ. ಇದರಲ್ಲಿ ವೈವಾಹಿಕ ವಿವಾದಗಳು, ಅಪಘಾತ ವಿಮೆ ಪರಿಹಾರ, ಚೆಕ್ ಬೌನ್ಸ್ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ಕ್ರಿಮಿನಲ್ ರಾಜಿ ಪ್ರಕರಣಗಳು ಹಾಗೂ ಕಾರ್ಮಿಕ ವಿವಾದಗಳನ್ನು ಇಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಹೇಳಿದರು.

ನ್ಯಾಯಾಲಯದಲ್ಲಿ ಒಬ್ಬರು ಗೆದ್ದು ಇನ್ನೊಬ್ಬರು ಸೋಲುತ್ತಾರೆ. ಆದರೆ ಸಂಧಾನದ ಮೂಲಕ ಪ್ರಕರಣ ಇತ್ಯರ್ಥವಾದರೆ ಇಬ್ಬರೂ ಗೆದ್ದಂತೆ. ಇದು ಸಮಯ ಮತ್ತು ಹಣದ ಉಳಿತಾಯ ಮಾಡುವುದಲ್ಲದೆ, ಸಮಾಜದಲ್ಲಿ ಶಾಂತಿ ಮತ್ತು ಬಾಂಧವ್ಯವನ್ನು ಕಾಪಾಡುತ್ತದೆ. ನಿಮ್ಮ ಪ್ರಕರಣವು ಸುಪ್ರೀಂ ಕೋರ್ಟ್ ಪಟ್ಟಿಯಲ್ಲಿ ಇಲ್ಲದಿದ್ದರೂ, ವೆಬ್‌ಸೈಟ್ ಮೂಲಕ ನೋಂದಾಯಿಸಿಕೊಂಡು ಈ ಸೌಲಭ್ಯ ಪಡೆಯಬಹುದು ಎಂದು ಅವರು ತಿಳಿಸಿದರು. ಈ ವೇಳೆ ಮಾಧ್ಯಮ ಪ್ರತಿನಿಧಿಗಳು ಹಾಗೂ ನ್ಯಾಯಾಲಯದ ಸಿಬ್ಬಂದಿ ಇದ್ದರು.



ಭಿಕ್ಷೆ ಬೇಡಿ ಎಸೆಸೆಲ್ಸಿಯಲ್ಲಿ 529 ಅಂಕ ಪಡೆದ ವಿದ್ಯಾರ್ಥಿನಿಗೆ ಜಿಲ್ಲಾಧಿಕಾರಿಗಳಿಂದ ಸನ್ಮಾನ

ಕಲಬುರಗಿ,ಮೇ.02-

ಭಿಕ್ಷೆ ಬೇಡಿಕೊಂಡು ಜೀವನ ಸಾಗಿಸುತ್ತಾ ಎಸೆಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿನಿ ಸುಜಾತಾ ಭೀಮಶಾ ಗೊಲ್ಲರ್ ಅವರನ್ನು ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಅವರು ಸನ್ಮಾನಿಸಿ ಪ್ರೋತ್ಸಾಹಿಸಿದರು.

ಆಳಂದ ತಾಲೂಕಿನ ಮಾದನ ಹಿಪ್ಪರಗಾ ಸರ್ಕಾರಿ ಪಬ್ಲಿಕ್ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿಯಾಗಿರುವ ಸುಜಾತಾ, ಒಟ್ಟು 625 ಅಂಕಗಳಲ್ಲಿ 529 ಅಂಕಗಳನ್ನು ಪಡೆದು ಶೇ.84.64 ಫಲಿತಾಂಶ ಸಾಧಿಸಿದ್ದಾರೆ.

ಸಂಕಷ್ಟಕರ ಪರಿಸ್ಥಿತಿಯಲ್ಲಿಯೇ ಅವರು ಸಾಧಿಸಿದ ಈ ಯಶಸ್ಸು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಅವರು, ಸುಜಾತಾ ಅವರನ್ನು ತಮ್ಮ ಕಚೇರಿಗೆ ಕರೆಯಿಸಿಕೊಂಡು ಸಿಹಿ ತಿನಿಸಿ ಸನ್ಮಾನಿಸಿದರು.

ಅಲ್ಲದೆ, ವಿದ್ಯಾರ್ಥಿನಿಗೆ ನೋಟ್ ಬುಕ್, ಶಾಲಾ ಬ್ಯಾಗ್, ಪೆನ್ ಸೇರಿದಂತೆ ಅಗತ್ಯ ವಿದ್ಯಾ ಸಾಮಗ್ರಿಗಳನ್ನು ವಿತರಿಸಿದರು.

ಸುಜಾತಾ ಅವರ ಸಾಧನೆ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ ಎಂದು ಆಶಿಸಿದ ಜಿಲ್ಲಾಧಿಕಾರಿಗಳು, ಅವರ ಮುಂದಿನ ವಿದ್ಯಾಭ್ಯಾಸ ಯಶಸ್ವಿಯಾಗಲಿ ಎಂದು ಹಾರೈಸಿದ್ದಾರೆ.

ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಶೂನ್ಯ : ಕಾಂಗ್ರೆಸ್ ವಿರುದ್ಧ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ



ಸೇಡಂ,ಮೇ.02-

ಹಳೆ ಮೈಸೂರು ಭಾಗಕ್ಕೆ ಹೋಲಿಸಿದರೆ ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ತೀವ್ರ ಹಿನ್ನಡೆ ಅನುಭವಿಸಿದೆ. ಈ ಭಾಗದ ಅಭಿವೃದ್ಧಿ ಆಗಿಲ್ಲ ಎಂದು ಸ್ವತಃ ಕಾಂಗ್ರೆಸ್ ನಾಯಕರೇ ಒಪ್ಪಿಕೊಂಡಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಜೆಡಿಎಸ್ ವತಿಯಿಂದ ಆಯೋಜಿಸಿದ್ದ ಜನರೊಂದಿಗೆ ಜನತಾದಳದ ಬೃಹತ್ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ಕೆಕೆಆರ್‌ಡಿಬಿ ಮಂಡಳಿಗೆ ಪ್ರತಿವರ್ಷ ₹5 ಸಾವಿರ ಕೋಟಿ ಅನುದಾನ ನೀಡಲಾಗುತ್ತಿದ್ದರೂ ಯಾವುದೇ ಸ್ಪಷ್ಟ ಪ್ರಗತಿ ಕಾಣುತ್ತಿಲ್ಲ ಎಂದು ಆರೋಪಿಸಿದರು.

ಕಲಬುರಗಿ ಸೇರಿದಂತೆ ಹಲವು ನಗರಗಳ ರಸ್ತೆಗಳು ಗುಂಡಿಮಯವಾಗಿವೆ. ರಸ್ತೆ ದುರಸ್ತಿ ಮಾಡಲು ಹಣವಿಲ್ಲವೇ? ಸಾವಿರಾರು ಕೋಟಿ ರೂಪಾಯಿ ಅನುದಾನ ಎಲ್ಲಿಗೆ ಹೋಗುತ್ತಿದೆ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ 18 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಎಸೆಸೆಲ್ಸಿ ಫಲಿತಾಂಶದಲ್ಲಿ ಜಿಲ್ಲೆ ಕೊನೆಯ ಸ್ಥಾನದಲ್ಲಿದೆ. ಮಕ್ಕಳ ಭವಿಷ್ಯದ ಬಗ್ಗೆ ಕಾಳಜಿ ಇಲ್ಲದೆ ರಾಜಕಾರಣಿಗಳು ಕೇವಲ ಭಾಷಣಗಳಿಗೆ ಸೀಮಿತರಾಗಿದ್ದಾರೆ ಎಂದು ಟೀಕಿಸಿದರು.

ಆಂಧ್ರ ಪ್ರದೇಶದ ಸ್ಟೀಲ್ ಫ್ಯಾಕ್ಟರಿಗೆ ಮರುಜೀವ ನೀಡಿದಂತೆ ಸೇಡಂನ ಸಿಸಿಐ ಕಾರ್ಖಾನೆಯನ್ನು ಪುನರಾರಂಭಿಸಲು ಪ್ರಯತ್ನಗಳು ನಡೆಯುತ್ತಿವೆ. ಇದಕ್ಕೆ ಸಕಾರಾತ್ಮಕ ಸ್ಪಂದನೆ ದೊರೆತಿದೆ ಎಂದು ಹೇಳಿದರು.

ಹೆಚ್.ಡಿ. ದೇವೇಗೌಡರು ಪ್ರಧಾನಿಯಾಗಿದ್ದಾಗ ಭೀಮಾ ನದಿ ನೀರಾವರಿ ಯೋಜನೆ ಮೂಲಕ ನೀರು ಒದಗಿಸಿದ್ದರು. ಹೆಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಎರಡು ಅವಧಿಗಳಲ್ಲೂ ರೈತರ ಸಾಲ ಮನ್ನಾ ಮಾಡಿದ್ದಾರೆ ಎಂದು ನೆನಪಿಸಿದರು.

ಸಚಿವ ಡಾ. ಶರಣಪ್ರಕಾಶ ಪಾಟೀಲ ವಿರುದ್ಧ ವಾಗ್ದಾಳಿ ನಡೆಸಿದ ನಿಖಿಲ್, ಹಲವು ಬಾರಿ ಶಾಸಕರಾಗಿ, ಸಚಿವರಾಗಿದ್ದರೂ ಕ್ಷೇತ್ರದಲ್ಲಿ ಗುಣಮಟ್ಟದ ವೈದ್ಯಕೀಯ ಸೌಲಭ್ಯಗಳಿಲ್ಲ. ಸಿಮೆಂಟ್ ಕಾರ್ಖಾನೆಗಳಿದ್ದರೂ ಸ್ಥಳೀಯರಿಗೆ ಉದ್ಯೋಗ ಸಿಗದೆ ವಲಸೆ ಹೋಗುತ್ತಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ಸರ್ಕಾರ ಬಂದರೆ ಸ್ಥಳೀಯರಿಗೆ ಖಾಸಗಿ ಕಾರ್ಖಾನೆಗಳಲ್ಲಿ ಶೇ.50ರಷ್ಟು ಉದ್ಯೋಗ ಮೀಸಲು ನೀಡುವ ಕಾನೂನು ತರಲಾಗುವುದು ಎಂದು ಭರವಸೆ ನೀಡಿದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ ಗುತ್ತೇದಾರ್ ಮಾತನಾಡಿ, ರೈತರು, ಬಡವರು ಹಾಗೂ ಯುವಕರ ಪರವಾಗಿ ಧ್ವನಿ ಎತ್ತುತ್ತಿರುವ ನಾಯಕ ಎಚ್.ಡಿ. ಕುಮಾರಸ್ವಾಮಿ ಎಂದರು.

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಬಿ.ಎಂ. ಕೃಷ್ಣಾರೆಡ್ಡಿ ಹಾಗೂ ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ ಮಾತನಾಡಿ, ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನರಿಗೆ ಶಾಶ್ವತ ಪ್ರಯೋಜನ ನೀಡುತ್ತಿಲ್ಲ. ಅವು ಕೇವಲ ಪ್ರಚಾರದ ತಂತ್ರಗಳಾಗಿವೆ ಎಂದು ಟೀಕಿಸಿದರು.

ಈ ವೇಳೆಯಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ, ದೊಡ್ಡಪ್ಪಗೌಡ ಪಾಟೀಲ ನರಿಬೋಳ, ಸೂರಜ್ ಸೊನಿ ನಾಯಕ, ನಾಸೀರ್ ಹುಸೇನ್, ಕೃಷ್ಣಾರೆಡ್ಡಿ, ಶಿವಕುಮಾರ ನಾಟೀಕರ್, ಮಹೇಶ್ವರಿ ವಾಲಿ, ಜಗನ್ನಾಥರೆಡ್ಡಿ ಗೋಟೂರ್, ಬಸವರಾಜ ಬೀರಬಿಟ್ಟಿ, ಗುರುರಾಜ ಹುಣಸಿಮರದ, ದೇವೆಗೌಡ ತೆಲ್ಲೂರ, ರಾಜಕುಮಾರ ಬಡದಾಳ, ಚಾಂದಪಾಶ ಬುರುಗಪಲ್ಲಿ, ಪ್ರವೀಣ ಜಾಧವ, ಹಸನಪ್ಪ ಮೆತ್ರಿ, ಗೀತಾ,ಪಲ್ಲವಿ ಗುತ್ತೇದಾರ, ಶಂಭುಲಿಗ ನಾಟೀಕರ್ ಶಿವಪುತ್ರಪ್ಪ ಮೊಘ ಸೇರಿದಂತೆ ಅನೇಕರಿದ್ದರು.

ಜಗನ್ನಾಥ ತರನಳ್ಳಿ ನಿರೂಪಿಸಿ ವಂದಿಸಿದರು. ಜೆಡಿಎಸ್ ತಾಲೂಕು ಅಧ್ಯಕ್ಷ ವೆಂಕಟರೆಡ್ಡಿ ಪಾಟೀಲ ಗಾಡದಾನಾ ಪ್ರಾಸ್ತವಿಕ ಮಾತನಾಡಿದರು.

ಎಐಟಿಯುಸಿ ನೇತೃತ್ವದಲ್ಲಿ ವಿಶ್ವ ಕಾರ್ಮಿಕ ದಿನಾಚರಣೆ



ಹರಪನಹಳ್ಳಿ,ಮೇ.02-

ಕಾರ್ಮಿಕರು ಸೃಷ್ಟಿಸುವ ಸಂಪತ್ತಿನ ಶೇ.70ರಷ್ಟು ಲಾಭ ಬಂಡವಾಳಶಾಹಿಗಳ ಪಾಲಾಗುತ್ತಿದ್ದು, ಇಂದು ಜಾತಿ ಹಾಗೂ ಧರ್ಮದ ಹೆಸರಲ್ಲಿ ಕಾರ್ಮಿಕ ವರ್ಗ ಒಡೆಯುತ್ತಿರುವುದು ದೊಡ್ಡ ಸವಾಲಾಗಿದೆ ಎಂದು ಕಾರ್ಮಿಕ ಮುಖಂಡ ಗುಡಿಹಳ್ಳಿ ಹಾಲೇಶ್ ಅಭಿಪ್ರಾಯಪಟ್ಟರು.

ಪಟ್ಟಣದ ಜೂನಿಯರ್ ಕಾಲೇಜು ಮುಂಭಾಗದಲ್ಲಿ ಎಐಟಿಯುಸಿ ನೇತೃತ್ವದಲ್ಲಿ ಆಯೋಜಿಸಿದ್ದ ವಿಶ್ವ ಕಾರ್ಮಿಕ ದಿನಾಚರಣೆಯ ನಿಮಿತ್ತ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕಾರ್ಮಿಕರು ದಿನನಿತ್ಯ ಬೆವರು ಸುರಿಸಿ ದುಡಿದರೂ ಜಾಗತೀಕರಣ ಹಾಗೂ ಖಾಸಗೀಕರಣ ನೀತಿಗಳ ಪರಿಣಾಮ ಹೊಟ್ಟೆ-

ಬಟ್ಟೆಗೆ ಕಷ್ಟಪಡುವ ಸ್ಥಿತಿ ನಿರ್ಮಾಣವಾಗಿದೆ. ದೇಶದ ಸಂಪತ್ತನ್ನು ಸೃಷ್ಟಿಸುವ ಕಾರ್ಮಿಕರ ಶ್ರಮವನ್ನು ಗುರುತಿಸುವ ದಿನವೇ ವಿಶ್ವ ಕಾರ್ಮಿಕ ದಿನ ಎಂದು ಹೇಳಿದರು.

ಅಂಗನವಾಡಿ ಕಾರ್ಯಕರ್ತರ ಸಂಘದ ತಾಲೂಕು ಅಧ್ಯಕ್ಷೆ ಟಿ. ಬಸಮ್ಮ ಮಾತನಾಡಿ, 1886ರಲ್ಲಿ ಅಮೇರಿಕದಲ್ಲಿ ಕಾರ್ಮಿಕರು ದಿನಕ್ಕೆ 8 ಗಂಟೆ ಕೆಲಸದ ಬೇಡಿಕೆಗಾಗಿ ಹೋರಾಟ ನಡೆಸಿದರು. ಅದೇ ವರ್ಷ ಮೇ 4ರಂದು ಚಿಕಾಗೋದ ಹೇ ಮಾರ್ಕೆಟ್‌ನಲ್ಲಿ ನಡೆದ ಶಾಂತಿಯುತ ಸಭೆಯ ಮೇಲೆ ಪೊಲೀಸರು ಗುಂಡು ಹಾರಿಸಿ ಹಲವಾರು ಕಾರ್ಮಿಕರನ್ನು ಬಲಿ ಪಡೆದರು. ಅವರ ತ್ಯಾಗದ ಸ್ಮರಣಾರ್ಥವಾಗಿ ಮೇ 1ರಂದು ಅಂತರರಾಷ್ಟ್ರೀಯ ಕಾರ್ಮಿಕರ ದಿನ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿಪಿಐ ತಾಲೂಕು ಕಾರ್ಯದರ್ಶಿ ರಮೇಶ ನಾಯ್ಕ್, ಕಾರ್ಮಿಕ ಮುಖಂಡರಾದ ಹನುಮಂತಪ್ಪ, ಕೊಟ್ರೇಶ್ ಬಾಳಿಗನೂರು, ಪಿ. ಪುಷ್ಪ, ಸುಮಂಗಲ, ದೊಡ್ಡ ಬಸವರಾಜ್, ಕೆ. ಶಿವರಾಮ್, ಅರುಣ್ ಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಕಡ್ಡಾಯವಾಗಿ ಬಳಸಿ, ಮಲೇರಿಯಾ ರೋಗ ಹರಡದಂತೆ ನೋಡಿಕೊಳ್ಳಿ: ಡಾ.ಸುರೇಂದ್ರ ಬಾಬು

ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ಪ್ರಕರಣಗಳ ಸಂಖ್ಯೆಯನ್ನು ಶೂನ್ಯಕ್ಕೆ ಇಳಿಸುವ ದಿಶೆಯಲ್ಲಿ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ದಶಕಗಳ ಹಿಂದೆ ಪ್ರತಿದಿನ ವರದಿಯಾಗುತ್ತಿದ್ದ ಮಲೇರಿಯಾ ಪ್ರಕರಣಗಳು ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಸಿಬ್ಬಂದಿಯರ ಪರಿಶ್ರಮದಿಂದ ಹೆಚ್ಚು ಪ್ರಕರಣಗಳು ಕಂಡು ಬರುತ್ತಿದ್ದ ಈಚನಾಳ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೃಷ್ಣಾ ನದಿಯ ದ್ವೀಪ ಪ್ರದೇಶದ ಕೆಲವು ಹಳ್ಳಿಗಳಲ್ಲಿ ನಿರಂತರವಾಗಿ ನಿಗಾವಹಿಸಿ ನಿಯಂತ್ರಣ ಮಾಡಲಾಗಿದ್ದು, ವಲಸೆ ಜನವಸತಿ, ದೊಡ್ಡಿ, ಹಟ್ಟಿಗಳ ಜನರ ನಿಗಾವಹಿಸಿ ಜ್ವರ ಬಂದ ತಕ್ಷಣ ರಕ್ತಲೇಪನ ಹಾಗೂ ಖಚಿತ ಪಟ್ಟಲ್ಲಿ ಚಿಕಿತ್ಸೆ ಒದಗಿಸಲಾಗುತ್ತಿದೆ. ಕುಟುಂಬದ ಸದಸ್ಯರಲ್ಲಿ ಯಾರಿಗಾದರೂ ಜ್ವರ ಕಂಡುಬಂದಲ್ಲಿ ನಿರ್ಲಕ್ಷ್ಯ ಮಾಡದೆ ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಹಕಾರವಾಗುವುದು ಎಂದರು.

ಜಿಲ್ಲಾ ಸರ್ವೆಕ್ಷಣಾ ಮತ್ತು ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಗಣೇಶ್ ಕೆ. ಅವರು ಮಾತನಾಡಿ, ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ, ಮಣ್ಣು ಹಾಕಿ ಮುಚ್ಚಲು, ಮಲಗುವಾಗ ಇಲಾಖೆಯಿಂದ ಒದಗಿಸಿದ ಮೆಡಿಕೆಟೆಡ್ ಸೊಳ್ಳೆಪರದೆಗಳ ಬಳಕೆ, ಬೇರೆ ಊರಿನಿಂದ ಬಂದಾಗ ಜ್ವರ ಇದ್ದರೆ ತಕ್ಷಣ ಪರೀಕ್ಷೆ, ಮಾಡಿಸಲು ತಿಳಿಸಿದರಲ್ಲದೆ ಕೀಟ ನಾಶಕ ಸಿಂಪರಣೆಗೆ ಇಲಾಖೆಯ ತಂಡ ಮನೆಗಳಿಗೆ ಬಂದಾಗ ಜನತೆ ಸಂಪೂರ್ಣ ಸಹಕಾರ ನೀಡಲು ತಿಳಿಸಿದರು.

ಇದೇ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮರೇಶ ಪಾಟೀಲ್, ಆಡಳಿತ ವೈದ್ಯಾಧಿಕಾರಿ ಡಾ.ಹನಮಂತರಾಯ ತಳ್ಳಳ್ಳಿ, ವೈದ್ಯಾಧಿಕಾರಿ ಡಾ.ರಾಜೇಶ್ವರಿ ಮುಖಂಡರಾದ ಆದೇಪ್ಪ, ಪೀರಸಾಬ್, ಬಸವರಾಜ್, ಹನುಮಂತ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅಡಿವೆಪ್ಪ, ಶರಣಬಸವ ಪಾಟೀಲ್, ಬಸವರಾಜ್, ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ, ಅಮರೇಶ, ಜಗದೀಶ್, ಅಲಿ, ಪಿಹೆಚ್‌ಸಿಓ, ಅಂಬಮ್ಮ, ಮಲ್ಲಮ್ಮ, ರಾಧಾ, ಹುಲಿಗೆಮ್ಮ, ಸಿಹೆಚ್‌ಓ ಪ್ರತಾಪ್, ಸಿದ್ದಲಿಂಗ, ಶಾರದಾ, ಎಪಡಮಾಲಿಜಿಷ್ಟ್ ಅಶೋಕ ಮಡಿರ್ಕ, ಫಾರ್ಮಸಿ ಅಧಿಕಾರಿ ಜುಬೇರ್, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ನರೇಗಾ ಕೆಲಸದಲ್ಲಿ ಕೃಷಿ ಕೂಲಿಕಾರರಿಂದ ವಿಶ್ವ ಕಾರ್ಮಿಕರ ದಿನ ಆಚರಣೆ

ಉದ್ಯೋಗ ಖಾತ್ರಿ ಕೆಲಸದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಕಲ್ಪಿಸಬೇಕು

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಬಿಎಫ್ಟಿ ರಂವಿಚಂದ್ರ, ನಾಯಕ, ಕೃಷಿ ಕೂಲಿಕಾರರ ಸಂಘಟನೆ ತಾಲ್ಲೂಕು ಅಧ್ಯಕ್ಷ ಲಿಂಗಣ್ಣ ಮಕಾಶಿ, ಹೇರುಂಡಿ ಗ್ರಾಮ ಘಟಕ ಅಧ್ಯಕ್ಷ ಶಿವಣ್ಣ,ಕಾರ್ಯದರ್ಶಿ ದೇವಮ್ಮ ಸೇರಿದಂತೆ ಇತರರು ಇದ್ದರು.

ಗ್ಯಾಸ್ ಬೆಲೆ ಏರಿಕೆ: ಕೇಂದ್ರ ಸರಕಾರದ ವಿರುದ್ಧ ಡಾ.ರಝಾಕ ಉಸ್ತಾದ ಖಂಡನೆ

ಪರದಾಡುತ್ತಿದ್ದ ಹೋಟೆಲ ಮಾಲಿಕರು ಈಗ ಬೆಲೆ ಹೆಚ್ಚಳದಿಂದ ಜೀವನ ದುಸ್ತರವಾಗಿದೆ.

ಪಂಚ ರಾಜ್ಯಗಳ ಚುನಾವಣೆ ಮುಗಿಯುವವರೆಗೂ ಕಾದು, ಮತದಾನ ಮುಗಿದ ತಕ್ಷಣ ಜನರಿಗೆ ಕೇಂದ್ರದ ಬಿಜೆಪಿ ಸರಕಾರ ಬೆಲೆಯೇರಿಕೆಗೆ ಮುಂದಾಗಿದೆ ಎಂದರೆ ಇವರಿಗೆ ಚುನಾವಣೆ ಮಾತ್ರ ಮುಖ್ಯ, ಜನರ ಬದುಕಲ್ಲ. ವಾಣಿಜ್ಯ ಗ್ಯಾಸ್ ದರ ಏರಿಕೆಯಿಂದ ಕೇವಲ ವ್ಯಾಪಾರಸ್ಥರು ಮಾತ್ರ ಸಂಕಷ್ಟಕ್ಕೆ ಒಳಗಾಗುವದಿಲ್ಲ, ದೇಶದ ಪ್ರತಿಯೊಂದು ಮನೆಯ ಮೇಲೂ ದರ ಏರಿಕೆಯ ಪರಿಣಾಮ ಬೀರುತ್ತದೆ. ಗ್ಯಾಸ್ ದರ ಏರಿಕೆಯಿಂದ ಹೋಟೆಲ್ ಗಳು, ರೆಸ್ಟೊರೆಂಟ್ ಗಳು, ಸಣ್ಣ ಪುಟ್ಟ ಹ್ಯಾಂಟೀನ್ ಗಳು ಹಾಗೂ ಕೆಟೆರಿಂಗ್ ಸೇವೆಗಳಿಗೆ ತಮ್ಮ ಆಹಾರ ಪದಾರ್ಥಗಳ ದರ ಹೆಚ್ಚಿಸುವದು ಅನಿವಾರ್ಯವಾಗುತ್ತದೆ, ಇದರಿಂದ ಸಾರ್ವಜನಿಕರು ಅದರ ಹೊರೆ ಹೊರಬೇಕಾಗುತ್ತದೆ.

ಕೇಂದ್ರ ಬಿಜೆಪಿ ಸರಕಾರದ ಟೊಳ್ಳು ವಿದೇಶಾಂಗ ನೀತಿಯಿಂದಾಗಿ ಜನಸಾಮಾನ್ಯರು ಸಂಕಷ್ಟ ಅನುಭವಿಸುವಂತಾಗಿದೆ, ಜಾಗತಿಕ ಪರಸ್ಥಿತಿಗಳು ಬದಲಾಗುತ್ತಿರುತ್ತವೆ, ಇಂತಹ ಸಂದರ್ಭದಲ್ಲಿ ಭಾರತದ ನಾಗರೀಕರನ್ನು ಕಾಪಾಡುವದು ಕೇಂದ್ರ ಸರಕಾರದ ಕರ್ತವ್ಯವಾಗಿದೆ, ಆದರೆ ಕೇಂದ್ರ ಸರಕಾರ ಜನಸಾಮಾನ್ಯರನ್ನು ರಕ್ಷಿಸುವ ಬದಲು ಬೆಲೆ ಏರಿಕೆಯ ಹೊರೆ ಹೊರಿಸುವದು ಅರ್ಥಹೀನವಾಗಿದೆ. ಗ್ಯಾಸ್ ಮಾತ್ರವಲ್ಲ ಪೆಟ್ರೊಲ್ ಮತ್ತು ಡಿಜೆಲ್ ಬೆಲೆ ಸಹ ಏರಿಕೆಯಾಗುವ ಸಾದ್ಯತೆಯಿದೆ ಎಂದು ಹೇಳಲಾಗಿದೆ, ಇದು ಕೇಂದ್ರ ಸರಕಾರದ ದುರಾಡಳಿತದ, ಜನವಿರೋಧಿ ನೀತಿಯ ಪರಿಣಾಮ ಎಂದೇ ಹೇಳಬಹುದಾಗಿದೆ ಎಂದು ಕೆಪಿಸಿಸಿ ಮಾದ್ಯಮ ವಿಭಾಗದ ರಾಜ್ಯ ವಕ್ತಾರ ಡಾ.ರಝಾಕ ಉಸ್ತಾದ) ತಿಳಿಸಿದ್ದಾರೆ.

ಡಿ ಸಿ ಎಂ. ಡಿ ಕೆ. ಶಿವಕುಮಾರ ಸೇರಿ ಹಲವಾರು ಸಚಿವರ ಆಗಮನದ ನಿರೀಕ್ಷೆ

ಇದ್ದು. ಈ ಹಿನ್ನೆಲೆಯಲ್ಲಿ ಬೃಹತ್ ಗಾತ್ರದ ಪೆಂಡಾಲ್ ಹಾಕಲಾಗಿದ್ದು. ಬೇಸಿಗೆ ಹಿನ್ನೆಲೆಯಲ್ಲಿ ಬೃಹತ್ ಪೆಂಡಾಲಿನಲ್ಲಿ ದೊಡ್ಡ ದೊಡ್ಡ ಗಾತ್ರದ ಫ್ಯಾನುಗಳನ್ನು ಅಳವಡಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ಜನಸ್ತೋಮಕ್ಕೆ ಮಳೆ ಹಾಗೂ ಬಿಸಿಲಿನಿಂದ ಯಾವುದೇ ರೀತಿಯ ಸಮಸ್ಯೆಯಾಗದಂತೆ ಪೆಂಡಾಲುಗಳಿಗೆ ವಾಟರ್ ಪ್ರೂಫ್ ಪ್ಲಾಸ್ಟಿಕ್ ಹೊದಿಕೆಯನ್ನು ಹಾಕಲಾಗಿದೆ. ಕಾರ್ಯಕ್ರಮಕ್ಕೆ ಉಪಮುಖ್ಯಮಂತ್ರಿಗಳು ಸೇರಿದಂತೆ ಸಚಿವರು ಆಗಮಿಸುವ ಹಿನ್ನೆಲೆಯಲ್ಲಿ ನಗರದ ಪ್ರಮುಖ ಬೀದಿಗಳಲ್ಲಿ. ಉಪಮುಖ್ಯಮಂತ್ರಿಗಳಿಗೆ ಸಚಿವರಿಗೆ ಸ್ವಾಗತ ಕೋರುವ ಬ್ಯಾನರುಗಳು ನಗರದಲ್ಲಿ ರಾರಾಜಿಸುತ್ತಿರುವ ದೃಶ್ಯವನ್ನು ಕಾಣಬಹುದು.

ಜನಿವಾರ ತೆಗೆಸಿದ ಕೃತ್ಯ 'ಪೆಹಲ್ಗಾಂ' ಮಾದರಿಯ ದಬ್ಬಾಳಿಕೆ: ಬ್ರಾಹ್ಮಣ ಮಹಾಸಭಾ ತೀವ್ರ ಖಂಡನೆ

ನ್ಯಾಯಾಲಯದ ಆದೇಶದ ಉಲ್ಲಂಘನೆ

ಕಳೆದ ವರ್ಷವೂ ಇಂತಹದ್ದೇ ಘಟನೆಗಳು ನಡೆದಿದ್ದವು. ಈ ಬಗ್ಗೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ನ್ಯಾಯಾಲಯದ ಮೆಟ್ಟಿಲೇರಿತ್ತು. ಆಗ ಸಿಇಟಿ ಕೌನ್ಸಿಲ್ ಇನ್ಮುಂದೆ ಇಂತಹ ಕೃತ್ಯಗಳಿಗೆ ಆಸ್ಪದ ನೀಡುವುದಿಲ್ಲ ಎಂದು ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಿತ್ತು. ಹೀಗಿದ್ದರೂ ಈ ವರ್ಷವೂ ಅದೇ ಕೃತ್ಯ ಪುನರಾವರ್ತನೆಯಾಗಿರುವುದು ಸಂವಿಧಾನ ವಿರೋಧಿ ಮತ್ತು ನ್ಯಾಯಾಂಗ ನಿಂದನೆಯಾಗಿದೆ ಎಂದು ಅವರು ದೂರಿದರು.

ಮಹಾಸಭಾದ ಪ್ರಮುಖ ಬೇಡಿಕೆಗಳು: ಪಾರದರ್ಶಕ ತನಿಖೆ: ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಈ ಘಟನೆಯ ಹಿಂದೆ ಇರುವ ಶಕ್ತಿಗಳ ಬಗ್ಗೆ ತನಿಖೆ ನಡೆಸಬೇಕು. ವಿದ್ಯಾಸಂಸ್ಥೆಗಳ ಮಾನ್ಯತೆ ರದ್ದು: ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿರುವ ಕೃಪಾನಿಧಿ ಮತ್ತು ನಾಗಾರ್ಜುನ ವಿದ್ಯಾಸಂಸ್ಥೆಗಳ ಮಾನ್ಯತೆಯನ್ನು ತಕ್ಷಣವೇ ರದ್ದುಗೊಳಿಸಬೇಕು. ವ್ಯಕ್ತಿಗಳ ಬಂಧನ: ಜನಿವಾರ ತೆಗೆಸಿದ ಕೃತ್ಯದ ಹಿಂದಿರುವ ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು.

ಇಂತಹ ಕೃತ್ಯಗಳು ವಿದ್ಯಾರ್ಥಿಗಳ ಆತ್ಮಸ್ಥೈರ್ಯವನ್ನು ಕುಗ್ಗಿಸುತ್ತವೆ. ಪರೀಕ್ಷೆ ಬರೆಯಲು ವಿದ್ಯಾರ್ಥಿಗಳು ಹಿಂದೇಟು ಹಾಕುವ ಪರಿಸ್ಥಿತಿಯನ್ನು ಸರ್ಕಾರವೇ ನಿರ್ಮಾಣ ಮಾಡುತ್ತಿದೆ. ಸರ್ಕಾರ ಕಠಿಣ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಇರುವ ಬ್ರಾಹ್ಮಣ ಸಂಘಟನೆಗಳು ಹಾಗೂ ಹಿಂದೂ ಬಾಂಧವರು ಸೇರಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು, ಎಂದು ರಾಘವೇಂದ್ರ ಮಯ್ಯ ಎಚ್ಚರಿಸಿದರು.

ಅಂಗನವಾಡಿ ಕೇಂದ್ರಗಳ ರಜೆ ವಿಸ್ತರಣೆಗೆ ಅಪರ ಜಿಲ್ಲಾಧಿಕಾರಿಗೆ ಮನವಿ

ವರೆಗೆ ಉಷ್ಣಾಂಶ ದಾಖಲಾಗುತ್ತಿರು ವುದರಿಂದ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ರಜೆ ವಿಸ್ತರಣೆ ಅಗತ್ಯವಿದೆ ಎಂದು ಸಂಘ ಮನವಿಯಲ್ಲಿ ತಿಳಿಸಿದೆ. 3ರಿಂದ 5 ವರ್ಷದ ಮಕ್ಕಳು ಅಂಗನವಾಡಿಗಳಿಗೆ ಹಾಜರಾಗುವುದರಿಂದ ತೀವ್ರ ಬಿಸಿಲು ಅವರ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಕ್ಕಳು ದೂರ ಪ್ರಯಾಣಿಸಿ ಅಂಗನವಾಡಿಗೆ ಬರಬೇಕಾಗಿರುವುದು ಮತ್ತಷ್ಟು ಸಂಕಷ್ಟ ಉಂಟುಮಾಡುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಇದಲ್ಲದೆ ಅಂಗನವಾಡಿ ನೌಕರರು ರಜೆ ಅವಧಿಯಲ್ಲಿಯೂ ಜನಗಣತಿ, ಚುನಾವಣೆ ಸೇರಿದಂತೆ ವಿವಿಧ ಇಲಾಖೆಯೇತರ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದಾಗಿ ಸಂಘ ತಿಳಿಸಿದೆ. ಆದ್ದರಿಂದ ಮಕ್ಕಳ, ಪೋಷಕರ ಹಾಗೂ ಅಂಗನವಾಡಿ ಸಿಬ್ಬಂದಿಯ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಹೆಚ್ಚುವರಿ 15 ದಿನಗಳ ರಜೆ ಘೋಷಿಸಬೇಕೆಂದು ಸಂಘ ಒತ್ತಾಯಿಸಿದೆ. ಮನವಿ ಸಲ್ಲಿಸುವ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷೆ ಹೆಚ್. ಪದ್ಮಾ, ಜಿಲ್ಲಾ ಕಾರ್ಯದರ್ಶಿ ರಂಗಮ್ಮ ಅನ್ವರ್ ವರಲಕ್ಷ್ಮಿ, ನಿರ್ಮಲಾ, ಶಾಂತಮ್ಮ, ಮಲ್ಲಮ್ಮ, ಶರಣಮ್ಮ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ರಾಜಕಾರಣಿಗಳ ಓಲೈಸಬೇಡಿ, ಕಾನೂನು ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸಿ: ಕಾರ್ಯದರ್ಶಿಗಳಿಗೆ ಸಿಎಂ ತಾಕೀತು



ಬೆಂಗಳೂರು,ಮೇ.02-

ನೀವು ಕಾನೂನಿನ ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸಿ, ಸಚಿವರಿಗೆ ಕಾನೂನಿನ ವ್ಯಾಪ್ತಿಯೊಳಗೆ ಸಲಹೆಗಳನ್ನು ನೀಡಿ. ಸರ್ಕಾರಕ್ಕೆ ಒಳ್ಳೆಯ ಹೆಸರು ತರುವುದು ಕಾರ್ಯದರ್ಶಿಗಳ ಕಾರ್ಯ ಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ. ಆಡಳಿತಕ್ಕೆ ಇನ್ನಷ್ಟು ಚುರುಕು ಮೂಡಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

ಅವರು ಇಂದು ವಿಧಾನಸೌಧದ ಸಭಾಂಗಣದಲ್ಲಿ ನಡೆಸಿದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳ ಸಭೆಯಲ್ಲಿ ಸಲಹೆ, ಸೂಚನೆಗಳನ್ನು ನೀಡಿದರು. ರಾಜಕಾರಣಿಗಳನ್ನು ಓಲೈಕೆ ಮಾಡಲು ಅಧಿಕಾರಿಗಳು ಹೋಗಬಾರದು. ಇದು ಸರ್ವಾಧಿಕಾರಕ್ಕೆ ಹಾದಿ ಮಾಡುತ್ತದೆ ಎಂದು ಅಂಬೇಡ್ಕರ್ ಅವರು ಎಚ್ಚರಿಕೆ ನೀಡಿದ್ದರು ಎಂದು ತಿಳಿಸಿದರು. ರಾಜ್ಯದ ಆಡಳಿತ ಸಮರ್ಪಕವಾಗಿ ನಡೆಯಲು ಇಲಾಖಾ ಕಾರ್ಯದರ್ಶಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಇದನ್ನು ಸಂವಿಧಾನದಲ್ಲಿಯೇ ಉಲ್ಲೇಖಿಸಲಾಗಿದೆ. ಅಧಿಕಾರಿಗಳು ಯಾವತ್ತೂ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಬಾರದು ಹಾಗೂ ತಪ್ಪು ಹಾದಿಗೆ ಎಳೆಯಬಾರದು. ನಮ್ಮ ನಿಲುವುಗಳು, ತೀರ್ಮಾನಗಳು ಯಾವತ್ತೂ ಜನಪರವಾಗಿ ರಬೇಕು. ಅಧಿಕಾರಿಗಳು 30-35 ವರ್ಷಗಳ ಕಾಲ ಆಡಳಿತ ವ್ಯವಸ್ಥೆಯಲ್ಲಿದ್ದರೆ, ಜನಪ್ರತಿ ನಿಧಿಗಳು ಕೇವಲ 5 ವರ್ಷಗಳ ಕಾಲ ಮಾತ್ರ ಇರುತ್ತಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಧಿಕಾರಿಗಳ ಜವಾಬ್ದಾರಿ ಹೆಚ್ಚಾಗಿದೆ ಎಂದು ತಾಕೀತು ಮಾಡಿದರು.

ಬಜೆಟ್‌ನಲ್ಲಿ ಮಾಡಿರುವ ಘೋಷಣೆಗಳನ್ನು ಜಾರಿಗೊಳಿಸುವ ಕಾರ್ಯ ಅಧಿಕಾರಿಗಳದ್ದು. ಕಳೆದ ವರ್ಷದ ಬಜೆಟ್‌ನ 15 ಘೋಷಣೆಗಳ ಜಾರಿ ಇನ್ನೂ ಆಗಿಲ್ಲ. ಇದಕ್ಕೆ ಯಾರು ಹೊಣೆ?. ಈ ವರ್ಷದ ಬಜೆಟ್‌ನಲ್ಲಿ 218 ಹೊಸ ಘೋಷಣೆಗಳು ಸೇರಿದಂತೆ ಒಟ್ಟಾರೆ 565 ಘೋಷಣೆಗಳನ್ನು ಮಾಡಿದ್ದೇವೆ. ಬಜೆಟ್‌ನ ಎಲ್ಲಾ ಘೋಷಣೆಗಳನ್ನು ಅದೇ ವರ್ಷ ಜಾರಿಗೊಳಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಬಜೆಟ್ ಘೋಷಣೆಗಳು ಯಾವುದೇ ಕಾರಣಕ್ಕೂ ಅನುಷ್ಠಾನಗೊಳ್ಳದೆ ಇರಬಾರದು. ಅನುಷ್ಠಾನದಲ್ಲಿನ ಪ್ರಾಯೋಗಿಕ ತೊಡಕುಗಳನ್ನು ನೇರವಾಗಿ ನನ್ನ ಅಥವಾ ಮುಖ್ಯ ಕಾರ್ಯದರ್ಶಿಯವರ ಗಮನಕ್ಕೆ ತರಬೇಕು ಎಂದು ಸೂಚಿಸಿದರು.

ಕಾರ್ಯದರ್ಶಿಗಳೇ ಹೊಣೆಗಾರರು: 2026-27ನೇ ಬಜೆಟ್‌ನಲ್ಲಿನ ಘೋಷಣೆಗಳ ಪೈಕಿ ಕೇವಲ 5 ಘೋಷಣೆಗಳ ಬಗ್ಗೆ ಮಾತ್ರ ಸರ್ಕಾರಿ ಆದೇಶ ಮಾಡಲಾಗಿದೆ. ಮೇ ತಿಂಗಳ ಒಳಗಾಗಿ ಎಲ್ಲಾ ಸರ್ಕಾರಿ ಆದೇಶಗಳನ್ನು ಜಾರಿಗೊಳಿಸಿ, ಅನುಷ್ಠಾನ ಕಾರ್ಯ ಆರಂಭಿಸಬೇಕು. ಇಲ್ಲದಿದ್ದರೆ ಆಯಾ ಕಾರ್ಯದರ್ಶಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅಧಿಕಾರಕ್ಕೆ ಬಂದ ಬಳಿಕ ರಾಜ್ಯಮಟ್ಟದಲ್ಲಿ ಎರಡು ಜನಸ್ಪಂದನ ಸಭೆಯಲ್ಲಿ ಸ್ವೀಕರಿಸಲಾಗಿದ್ದ 15,334 ಸ್ವೀಕೃತಿಗಳ ಪೈಕಿ 15,295 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿಯಿರುವ 45 ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಸಾರ್ವಜನಿಕ ಕುಂದುಕೊರತೆ ()ಯಡಿ 3,27,052 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, 3,17,576 ವಿಲೇವಾರಿ ಮಾಡಲಾಗಿದೆ. 1828 ಅರ್ಜಿಗಳ ವಿಲೇವಾರಿ ನಿಗದಿತ ಕಾಲಾವಧಿ ಮುಗಿದಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡದಿದ್ದರೆ ಜನರಿಗೆ ಸರ್ಕಾರದ ಮೇಲಿನ ನಂಬಿಕೆಯೇ ಹೊರಟು ಹೋಗುತ್ತದೆ. ಇದಕ್ಕೆ ಅವಕಾಶ ಮಾಡಬಾರದು. ಇದೇ ರೀತಿ ಸಕಾಲ ಅಡಿ ಸ್ವೀಕರಿಸಲಾಗುವ ಅರ್ಜಿಗಳನ್ನು ಸಹ ಸಕಾಲದಲ್ಲಿಯೇ ವಿಲೇವಾರಿ ಮಾಡಬೇಕು ಎಂದು ಸಿಎಂ ತಿಳಿಸಿದರು.

ಮಂಜೂರಾತಿ ನೀಡಲಾಗಿರುವ ಹುದ್ದೆಗಳ ಭರ್ತಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು. ಆರ್ಥಿಕ ಇಲಾಖೆಯಿಂದ 24,300 ಹುದ್ದೆಗಳ ಭರ್ತಿಗೆ ಮಂಜೂರಾತಿ ನೀಡಲಾಗಿದೆ. ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದ ವೃಂದದಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗದೇ ಬಾಕಿಯಿರುವ 32,132 ಹುದ್ದೆಗಳಿವೆ. ಕೆಲವು ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ ಪರಿಷ್ಕರಣೆ ಬಾಕಿಯಿದ್ದು, ಇದನ್ನು ಆದಷ್ಟು ಬೇಗನೆ ಮುಗಿಸಬೇಕು ಎಂದು ಸೂಚಿಸಿದರು.

ಕೇಂದ್ರದಿಂದ 11,367 ಕೋಟಿ ಬಾಕಿ: ವಿವಿಧ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಡಿಯಲ್ಲಿ 2025-26 ನೇ ಸಾಲಿನಲ್ಲಿ ರಾಜ್ಯ ಸರ್ಕಾರ ತನ್ನ ಪಾಲಿನ ರೂ. 22,768 ಕೋಟಿ ಬಿಡುಗಡೆ ಮಾಡಿದ್ದು, ಕೇಂದ್ರ ಸರ್ಕಾರ ರೂ. 16,729 ಕೋಟಿ ಬಿಡುಗಡೆ ಮಾಡಿದೆ. ಕೇಂದ್ರದಿಂದ ರೂ.11,367 ಕೋಟಿ ಅನುದಾನ ಬಿಡುಗಡೆಗೆ ಬಾಕಿಯಿದೆ. ಈ ಅವಧಿಯಲ್ಲಿ ಒಟ್ಟಾರೆ ರೂ.42,222 ಕೋಟಿ ಲಭ್ಯ ಅನುದಾನವಿದ್ದು, ರೂ.38,236 ಕೋಟಿ ವೆಚ್ಚ ಮಾಡಲಾಗಿದೆ. ಅನುದಾನವನ್ನು ನಿಗದಿತ ಅವಧಿಯ ಒಳಗಾಗಿ ಖರ್ಚು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ರೂ.2 ಕೋಟಿವರೆಗೆ ಮೀಸಲಾತಿ ಕಲ್ಪಿಸಲಾಗಿದೆ. ವಿವಿಧ ಕಾಮಗಾರಿಗಳನ್ನು ಒಟ್ಟು ಸೇರಿಸಿ ಪ್ಯಾಕೇಜ್ ಮಾಡುವ ಮೂಲಕ ಮೀಸಲಾತಿ ತಪ್ಪಿಸಲು ಅವಕಾಶ ನೀಡಬಾರದು. ಎಲ್ಲಾ ಕಾಮಗಾರಿಗಳನ್ನು ನಿಗದಿತ ಅವಧಿಯ ಒಳಗಾಗಿ ಪೂರ್ಣಗೊಳಿಸಬೇಕು. ಕಾಮಗಾರಿ ವಿಳಂಬದಿಂದ ನಿರ್ಮಾಣ ವೆಚ್ಚ ಹೆಚ್ಚಳಕ್ಕೆ ಅವಕಾಶ ಮಾಡಬಾರದು ಎಂದು ಸೂಚಿಸಿದರು.

ಈ ವರ್ಷ ಶೇ.5ರಷ್ಟು ಮಳೆ ಕಡಿಮೆ ಯಾಗುವ ಸಾಧ್ಯತೆಯಿದ್ದು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಯ ಜಿಲ್ಲೆಯಲ್ಲಿನ ಕುಡಿಯುವ ನೀರಿನ ಪರಿಸ್ಥಿತಿ ಬಗ್ಗೆ ನಿರಂತರ ನಿಗಾ ವಹಿಸಬೇಕು. ಈ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಜೊತೆ ಸಭೆ ನಡೆಸಬೇಕು. ತಮ್ಮ ಉಸ್ತುವಾರಿಯಲ್ಲಿನ ಜಿಲ್ಲೆಯ ಸಮಸ್ಯೆಗಳನ್ನು ಬಗೆಹರಿಸುವುದು ಆಯಾ ಕಾರ್ಯದರ್ಶಿಗಳ ಜವಾಬ್ದಾರಿಯಾಗಿದೆ. ಯಾವುದೇ ಕಾರಣಕ್ಕೂ ಕುಡಿಯುವ ನೀರಿಗೆ ತೊಂದರೆಯಾಗಬಾರದು ಎಂದು ಸಿಎಂ ಸೂಚಿಸಿದರು.

ಮಲ್ಲಿಕಾರ್ಜುನ ಖರ್ಗೆಯವರ ಮಾತನ್ನು ಗಮನಿಸಿದರೆ ರಾಜ್ಯದಲ್ಲಿ ಸಿಎಂ ಬದಲಾವಣೆ ಆಗಬಹುದು: ಬಿ. ವೈ. ವಿಜಯೇಂದ್ರ



ಮೈಸೂರು,ಮೇ.02-

ಮಲ್ಲಿಕಾರ್ಜುನ ಖರ್ಗೆಯವರ ಮಾತನ್ನು ಗಮನಿಸಿದರೆ ರಾಜ್ಯದಲ್ಲಿ ಸಿಎಂ ಬದಲಾವಣೆ ಆಗಬಹುದು ಅನಿಸುತ್ತದೆ. ಆದರೆ, ಕೆಲವರು ಖರ್ಗೆ ಸಿಎಂ ಆಗಲಿ ಎನ್ನುತ್ತಾರೆ, ಮತ್ತೆ ಕೆಲವರು ಡಿ. ಕೆ. ಶಿವಕುಮಾರ್ ಮೇ 15ಕ್ಕೆ ಸಿಎಂ ಆಗುತ್ತಾರೆ ಎನ್ನುತ್ತಾರೆ. ನೋಡೋಣ ಎಂದು ಬಿ. ವೈ. ವಿಜಯೇಂದ್ರ ಹೇಳಿದರು.

ಇಂದು ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಸೂತ್ತೂರು ಮಠಕ್ಕೆ ಭೇಟಿ ನೀಡಿ, ಶ್ರೀಗಳ ಆಶೀರ್ವಾದ ಪಡೆದ ವಿಜಯೇಂದ್ರ ಅವರು ಮಾಧ್ಯಮದವರ ಜೊತೆ ಮಾತನಾಡಿದರು.

ಕಾರ್ಯಕ್ರಮಕ್ಕೆ ಶ್ರೀಗಳು ಬರಲು ಒಪ್ಪಿದ್ದಾರೆ : ಸ್ವಾಮೀಜಿಯನ್ನು ಭೇಟಿ ಮಾಡಿ, ಮೇ 9 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪ ಅವರ 50 ವರ್ಷದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದ್ದೇವೆ. ಕಾರ್ಯಕ್ರಮಕ್ಕೆ ಬರಲು ಸ್ವಾಮೀಜಿ ಒಪ್ಪಿದ್ದಾರೆ. ಮೇ 8 ರಂದು ಯಡಿಯೂರಪ್ಪ ಚಿತ್ರದುರ್ಗದ ಪುರ ಪ್ರವೇಶ ಮಾಡ್ತಾರೆ. ಅದ್ದೂರಿಯಾಗಿ ಅವರಿಗೆ ಸ್ವಾಗತ ಕೋರುತ್ತೇವೆ. 9 ರಂದು ಅಮಿತ್ ಶಾ ವೇದಿಕೆ ಕಾರ್ಯಕ್ರಮಕ್ಕೆ ಆಗಮಿಸುತ್ತಾರೆ. ನಾಡಿನ ರೈತರು, ಮಹಿಳೆಯರು, ಸ್ವಾಮೀಜಿಗಳು ಎಲ್ಲರೂ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಾರೆ. 10 ಲಕ್ಷ ಜನ ಸೇರುವ ಐತಿಹಾಸಿಕ ಕಾರ್ಯಕ್ರಮ ಇದಾಗಲಿದೆ. ಕಾರ್ಯಕ್ರಮಕ್ಕಾಗಿ ಯಡಿಯೂರಪ್ಪ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಮಿನಿ ದಸರಾ ಮಾದರಿಯಲ್ಲಿ ಕಾರ್ಯಕ್ರಮ ಮಾಡುತ್ತೇವೆ ಎಂದು ಹೇಳಿದರು.

ವಿಜಯೇಂದ್ರ ಬೂಸ್ಟ್ ಕಾರ್ಯಕ್ರಮ ಅಲ್ಲ : ಚುನಾವಣೆ ಸಮೀಪ ಕಾರ್ಯಕ್ರಮ ಆಯೋಜನೆ ಮಾಡಿದ್ರೆ, ವಿಜಯೇಂದ್ರ ಅಥವಾ ಬಿಜೆಪಿಗೆ ಬೂಸ್ಟ್ ಆಗುತ್ತಿತ್ತು. ಈಗ ಯಾವುದೇ ಚುನಾವಣೆ ಇಲ್ಲ, ಇದು ಯಡಿಯೂರಪ್ಪ ಅವರಿಗೆ ಕೃತಜ್ಞತೆ ಸಲ್ಲಿಸುವ ಕಾರ್ಯಕ್ರಮ. ಈ ರಾಜ್ಯದಲ್ಲಿ ಅನೇಕರು ಅದೃಷ್ಟದ ಸಿಎಂ ಆಗಿದ್ದಾರೆ. ಆದ್ರೆ, ಯಡಿಯೂರಪ್ಪ ಅದೃಷ್ಟದ ಸಿಎಂ ಅಲ್ಲ. ಜನರಿಂದ ಜನರಿಗಾಗಿ ಜನರಿಗೋಸ್ಕರ ಇದ್ದವರು. ಅದಕ್ಕಾಗಿ ಕಾರ್ಯಕ್ರಮ ಮಾಡುತ್ತಿದ್ದೇವೆ. ಗೋವಿಂದ ಕಾರಜೋಳ ಅವರ ಅಪೇಕ್ಷೆಯಂತೆ ಚಿತ್ರದುರ್ಗದಲ್ಲಿ ಮಾಡುತ್ತಿದ್ದೇವೆ ಎಂದು ಹೇಳಿದರು.

ಉಪಚುನಾವಣೆ ಫಲಿತಾಂಶ ಕಾಂಗ್ರೆಸ್‌ಗೆ ಪಾಠವಾಗಲಿದೆ : ಎರಡು ಕ್ಷೇತ್ರಗಳಲ್ಲಿ ಬೈ ಎಲೆಕ್ಷನ್ ಗೆಲ್ಲುವ ವಿಶ್ವಾಸ ಇಲ್ಲ ಅಂತ ಕಾಂಗ್ರೆಸ್ ಮುಖಂಡರೇ ನನಗೆ ಹೇಳಿದ್ದಾರೆ. ಫಲಿತಾಂಶ ಬಂದ ಮೇಲೆ ರಾಜ್ಯದ ಸಿಎಂ ಹಾಗೂ ಕಾಂಗ್ರೆಸ್‌ಗೆ ಪಾಠವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು. ಮೈಸೂರು ಪಂಜಾಬ್ ಆಗಿದೆ, ಡ್ರಗ್ಸ್ ಹಾವಳಿ ಜಾಸ್ತಿಯಾಗಿದೆ. ಕಾಂಗ್ರೆಸ್ ಸರ್ಕಾರ ಮನುಷ್ಯತ್ವ ಇಲ್ಲದ ಸರ್ಕಾರ. ಮೈಸೂರಿನಲ್ಲಿ 3 ವರ್ಷದಿಂದ ಒಂದೇ ಒಂದು ಅಭಿವೃದ್ಧಿ ಆಗಿಲ್ಲ. ರಾಜ್ಯದ ಅಭಿವೃದ್ಧಿಗೆ ಕಾಂಗ್ರೆಸ್ ಮನಸ್ಸು ಮಾಡಿಲ್ಲ. ಭ್ರಷ್ಟಾಚಾರ ತಾಂಡವವಾಡುತ್ತಿದೆ. ಕೇವಲ ಕುರ್ಚಿ ಉಳಿಸಿಕೊಳ್ಳುವ ಹಪಾಹಪಿ ಅಷ್ಟೇ ಕಾಣಿಸುತ್ತಿದೆ. ದೆಹಲಿಗೆ ಒಬ್ಬರ ಹಿಂದೆ ಒಬ್ಬರು ಹೋಗ್ತಿದ್ದಾರೆ ಎಂದು ವಿಜಯೇಂದ್ರ ಟೀಕಿಸಿದರು.

ಕಿಲ್ಲೇಶ್ರೀಗಳ 57ನೇ ಜನ್ಮ ದಿನಾಚರಣೆ, 31ನೇ ವರ್ಷದ ಪಟ್ಟಾಧಿಕಾರ ವರ್ಧಂತಿ ಮಹೋತ್ಸವ

ಮಾಜಿ ಸಚಿವರಿಂದ ಶ್ರೀಗಳಿಗೆ ಗೌರವ ಸನ್ಮಾನ





ರಾಯಚೂರು,ಮೇ.01

ನಗರದ ಸಾವಿರ ದೇವರ ಸಂಸ್ಥಾನ ಕಿಲ್ಲೇಬೃಹನ್ಮಠದ ಪೂಜ್ಯಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿಯವರ 57ನೇ ವರ್ಷದ ಜನ್ಮ ದಿನಾಚರಣೆ ಹಾಗೂ 31ನೇ ವರ್ಷದ ಪಟ್ಟಾಧಿಕಾರ ವರ್ಧಂತಿ ಮಹೋತ್ಸವವನ್ನು ಅಮೇರಿಕದ ವೈಟ್ ಹೌಸ್ ನಂತೆ ಬಿಂಬಿಸುವ ರಾಯಚೂರು ಜಿಲ್ಲೆಯ ವೈಟ್ ಹೌಸ್ ಎಂದೇ ಪ್ರಸಿದ್ಧ ಪಡೆದ ಶ್ರೀಮಠದ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ನಗರದ ಹಿರಿಯ ಜ್ಯೋತಿಷ್ಯ ಶಾಸ್ತ್ರಿಗಳಾದ ವೇ.ಮೂ. ಪಂಪಾಪತಿ ನಾಡಂಗಮಠ, ದೇವದುರ್ಗ ಕ್ಷೇತ್ರದ ಮಾಜಿ ಶಾಸಕರು ಸಚಿವರಾದ ಕೆ. ಶಿವನಗೌಡ ನಾಯಕ, ಮಾಜಿ ಶಾಸಕರಾದ

ಬ್ಯಾಗವಾಟ ಬಸನಗೌಡ, ರಾಯಚೂರು ಗ್ರಾಮಾಂತರ ಮಾಜಿ ಶಾಸಕರಾದ ತಿಪ್ಪರಾಜ ಹವಾಲ್ದಾರ, ಎಸ್.ಎಲ್. ಕೇಶವರೆಡ್ಡಿ, ತ್ರಿವಿಕ್ರಮ ಜ್ಯೋಷಿ, ಜಿ. ಶಿವಕುಮಾರ, ಕೆ. ಶಾಂತಪ್ಪ, ಬಿ.ಜೆ.ಪಿ. ಮುಖಂಡ ನರಸಪ್ಪ ಯಕ್ಲಾಸಪೂರ, ಅ.ಭಾ.ವೀ.ಲಿಂ. ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಪಾಟೀಲ ಮಿರ್ಜಾಪೂರ, ನಗರದ ಹಿರಿಯ ವೈದ್ಯರಾದ ಡಾ. ನಿಜಗುಣ ಶಿವಯೋಗಪ್ಪ, ಸಹಕಾರ ಕ್ಷೇತ್ರದ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ಶಾವಂತಗೇರಿ ಹಾಗೂ ಇನ್ನಿತರ ಗಣ್ಯರ ಸಮ್ಮುಖದಲ್ಲಿ 3157 ಎಂಬ ಪುಷ್ಪ ಮತ್ತು ಪ್ರಣತಿಗಳಿಂದ ಅಲಂಕಾರಗೊಳಿಸಿದ ಕೇಕ್ ನಲ್ಲಿ ದೀಪವನ್ನು ಪ್ರಜ್ವಲಿಸುವ ಮೂಲಕ ತಮ್ಮ ಜನ್ಮ ದಿನಾಚರಣೆಯನ್ನು ಆಚರಿಸಿಕೊಂಡರು.

ನಂತರ ಶ್ರೀಮಠದ ನೂರಾರು ಸದ್ಭಕ್ತರು ಶ್ರೀಮಠದ ಶ್ರೀಗಳಿಗೆ ಸನ್ಮಾನಿಸಿ ಜನ್ಮ ದಿನದ ಹಾಗೂ ಪಟ್ಟಾಧಿಕಾರ ಮಹೋತ್ಸವದ ಹಾರ್ಧಿಕ ಶುಭಾಶಯಗಳನ್ನು ತಿಳಿಸಿ ಶ್ರೀಗಳಿಂದ ಶುಭಾಶೀರ್ವಾದ ಪಡೆದರು.

ನಂತರ ಶ್ರೀಮಠದ ಹೊರ ಆವರಣದಲ್ಲಿ ಸರ್ವ ಸದ್ಭಕ್ತರಿಗೆ ಅಲ್ಪ ಉಪಹಾರ ಪ್ರಸಾದವನ್ನು ಏರ್ಪಡಿಸಲಾಗಿತ್ತು, ನೂರಾರು ಸದ್ಭಕ್ತರು ಪ್ರಸಾದವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಶ್ರೀಮಠದ ಕಾರ್ಯದರ್ಶಿ ವೇ.ಮೂ. ರೇಣುಕರಾಧ್ಯಯ್ಯ ಸ್ವಾಮಿ, ವೇ.ಮೂ. ವೀರ ಸೋಮೇಶ್ವರ ಪ್ರಸಾದ, ಶರಣಯ್ಯ ಸ್ವಾಮಿ ಜಾಗೀರ'ವೆಂಕಟಾಪೂರ', ಬಸವರಾಜ ಶಾಸ್ತ್ರಿ ಮನ್ಸಲಾಪೂರ, ಸೋಮವಾರಪೇಟೆ ಹಿರೇಮಠದ ಸರ್ವ ಸದ್ಭಕ್ತರು, ತಾಲೂಕಾ ಬೇಡ ಜಂಗಮ ಸಮಾಜದ ಸರ್ವ ಪದಾಧಿಕಾರಿಗಳು, ವೀರಶೈವ ಜಂಗಮ ಪುರೋಹಿತ ಅರ್ಚಕರ ಸಂಘದ ಸರ್ವ ಪದಾಧಿಕಾರಿಗಳು, ಬಿ.ಜೆ.ಪಿ. ಕಾಂಗ್ರೆಸ್, ಜೆಡಿಎಸ್. ಪಕ್ಷಗಳ ಸರ್ವ ಮುಖಂಡರುಗಳು, ಇಸ್ಲಾಂ ಧರ್ಮದ ರಾಜಕೀಯ ಮುಖಂಡರು, ಮಡಿವಾಳ ಸಮುದಾಯದ ಸರ್ವ ಮುಖಂಡರು, ಮಮದಾಪೂರ, ಅರೋಲಿ, ಮಟಮಾರಿ, ಹಟ್ಟಿ, ದೇವದುರ್ಗಾ, ಮಾನ್ವಿ, ಪಿಕಳಿಹಾಳ ಹಾಗೂ ಇನ್ನುಳಿದ ಅನೇಕ ಸಮುದಾಯಗಳ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಕರ್ನಾಟಕ ಮಹಿಳಾ ಕ್ರಿಕೆಟ್ ಸಾಗಬೇಕಾದ ಹಾದಿ ಯಾವುದು? ಕೆಎಸ್‌ಸಿಎ ತೋರಿಸಬೇಕಿದೆ ದಿಕ್ಕು

ಭಾರತ ಕ್ರಿಕೆಟ್ ತಂಡದ ಮಾಜಿ ವೇಗಿ ವೆಂಕಟೇಶ್ ಪ್ರಸಾದ್ ನೇತೃತ್ವದ ನೂತನ ಪದಾಧಿಕಾರಿಗಳ ತಂಡ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ನ ಆಡಳಿತ ಚುಕ್ಕಾಣಿಯನ್ನು ಹಿಡಿದಿದೆ. ಅವರ ಮುಂದೆ ಬೆಟ್ಟದಷ್ಟು ಸವಾಲುಗಳಿವೆ. ಕೆ.ಎಸ್.ಸಿ.ಎ ಲೀಗ್ ಕ್ರಿಕೆಟ್ ಟೂರ್ನಿಗಳನ್ನು ನಡೆಸುವುದರ ಜೊತೆಗೆ ಪ್ರತಿಭಾವಂತ ಆಟಗಾರರಿಗೆ ಸೂಕ್ತ ಅವಕಾಶಗಳನ್ನು ಒದಗಿಸಬೇಕಿದೆ. ಅದರಲ್ಲೂ ಸಮಕಾಲೀನ ಸಂದರ್ಭದಲ್ಲಿ ಮಹಿಳಾ ಕ್ರಿಕೆಟಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಹಾಕಿಕೊಳ್ಳಬೇಕಿದೆ.

ಭಾರತದಲ್ಲಿ ಕ್ರಿಕೆಟ್ ತನ್ನ ಆರಂಭದ ದಿನಗಳಿಂದ ಇಪ್ಪತ್ತನೇ ಶತಮಾನದ ಕೊನೆಯವರೆಗೂ, ಕ್ರಿಕೆಟ್ ಅಭಿಮಾನಿಗಳಿಂದ ಪುರುಷ ಕ್ರಿಕೆಟ್ ಆಟಗಾರರಿಗೆ ಗೌರವಾದರಗಳನ್ನು ದೊರಕಿಸಿಕೊಡುತ್ತಿತ್ತು. ಕಪಿಲ್ ದೇವ್, ಗವಾಸ್ಕರ್, ಕಿರ್ಮಾನಿ, ಅಜರುದ್ದೀನ್, ದ್ರಾವಿಡ್, ಲಕ್ಷ್ಮಣ್, ಸಚಿನ್ ತೆಂಡೂಲ್ಕರ್ ಅಂತಹ ಮಹಾನ್ ಆಟಗಾರರ ಹೆಸರು ದೇಶದ ಮೂಲೆಮೂಲೆಗಳಲ್ಲೂ ಕೇಳಿ ಬರುತ್ತಿತ್ತು. ಸಮೂಹ ಮಾಧ್ಯಮಗಳಲ್ಲಿ ಬರುತ್ತಿದ್ದ ಜಾಹೀರಾತುಗಳಲ್ಲಿಯೂ ಅವರೇ ಕಾಣಿಸಿಕೊಳ್ಳುತ್ತಿದ್ದರು. ಪುರುಷ ಕ್ರಿಕೆಟ್ ಹೆಚ್ಚು ಪ್ರಚಲಿತವಿದ್ದ ಸಂದರ್ಭದಲ್ಲಿ ಮಹಿಳಾ ಕ್ರಿಕೆಟ್ ನಗಣ್ಯವಾಗಿತ್ತು. ಒಬ್ಬ ಮಹಿಳಾ ಆಟಗಾರ್ತಿಯ ಹೆಸರು ಯಾರಿಗೂ ಗೊತ್ತಿರಲಿಲ್ಲ. ಎಷ್ಟೇ ಆದರೂ ಭಾರತ ಪುರುಷ ಪ್ರಧಾನ ಸಮಾಜ ಹೊಂದಿರುವಂತಹ ರಾಷ್ಟ್ರ. ಮಹಿಳೆಯರು ನಾಲ್ಕು ಗೋಡೆಗಳ ಮಧ್ಯೆ ಕೆಲಸ ಮಾಡಿಕೊಂಡಿರಬೇಕೆಂದು ಅವರಿಗೆ ನಿರ್ಬಂಧತೆಯ ಸೆರೆಮನೆಯಲ್ಲಿ ಇಡಲಾಗಿತ್ತು. ಹಾಗೆ ನೋಡಿದರೆ ಹನ್ನೆರಡನೇ ಶತಮಾನದಲ್ಲಿ ಅಕ್ಕ ಮಹಾದೇವಿ ಮೊದಲ ಬಾರಿಗೆ ಸಮಾಜ ಹಾಕಿದ ಬೇಡಿಯನ್ನು ಕಳಚಿಟ್ಟು ನಿರ್ವಸ್ತ್ರಳಾಗಿ ತನ್ನ ದಾರಿಯನ್ನು ಹುಡುಕುತ್ತಾ ಹೊರಟವಳು. ಅಲ್ಲಿಂದ ಇಲ್ಲಿಯವರೆಗಿನ ಮಹಿಳೆಯರ ಬದುಕಿನ ಸಂಘರ್ಷ ನಿರಂತರವಾಗಿ ಸಾಗಿದೆ. ಇದರ ಮಧ್ಯೆ ಇಪ್ಪತ್ತೊಂದನೇ ಶತಮಾನದಲ್ಲಿ ಜಾಗತೀಕರಣ, ಆಧುನೀಕರಣದ ಹಿನ್ನೆಲೆಯಲ್ಲಿ ಸ್ತ್ರೀಯರು ಎಲ್ಲಾ ಕ್ಷೇತ್ರಗಳಲ್ಲಿಯೂ ಕಾಣಿಸಿಕೊಳ್ಳುತ್ತಿರುವುದು ಸಕಾರಾತ್ಮಕ ಅಂಶವಾಗಿದೆ.



ಆದರೆ ಮುಖ್ಯವಾಗಿ ತಮ್ಮ ದೈಹಿಕ ಸಾಮರ್ಥ್ಯವನ್ನು ಪರೀಕ್ಷೆ ಮಾಡುವ ಕ್ರೀಡೆಗಳಲ್ಲಿ ಅದರಲ್ಲೂ ಹೆಚ್ಚು ಜನಪ್ರಿಯವಾಗುತ್ತಿರುವ ಕ್ರಿಕೆಟ್‌ನಲ್ಲಿ, ಮಹಿಳೆಯರ ಪಾಲ್ಗೊಳ್ಳುವಿಕೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಬೇಕು. ಒಂದು ಸಮಾಧಾನಕರ ಸಂಗತಿಯೆಂದರೆ 1970ರ ದಶಕದಲ್ಲಿ ಆರಂಭವಾದ ನಮ್ಮ ದೇಶದ ಮಹಿಳಾ ಕ್ರಿಕೆಟ್ ತಂಡ, ಸಂಘರ್ಷ, ಅನಾದರಗಳ ಮಧ್ಯೆ ಹೋರಾಡಿ ಮೇಲೆ ಬಂದಿದೆ. ಅದಕ್ಕೆ ಇತ್ತೀಚಿಗೆ ಗೌರವಾದರಗಳು ಸಿಗುತ್ತಿವೆ. ಮಿಥಾಲಿ ರಾಜ್ ರಿಂದ ಹಿಡಿದು ಹರ್ಮನ್ ಪ್ರೀತ್ ಕೌರ್, ಸ್ಮೃತಿ ಮಂಧಾನ, ಜೆಮಿಮಾ ರೋಡ್ರಿಗಸ್, ದೀಪ್ತಿ ಶರ್ಮಾ, ಶಫಾಲಿ ವರ್ಮಾವರೆಗೂ ಎಲ್ಲರಿಗೂ ಕ್ರಿಕೆಟ್, ಹೆಸರು ಮತ್ತು ಹಣ ತಂದುಕೊಟ್ಟಿದೆ. ಕ್ರಿಕೆಟ್ ಅಭಿಮಾನಿಗಳು ಅವರ ಹೆಸರು ಹೇಳುವಷ್ಟರ ಮಟ್ಟಿಗೆ ಚಿರಪರಿಚಿತರಾಗಿದ್ದಾರೆ. ಅಷ್ಟೇ ಅಲ್ಲದೇ ವಿರಾಟ್ ಕೊಹ್ಲಿ ಪಡೆದುಕೊಳ್ಳುತ್ತಿರುವ ವೇತನದಷ್ಟೇ ಸ್ಮೃತಿ ಮಂಧಾನಗೆ ಲಭಿಸುತ್ತಿದೆ.

ಭಾರತ ಮಹಿಳಾ ಕ್ರಿಕೆಟ್ ತಂಡದಂತೆ ಕರ್ನಾಟಕ ಕ್ರಿಕೆಟ್ ತಂಡವು 1970ರ ಮಧ್ಯಭಾಗದಲ್ಲಿ ರೂಪುಗೊಳ್ಳಲು ಪ್ರಾರಂಭಿಸಿತು. 1976ರಲ್ಲಿ ಭಾರತವನ್ನು ತಮ್ಮ ಮೊದಲ ಟೆಸ್ಟ್‌ನಲ್ಲಿ ಮುನ್ನಡೆಸಿದ ಶಾಂತಾ ರಂಗಸ್ವಾಮಿಯಂತಹವರು ಮುಂಚೂಣಿಯಲ್ಲಿ ನಿಂತು ಇದನ್ನು ಪ್ರವರ್ತಿಸಿದರು. ಅಲ್ಲಿಂದ ಇಲ್ಲಿಯವರೆಗೆ ಕರ್ನಾಟಕ ಮಹಿಳಾ ತಂಡ ರಾಷ್ಟ್ರೀಯ ಮಟ್ಟದಲ್ಲಿ ಪಂದ್ಯಾವಳಿಗಳಲ್ಲಿ ಭಾಗವಹಿಸಿಕೊಂಡೇ ಬಂದಿದೆ. ಕರ್ನಾಟಕದಲ್ಲಿ 15 ವರ್ಷದೊಳಗಿನ ಮಹಿಳೆಯರ 19 ವರ್ಷದೊಳಗಿನ ಮಹಿಳೆಯರ ಹಾಗೂ ಹಿರಿಯ ಮಹಿಳೆಯರ ಕ್ರಿಕೆಟ್ ತಂಡ. ಈ ಮೂರು ಬಗೆಯ ತಂಡಗಳಿಗಾಗಿ ಮಾತ್ರ ಕೆ.ಎಸ್.ಸಿ.ಎ ಆಯ್ಕೆ ಪ್ರಕ್ರಿಯೆಯನ್ನು ಕೈಗೊಂಡಿರುತ್ತದೆ. ಮಹಿಳೆಯರು ಈ ಮೂರು ಮಾದರಿಯಲ್ಲಿ ರಾಜ್ಯವನ್ನು ಪ್ರತಿನಿಧಿಸುವ ಮುಂಚೆ, ಕೆ.ಎಸ್.ಸಿ.ಎ ಅಡಿಯಲ್ಲಿ ಬರುವ ಯಾವುದಾದರೂ ಒಂದು ಕ್ಲಬ್ ಪರವಾಗಿ ಆಡಿ ತಮ್ಮ ಅಮೋಘ ಆಟದ ಮೂಲಕ ಗಮನ ಸೆಳೆದಿರಬೇಕು. ಆಗ ಮಾತ್ರ ರಾಜ್ಯ 15, 19 ಹಾಗೂ ಸೀನಿಯರ್ ತಂಡಕ್ಕೆ ಆಯ್ಕೆಯಾಗಬಹುದು.

ಇತ್ತೀಚೆಗೆ ಕ್ರಿಕೆಟ್ ಕ್ಲಬ್‌ಗಳು ಕೂಡ ಮಹಿಳಾ ಕ್ರಿಕೆಟ್‌ಗೆ ಪ್ರಾಶಸ್ತ್ಯವನ್ನು ನೀಡುತ್ತಿವೆ. ಆಯ್ಕೆ ಟ್ರಯಲ್ಸ್ ಗಳನ್ನು ಹಮ್ಮಿಕೊಂಡು ಉಚಿತವಾಗಿ ಅವರಿಗೆ ತರಬೇತಿ ಹಾಗೂ ಅಭ್ಯಾಸ ಪಂದ್ಯಗಳನ್ನು ಆಡಿಸುತ್ತಿವೆ. ಬ್ರಿಜೇಶ್ ಪಟೇಲ್ ಕ್ರಿಕೆಟ್ ಅಕಾಡೆಮಿ, ಸಿಕ್ಸ್ ಕ್ರಿಕೆಟ್, ಜಸ್ಟ್ ಕ್ರಿಕೆಟ್, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕ್ರಿಕೆಟ್, ಸಂಪ್ರಸಿದ್ಧಿ, ರಾಮ್ ಸ್ಪೋರ್ಟ್ಸ್, ಎಸ್.ಎಲ್.ಎಸ್. ಕ್ರಿಕೆಟ್ ಅಕಾಡೆಮಿ, ಕವರ್ ಡ್ರೈವ್ ಮುಂತಾದವು. ಆದರೆ ಅದಕ್ಕೆ ಪ್ರತಿಕ್ರಿಯೆ ನಿರಾಶಾದಾಯಕ. ಬಹಳ ಕಡಿಮೆ ಹುಡುಗಿಯರು ಈ ಅವಕಾಶವನ್ನು ಬಳಸಿಕೊಳ್ಳುತ್ತಿದ್ದಾರೆ. ಕೆ.ಎಸ್.ಸಿ.ಎ ಅಡಿ ಬರುವ ಎಲ್ಲಾ ಕ್ರಿಕೆಟ್ ಕ್ಲಬ್‌ಗಳು ಮಹಿಳಾ ಕ್ರಿಕೆಟ್ ತಂಡಗಳನ್ನು ಕಟ್ಟಲು ಸಾಧ್ಯವಾಗಿಲ್ಲ. ಅಷ್ಟು ಮಹಿಳಾ ಆಟಗಾರ್ತಿಯರು ಸಿಗುತ್ತಿಲ್ಲ.

ಕೆಲವು ಕ್ಲಬ್‌ಗಳಲ್ಲಿ ಒಂದಿಬ್ಬರು ಹುಡುಗಿಯರು ಕಲಿಯಲು ಬರುತ್ತಿರುವುದಾದರೂ, ಹುಡುಗರ ಜೊತೆ ಆಡಬೇಕಾದ ಅನಿವಾರ್ಯತೆಯಿಂದ ಕೆಲಕಾಲ ಆಡಿ ಕ್ರಿಕೆಟ್ ನಿಲ್ಲಿಸುವ ಸಾಧ್ಯತೆಗಳು ನಿಚ್ಚಳವಾಗಿರುತ್ತವೆ. ಬೇರೆ ಕ್ಲಬ್‌ಗಳು ಅವರು ವಾಸವಿರುವ ಜಾಗದಿಂದ ಬಹಳ ದೂರದಲ್ಲಿರುವುದರಿಂದ ಶಿಕ್ಷಣದ ಜೊತೆಗೆ ಅದನ್ನು ಸರಿದೂರಿಸಲು ಸಾಧ್ಯವಾಗುವುದಿಲ್ಲ. ಹಾಗಾಗಿ ಮಹಿಳಾ ಕ್ರಿಕೆಟ್ ಸ್ಪರ್ಧೆ ಹೇಳಿಕೊಳ್ಳುವಂತಿಲ್ಲ. ನಮ್ಮ ನಾಡಿನ ಮಹಿಳೆಯರಿಗೆ ಈಗಾಗಲೇ ಭಾರತ ತಂಡವನ್ನು ಪ್ರತಿನಿಧಿಸಿರುವ ನಮ್ಮವರೇ ಆದ ಶಾಂತಾ ರಂಗಸ್ವಾಮಿ, ವೇದ ಕೃಷ್ಣಮೂರ್ತಿ, ರಾಜೇಶ್ವರಿ ಗಾಯಕ್ವಾಡ್, ವೆಲ್ಲಾಸ್ವಾಮಿ ವನಿತಾ, ಕರುಣಾ ಜೈನ್, ಮಮತಾ ಮಬೇನ್, ಇತ್ತೀಚೆಗೆ ಹೆಸರು ಮಾಡುತ್ತಿರುವ ಶ್ರೇಯಾಂಕಾ ಪಾಟೀಲ್ ಮಾದರಿಯಾಗಬೇಕು. ಇವರಲ್ಲಿ ಬಹುಪಾಲು ಆಟಗಾರ್ತಿಯರ ಹಾದಿ ಹೂವಿನ ಹಾದಿಯಾಗಿರಲಿಲ್ಲ. ಮುಳ್ಳಿನ ಹಾದಿಯಾಗಿತ್ತು. ಅನೇಕರು ಅವಮಾನ, ಹೀಗಳಿಕೆ ಎಲ್ಲವನ್ನು ಸಹಿಸಿ ಮೇಲೆ ಬಂದಿದ್ದಾರೆ. ತಮ್ಮ ಆತ್ಮವಿಶ್ವಾಸ, ಬದ್ಧತೆ, ತಾಳ್ಮೆ, ತ್ಯಾಗ, ಧೈರ್ಯ, ಸಾಧನೆ ಮಾಡಬೇಕೆಂಬ ಹಂಬಲ ಈ ಹಂತಕ್ಕೆ ಏರುವಂತೆ ಮಾಡಿದೆ.

ಮಹಿಳಾ ಕ್ರಿಕೆಟಿಗರಿಗೂ ಪುರುಷರ ಐ.ಪಿ.ಎಲ್ ನಂತೆ ಡಬ್ಲ್ಯೂ.ಪಿ.ಎಲ್ ಇದೆ. ರಾಷ್ಟ್ರವನ್ನು ಪ್ರತಿನಿಧಿಸಲು ಸಾಧ್ಯವಾಗದಿದ್ದರೂ ಡಬ್ಲ್ಯೂ.ಪಿ.ಎಲ್ ಮೂಲಕ ಹಣ, ಹೆಸರು ಗಳಿಸಲು ಸಾಧ್ಯ. ಮಹಿಳೆಯರಲ್ಲಿ ಇರಬಹುದಾದ ಮಾನಸಿಕ, ದೈಹಿಕ ಹಿಂಜರಿಕೆಯನ್ನು ದೂರವಿಟ್ಟು ಮೈದಾನಕ್ಕೆ ಇಳಿಯಬೇಕು. ಇದಕ್ಕೆ ಪುರುಷರೂ ಬೆನ್ನೆಲುಬಾಗಿರಬೇಕು. ಆಗ ಮಾತ್ರ ಕ್ರಿಕೆಟ್‌ನಲ್ಲೂ ಆರೋಗ್ಯಕರವಾದ ಸ್ಪರ್ಧಾತ್ಮಕವಾದ ಜಗತ್ತು ಸೃಷ್ಟಿಯಾಗುತ್ತದೆ. ಬಿ.ಸಿ.ಸಿ.ಐ ಹಾಗೂ ಕೆ.ಎಸ್.ಸಿ.ಎ ಮಹಿಳಾ ಕ್ರಿಕೆಟಿಗರಿಗೆ ಅನೇಕ ಯೋಜನೆಗಳನ್ನು ಹಾಕಿಕೊಂಡಿವೆ.

ಭಾರತ ಕ್ರಿಕೆಟ್ ತಂಡ ಮಾಜಿ ವೇಗಿ ವೆಂಕಟೇಶ್ ಪ್ರಸಾದ್ ನೇತೃತ್ವದ ನೂತನ ಪದಾಧಿಕಾರಿಗಳ ತಂಡ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ನ ಆಡಳಿತ ಚುಕ್ಕಾಣಿಯನ್ನು ಹಿಡಿದಿದೆ. ಅವರ ಮುಂದೆ ಬೆಟ್ಟದಷ್ಟು ಸವಾಲುಗಳಿವೆ. ಕೆ.ಎಸ್.ಸಿ.ಎ ಲೀಗ್ ಕ್ರಿಕೆಟ್ ಟೂರ್ನಿಗಳನ್ನು ನಡೆಸುವುದರ ಜೊತೆಗೆ ಪ್ರತಿಭಾವಂತ ಆಟಗಾರರಿಗೆ ಸೂಕ್ತ ಅವಕಾಶಗಳನ್ನು ಒದಗಿಸಿಕೊಡಬೇಕಿದೆ. ಅದರಲ್ಲೂ ಸಮಕಾಲೀನ ಸಂದರ್ಭದಲ್ಲಿ ಮಹಿಳಾ ಕ್ರಿಕೆಟಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಹಾಕಿಕೊಳ್ಳಬೇಕಿದೆ. ರಾಜ್ಯ ಕ್ರಿಕೆಟ್ ಸಂಸ್ಥೆ ಇತ್ತೀಚೆಗೆ ಒಂದು ಸುತ್ತೋಲೆ ಹೊರಡಿಸಿ ಪ್ರತಿ ತಿಂಗಳು ಕರ್ನಾಟಕ ಸೀನಿಯರ್ ತಂಡಕ್ಕೆ ಆಡಿದ ಮಾಜಿ ಆಟಗಾರ್ತಿಯರಿಗೆ ಗೌರವ ಸನ್ಮಾನವನ್ನು ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು ಘೋಷಿಸಿದೆ. ಅಷ್ಟೇ ಅಲ್ಲದೆ ಮೊದಲ ಬಾರಿಗೆ ಹದಿನೈದು ವರ್ಷದೊಳಗಿನ ಹುಡುಗಿಯರ ಕೆ.ಎಸ್.ಸಿ.ಎ ಲೀಗ್ ಪಂದ್ಯಗಳನ್ನು ಆಯೋಜಿಸಿದೆ. ಈ ಮೊದಲು ನೇರವಾಗಿ ರಾಜ್ಯ ತಂಡದ ಆಯ್ಕೆ ಪ್ರಕ್ರಿಯೆ ನಡೆಯುತ್ತಿತ್ತು. ಈ ಹೊಸ ಸಮಿತಿಯು ಮಹಿಳಾಪರವಾದ ನಿರ್ಣಯಗಳನ್ನು ಕೈಗೊಳ್ಳುತ್ತಿರುವುದು ಮಹಿಳೆಯರು ಕ್ರಿಕೆಟ್ ಕಡೆ ವಾಲುವಂತೆ ಮಾಡುತ್ತಿದೆಯಾದರೂ, ಅವರ ಸಂಪೂರ್ಣ ಸಹಭಾಗಿತ್ವಕ್ಕೆ ಇನ್ನಷ್ಟು ವಿನೂತನವಾದ ಹೆಜ್ಜೆಗಳನ್ನು ಇಡಬೇಕಿದೆ. ಕರ್ನಾಟಕ ಕ್ರಿಕೆಟ್ ಸಂಸ್ಥೆ ಆರು ರೀತಿಗಳಲ್ಲಿ ಇದನ್ನು ಕಾರ್ಯರೂಪಕ್ಕೆ ತರಬಹುದಾಗಿದೆ.

ಶಾಲಾ ಮತ್ತು ಕಾಲೇಜಿನ ಹುಡುಗಿಯರಿಗೆ ಕ್ರಿಕೆಟ್ ಲೀಗ್ ಪಂದ್ಯಗಳನ್ನು ಆರಂಭಿಸಿ ಹೆಚ್ಚಿನ ಶಾಲಾ, ಕಾಲೇಜುಗಳು ಭಾಗವಹಿಸುವಂತೆ ನೋಡಿಕೊಳ್ಳುವುದು. ಪ್ರೋತ್ಸಾಹದಾಯಕ ನಗದು ಬಹುಮಾನಗಳನ್ನು ಕೊಡುವುದು.

ಕೆ.ಎಸ್.ಸಿ.ಎ ಯ ಅಡಿ ಬರುವ ಎಲ್ಲಾ ಕ್ಲಬ್‌ಗಳಿಗೂ ಮಹಿಳಾ ತಂಡಗಳನ್ನು ಕಡ್ಡಾಯವಾಗಿ ರೂಪಿಸುವಂತೆ ಆದೇಶ ಹೊರಡಿಸಿ, ಪುರುಷರಿಗೆ ಚಾಲ್ತಿ ಇರುವ ಲೀಗ್‌ನಂತೆ ಮಹಿಳೆಯರಿಗೂ ಕಡೆ ಪಕ್ಷ ಮೊದಲ ಡಿವಿಷನ್, ಎರಡನೇ ಡಿವಿಷನ್ ಲೀಗ್ ಪ್ರಾರಂಭಿಸುವುದು.

ಇದನ್ನು ಮುಂದಿನ ಹಂತದಲ್ಲಿ ಎಲ್ಲಾ ಜಿಲ್ಲೆ, ತಾಲ್ಲೂಕುಗಳಿಗೂ ವಿಸ್ತರಿಸುವುದು. ಕೆ.ಎಸ್.ಸಿ.ಎ.ಯಿಂದಲೇ ನಿರಂತರವಾಗಿ ಮುಂದಿನ ಹಂತ ತಲುಪಬಹುದಾದ ಹೆಚ್ಚಿನ ಸಂಖ್ಯೆಯ ಪ್ರತಿಭಾವಂತ ಹುಡುಗಿಯರನ್ನು ಗುರುತಿಸಿ, ನುರಿತ ತರಬೇತುದಾರರಿಂದ ತರಬೇತಿ ಕೊಡಿಸುವುದು.

ಬಡ ಕುಟುಂಬದಿಂದ ಆಯ್ಕೆಯಾಗುವ ಹೆಣ್ಣು ಮಕ್ಕಳಿಗೆ ಕ್ರಿಕೆಟ್ ಕಿಟ್‌ಗಳನ್ನು ಉಚಿತವಾಗಿ ವಿತರಿಸುವ ಕಾರ್ಯವನ್ನು ಕೆ.ಎಸ್.ಸಿ.ಎ ಯೇ ಮಾಡಬೇಕು ಹಾಗೂ ಮಹಿಳಾ ಕ್ರಿಕೆಟ್ ಬೆಳೆಯುವವರೆಗೂ ಬೇರೆ ಜಿಲ್ಲೆಗಳಿಂದ ಆಯ್ಕೆಯಾಗಿ ಬರುವ ಹುಡುಗಿಯರಿಗೆ ಬೆಂಗಳೂರಿನಲ್ಲಿಯೇ ವಾಸ್ತವ್ಯ ಹೂಡಲು ವ್ಯವಸ್ಥೆ ಮಾಡುವುದು.

ಅಂಪೈರಿಂಗ್, ಸ್ಕೋರಿಂಗ್ ಪರೀಕ್ಷೆಗಳಲ್ಲಿ ಮಹಿಳೆಯರಿಗೂ ಅವಕಾಶ ಮಾಡಿಕೊಟ್ಟು, ಹೆಚ್ಚು ಮಹಿಳೆಯರು ಕ್ರಿಕೆಟ್‌ನಲ್ಲಿ ಆಸಕ್ತಿ ತೋರುವಂತೆ ಮಾಡುವುದು.

ಹೀಗೆ ಕ್ರಮವಹಿಸಿದಾಗ ಮಹಿಳಾ ಕ್ರಿಕೆಟ್ ಉತ್ತುಂಗ ಶಿಖರವನ್ನು ತಲುಪುವ ನಿರೀಕ್ಷೆಯನ್ನು ಇಟ್ಟುಕೊಳ್ಳಬಹುದು. ಜೊತೆಗೆ ಕರ್ನಾಟಕ ಮಹಿಳಾ ಕ್ರಿಕೆಟ್ ಸಂಸ್ಥೆ ಭಾರತದ ಎಲ್ಲಾ ರಾಜ್ಯ ಕ್ರಿಕೆಟ್ ಸಂಸ್ಥೆಗಳಿಗೂ ಮಾದರಿಯಾಗಬಲ್ಲದು. ಮಹಿಳಾ ಸಬಲೀಕರಣದ ಮಾತುಗಳು ಕೇವಲ ಬಾಯಿ ಮಾತಿನಿಂದ ಬಂದರೆ ಪ್ರಯೋಜನವಿಲ್ಲ. ಪ್ರಾಯೋಗಿಕವಾಗಿ ಅದು ಸಾಧ್ಯವಾಗಬೇಕಿದೆ. ಅದಕ್ಕಾಗಿ ಇನ್ನಷ್ಟು ಶ್ರಮವಹಿಸಬೇಕಿದೆ.

ಬೆಲೆಏರಿಕೆ ಬಿಸಿ ;ಮೋದಿ ಚೇಲಾಗಳಾದರೇ ಕರ್ನಾಟಕದ ಸಚಿವರು?



ಪಂಚರಾಜ್ಯಗಳ ಚುನಾವಣೆಯ ಅಬ್ಬರ ಅಡಗುತ್ತಿದ್ದಂತೆಯೇ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರಿಗೆ ನಿರೀಕ್ಷಿತವಾದರೂ ಅನಿರೀಕ್ಷಿತವೆಂಬಂತೆ ಬೆಲೆ ಏರಿಕೆಯ ಶಾಕ್ ನೀಡಿದೆ. ಮೇ ತಿಂಗಳ ಮೊದಲ ದಿನವೇ ಇಡೀ ದೇಶದ ಜನತೆ ಬೆಲೆ ಏರಿಕೆಯ ಬಿಸಿಯನ್ನು ಅನುಭವಿಸುವಂತಾಗಿದೆ. ದೇಶದಲ್ಲಿ ಪ್ರಜಾಪ್ರಭುತ್ವದ ಹಬ್ಬ ಮುಗಿಯುತ್ತಿದ್ದಂತೆಯೇ ಇಂತಹದೊಂದು ಆರ್ಥಿಕ ಹೊಡೆತ ಬೀಳಬಹುದು ಎಂಬ ಆತಂಕ ಜನರಲ್ಲಿತ್ತು, ಅದು ಈಗ ನಿಜವಾಗಿದೆ. ಮೇ 1ರ ಬೆಳಗ್ಗೆಯೇ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಬರೋಬ್ಬರಿ 993 ರೂಪಾಯಿ ಏರಿಕೆ ಮಾಡುವ ಮೂಲಕ ಕೇಂದ್ರ ಸರ್ಕಾರ ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮದ ಮೇಲೆ ದೊಡ್ಡ ಪ್ರಹಾರ ಮಾಡಿದೆ. ಈ ಮೊದಲು 2,162 ರೂಪಾಯಿ ಇದ್ದ ವಾಣಿಜ್ಯ ಸಿಲಿಂಡರ್ ಬೆಲೆ ಈಗ ಏಕಾಏಕಿ 3,155 ರೂಪಾಯಿಗೆ ತಲುಪಿದೆ. ಇಷ್ಟು ದೊಡ್ಡ ಮೊತ್ತದ ಏರಿಕೆ ಇತಿಹಾಸದಲ್ಲೇ ಮೊದಲು. ಇದು ಕೇವಲ ಹೋಟೆಲ್ ಮಾಲೀಕರಿಗೆ ಸೀಮಿತವಾದ ಸಮಸ್ಯೆಯಲ್ಲ, ಬದಲಿಗೆ ಹೋಟೆಲ್‌ಗಳನ್ನು ಅವಲಂಬಿಸಿರುವ ಲಕ್ಷಾಂತರ ಜನಸಾಮಾನ್ಯರ ಜೇಬಿಗೆ ಬೀಳುತ್ತಿರುವ ಕತ್ತರಿ.

ವಾಣಿಜ್ಯ ಗ್ಯಾಸ್ ಬೆಲೆ ಏರಿಕೆಯಿಂದಾಗಿ ಹೋಟೆಲ್ ಉದ್ಯಮ ಕಂಗೆಟ್ಟಿದೆ. ಈಗಾಗಲೇ ದಿನಸಿ ಪದಾರ್ಥಗಳು, ತರಕಾರಿ ಮತ್ತು ಹಾಲಿನ ಬೆಲೆ ಏರಿಕೆಯಿಂದ ತತ್ತರಿಸಿದ್ದ ಮಾಲೀಕರಿಗೆ ಗ್ಯಾಸ್ ಬೆಲೆ ಏರಿಕೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಈಗಾಗಲೇ ಅನೇಕ ಹೋಟೆಲ್‌ಗಳಲ್ಲಿ ತಿಂಡಿಗಳ ಬೆಲೆಯನ್ನು 15 ರಿಂದ 20 ರೂಪಾಯಿಗಳಷ್ಟು ಹೆಚ್ಚಿಸಲಾಗಿದೆ. ಈಗ ಗ್ಯಾಸ್ ಬೆಲೆ ಏರಿಕೆಯಿಂದಾಗಿ ಮುಂದಿನ ದಿನಗಳಲ್ಲಿ ಕಾಫಿ, ಟೀ ಮತ್ತು ಊಟದ ದರಗಳು ಮತ್ತಷ್ಟು ದುಬಾರಿಯಾಗಲಿವೆ. ಗ್ಯಾಸ್ ಬೆಲೆ ಹೆಚ್ಚಳ ತಾಳಲಾರದೆ ಈಗಾಗಲೇ ಹಲವು ಸಣ್ಣ ಹೋಟೆಲ್‌ಗಳು ಮುಚ್ಚಲ್ಪಟ್ಟಿವೆ. ಹೋಟೆಲ್ ನಡೆಸಿದರೂ ಲಾಭವಿಲ್ಲ, ಮುಚ್ಚಿದರೂ ಬಾಡಿಗೆ ಮತ್ತು ಕಾರ್ಮಿಕರ ವೇತನ ಪಾವತಿಸಲೇಬೇಕಾದ ಅನಿವಾರ್ಯತೆಯಲ್ಲಿ ಮಾಲೀಕರಿದ್ದಾರೆ. ಬೆಲೆ ಹೆಚ್ಚಿಸಿದರೆ ಗ್ರಾಹಕರು ಹೋಟೆಲ್‌ಗೆ ಬರುವುದನ್ನು ಕಡಿಮೆ ಮಾಡುತ್ತಾರೆ, ಬೆಲೆ ಹೆಚ್ಚಿಸದಿದ್ದರೆ ಉದ್ಯಮ ನಡೆಸುವುದು ಸಾಧ್ಯವಿಲ್ಲ ಎಂಬ ಇಕ್ಕಟ್ಟಿನಲ್ಲಿ ಹೋಟೆಲ್ ಮಾಲೀಕರು ಸಿಲುಕಿದ್ದಾರೆ.

ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಯ ಬೆನ್ನಲ್ಲೇ ಪೆಟ್ರೋಲ್ ಮತ್ತು ಡೀಸೆಲ್ ದರ ಕೂಡ ಗಗನಕ್ಕೇರುವ ಲಕ್ಷಣಗಳು ಕಾಣಿಸುತ್ತಿವೆ. ಸಾರಿಗೆ ವೆಚ್ಚ ಹೆಚ್ಚಾದಲ್ಲಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಪ್ರತಿಯೊಂದು ಅವಶ್ಯಕ ವಸ್ತುವಿನ ಬೆಲೆ ದುಪ್ಪಟ್ಟಾಗಲಿದೆ. ಈಗಾಗಲೇ ಆಟೋ ಚಾಲಕರು ಮತ್ತು ಸಣ್ಣ ಸಾರಿಗೆ ಉದ್ಯಮಿಗಳು ದೈನಂದಿನ ಜೀವನ ನಡೆಸಲು ಹರಸಾಹಸ ಪಡುತ್ತಿದ್ದಾರೆ.

ಜನಸಾಮಾನ್ಯರು ಇಷ್ಟೆಲ್ಲಾ ಸಂಕಷ್ಟ ಅನುಭವಿಸುತ್ತಿದ್ದರೂ, ಕೇಂದ್ರದಲ್ಲಿರುವ ಕರ್ನಾಟಕದ ಮಂತ್ರಿಗಳು ಮತ್ತು ರಾಜ್ಯದ ಪ್ರಭಾವಿ ನಾಯಕರು ಜನರ ಪರವಾಗಿ ಧ್ವನಿ ಎತ್ತುತ್ತಿಲ್ಲ ಎಂಬ ಆಕ್ರೋಶ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಜನರಿಂದ ಆಯ್ಕೆಯಾದ ಪ್ರತಿನಿಧಿಗಳು ಕೇಂದ್ರ ಸರ್ಕಾರದ ನೀತಿಗಳನ್ನು ಪ್ರಶ್ನಿಸುವ ಬದಲು ಸಮರ್ಥನೆಗಿಳಿದಿರುವುದು ದುರಂತ.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ನಡೆ ಇದಕ್ಕೆ ಸ್ಪಷ್ಟ ಉದಾಹರಣೆ. ಪತ್ರಕರ್ತರೊಬ್ಬರು ''ಚುನಾವಣೆ ಮುಗಿದ ತಕ್ಷಣ ಸಿಲಿಂಡರ್ ಬೆಲೆ ಏರಿಸಿದ್ದೀರಿ, ಇದರ ಬಗ್ಗೆ ಏನು ವಿಫಲರಾದ ಅವರು, ಸಂಬಂಧವೇ ಇಲ್ಲದ ಮಹಿಳಾ ಮೀಸಲಾತಿ ಮತ್ತು ಡಿಲಿಮಿಟೇಶನ್ ಬಿಲ್ ಬಗ್ಗೆ ಮಾತನಾಡಿ ವಿಷಯಾಂತರ ಮಾಡಿದರು. ಕೇಳಿದ ಪ್ರಶ್ನೆಗೂ ನೀಡಿದ ಉತ್ತರಕ್ಕೂ ಯಾವುದೇ ತಾರ್ಕಿಕ ಸಂಬಂಧವಿರಲಿಲ್ಲ. ಇದು ಕೇವಲ ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುವ ರಾಜಕೀಯ ತಂತ್ರವಷ್ಟೇ.

ಈ ಹಿಂದೆ ಕರ್ನಾಟಕದಲ್ಲಿ ಬೆಲೆ ಏರಿಕೆಯಾದಾಗ ಬೀದಿಗಿಳಿದು ಹೋರಾಡುತ್ತಿದ್ದ ಬಿಜೆಪಿ ನಾಯಕರು ಈಗ ಮೌನಕ್ಕೆ ಶರಣಾಗಿದ್ದಾರೆ. ಹಿಂದೆ ಮೆಟ್ರೋ ದರ ಏರಿಕೆಯಾದಾಗ ಖಾಲಿ ಟ್ರಂಕ್ ಹಿಡಿದು ಪ್ರತಿಭಟಿಸುತ್ತಿದ್ದ ಸಂಸದ ತೇಜಸ್ವಿ ಸೂರ್ಯ ಅವರು ಈಗ ಸಾಮಾನ್ಯ ಜನರ ಸಂಕಷ್ಟಕ್ಕೆ ಸ್ಪಂದಿಸುತ್ತಿಲ್ಲ. ಬಸ್ ದರ ಏರಿಕೆಯಾದಾಗ ಪ್ರಯಾಣಿಕರಿಗೆ ಗುಲಾಬಿ ಹೂವು ನೀಡಿ ಗಮನ ಸೆಳೆದಿದ್ದ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಕೇಂದ್ರದ ಈ ಜನವಿರೋಧಿ ಧೋರಣೆಯ ಬಗ್ಗೆ ತುಟಿ ಬಿಚ್ಚುತ್ತಿಲ್ಲ.

ಕರ್ನಾಟಕದ ಕೇಂದ್ರ ಮಂತ್ರಿಗಳಿಗೆ ಮತ್ತು ಬಿಜೆಪಿ ನಾಯಕರಿಗೆ ಬೆಲೆ ಏರಿಕೆಯ ಬಗ್ಗೆ ಮಾತನಾಡಲು ಭಯವಿದೆಯೇ ಎಂಬ ಪ್ರಶ್ನೆ ಕಾಡುತ್ತಿದೆ. ಕೇಂದ್ರದ ನಾಯಕರ ವಿರುದ್ಧ ಧ್ವನಿ ಎತ್ತಿದರೆ ತಮ್ಮ ಸ್ಥಾನಕ್ಕೆ ಕುತ್ತು ಬರಬಹುದು ಎಂಬ ಆತಂಕ ಅವರಲ್ಲಿ ಮನೆ ಮಾಡಿರುವಂತೆ ತೋರುತ್ತಿದೆ. ಜನರ ಸಂಕಷ್ಟಕ್ಕಿಂತ ಪಕ್ಷದ ನಿಷ್ಠೆಯೇ ಮುಖ್ಯವಾಯಿತೇ ಎಂಬುದು ಈಗಿನ ಮಿಲಿಯನ್ ಡಾಲರ್ ಪ್ರಶ್ನೆ.

ಅಷ್ಟೇ ಯಾಕೆ ತೆರಿಗೆ ಹಂಚಿಕೆಯ ವಿಚಾರದಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಸತತವಾಗಿ ಅನ್ಯಾಯ ಮಾಡುತ್ತಾ ಬಂದಿದ್ದರೂ, ರಾಜ್ಯದ ಬಿಜೆಪಿ ನಾಯಕರು ಆ ಬಗ್ಗೆ ಧ್ವನಿ ಎತ್ತದೆ ಮೌನಕ್ಕೆ ಶರಣಾಗಿರುವುದು ಕನ್ನಡಿಗರ ಆಕ್ರೋಶಕ್ಕೆ ಕಾರಣವಾಗಿತ್ತು. ಕರ್ನಾಟಕವು ದೇಶದ ಬೊಕ್ಕಸಕ್ಕೆ ಅತಿ ಹೆಚ್ಚು ತೆರಿಗೆ ಪಾವತಿಸುವ ರಾಜ್ಯಗಳಲ್ಲಿ ಒಂದಾಗಿದ್ದರೂ, ಮರಳಿ ರಾಜ್ಯಕ್ಕೆ ಸಿಗಬೇಕಾದ ಪಾಲು ಮಾತ್ರ ಅತ್ಯಂತ ನಗಣ್ಯವಾಗಿದೆ. ಚುನಾವಣೆಯ ಸಮಯದಲ್ಲಿ ಮತ ಕೇಳಲು ರಾಜ್ಯದ ಮೂಲೆ ಮೂಲೆಗೆ ಬರುವ ನಾಯಕರಿಗೆ, ಇಲ್ಲಿನ ಜನರ ತೆರಿಗೆಯ ಹಣದಲ್ಲಿ ನ್ಯಾಯಯುತ ಪಾಲು ಪಡೆಯುವ ಇಚ್ಛಾಶಕ್ತಿಯಿಲ್ಲದಿರುವುದು ದುರಂತ. ಕನ್ನಡಿಗರ ಮತಗಳಿಂದ ಗೆದ್ದು ಕೇಂದ್ರದಲ್ಲಿ ಅಧಿಕಾರ ಅನುಭವಿಸುತ್ತಿರುವ ಈ ಪ್ರತಿನಿಧಿಗಳು, ಜನರ ಕಷ್ಟಕಾಲದಲ್ಲಿ ಕೇಂದ್ರದ ಮುಂದೆ ನಿಂತು ಹಕ್ಕೊತ್ತಾಯ ಮಾಡುವ ಬದಲು, ಹೈಕಮಾಂಡ್ ವಿಧೇಯರಂತೆ ವರ್ತಿಸುತ್ತಿರುವುದು ಅವರ ಜನವಿರೋಧಿ ಧೋರಣೆಯನ್ನು ಎತ್ತಿ ತೋರಿಸುತ್ತದೆ. ಜನರ ಹಿತಕ್ಕಿಂತ ಪಕ್ಷದ ನಿಷ್ಠೆಯೇ ಮುಖ್ಯವೆಂದು ಭಾವಿಸಿರುವ ಇವರ ನಡೆ ವೋಟ್ ಇಲ್ಲಿನದು, ಲಾಭ ಅಲ್ಲಿನದು ಎನ್ನುವಂತಿದೆ.

ಚುನಾವಣೆಗಳ ಸಮಯದಲ್ಲಿ ಮತದಾರರಿಗೆ ಹತ್ತಾರು ಭರವಸೆ ನೀಡುವ ಸರ್ಕಾರಗಳು, ಅಧಿಕಾರಕ್ಕೆ ಬಂದ ಮೇಲೆ ಅಥವಾ ಚುನಾವಣೆ ಮುಗಿದ ಮೇಲೆ ಜನಸಾಮಾನ್ಯರನ್ನೇ ಶೋಷಿಸುವುದು ಪ್ರಜಾಪ್ರಭುತ್ವದ ವ್ಯವಸ್ಥೆಗೆ ಶೋಭೆಯಲ್ಲ. ಅಂತರಾಷ್ಟ್ರೀಯ ಮಾರುಕಟ್ಟೆಯ ನೆಪವೊಡ್ಡಿ ಬೆಲೆ ಏರಿಕೆಯನ್ನು ಸಮರ್ಥಿಸಿಕೊಳ್ಳುವುದು ಸುಲಭ, ಆದರೆ ಬಡವ ಮತ್ತು ಮಧ್ಯಮ ವರ್ಗದ ಕುಟುಂಬಗಳು ಪ್ರತಿ ರೂಪಾಯಿಗೂ ಪಡುತ್ತಿರುವ ಪಾಡನ್ನು ಆಳುವವರು ಅರ್ಥಮಾಡಿಕೊಳ್ಳಬೇಕಿದೆ.

ಇನ್ನು ಅಂಧಭಕ್ತರ ವಿಚಿತ್ರ ಮನಸ್ಥಿತಿಯ ಬಗ್ಗೆ ಹೇಳುವುದಾದರೆ, ಇವರ ಕುರುಡು ಆರಾಧನೆ ದೇಶದ ವಾಸ್ತವವನ್ನೇ ಮರೆಮಾಚುವಂತಿದೆ. ಬೆಲೆ ಏರಿಕೆಯಿಂದ ಇಡೀ ದೇಶವೇ ತತ್ತರಿಸುತ್ತಿದ್ದರೂ, ಇವರು ಮಾತ್ರ ಯಾವುದೋ ಮಾಯಾಲೋಕದಲ್ಲಿ ವಿಹರಿಸುತ್ತಾ ಮೋದಿ ಮಾಡಿದ್ದೆಲ್ಲವೂ ಸರಿ ಎಂದು ಬೊಬ್ಬೆ ಹೊಡೆಯುತ್ತಿರುವುದು ಹಾಸ್ಯಾಸ್ಪದ. ಈ ಹಿಂದೆ ಕೊರೊನಾದಂತಹ ಸಂಕಷ್ಟದ ಸಮಯದಲ್ಲಿ ವೈಜ್ಞಾನಿಕ ದಾರಿ ಹುಡುಕುವ ಬದಲು ಗಂಟೆ, ಜಾಗಟೆ ಬಾರಿಸಿ ರೋಗ ಓಡಿಸುತ್ತೇವೆ ಎಂದು ಹೊರಟಿದ್ದ ಇವರು, ಈಗ ಅಡುಗೆ ಅನಿಲ ದುಬಾರಿಯಾದಾಗ ಹಳೆಯ ಕಾಲದಂತೆ ಸಗಣಿ ತಟ್ಟಿ, ಬೆರಣಿ ಬಳಸಿ ಅಡುಗೆ ಮಾಡಿ, ಆರೋಗ್ಯಕ್ಕೆ ಒಳ್ಳೆಯದು ಎಂಬ ಅಸಂಬದ್ಧ ಉಪದೇಶ ನೀಡಿದರೂ ಅಚ್ಚರಿಯಿಲ್ಲ. ದೇಶದ ಜನಸಾಮಾನ್ಯರ ಹೊಟ್ಟೆ ಉರಿಯುತ್ತಿದ್ದರೆ, ಇವರು ಮಾತ್ರ ವಾಸ್ತವಕ್ಕೆ ಕಣ್ಣುಮುಚ್ಚಿ ಕೇವಲ ಭಜನೆಯಲ್ಲಿ ಮಗ್ನರಾಗಿರುವುದು ದೇಶದ ದೌರ್ಭಾಗ್ಯವೇ ಸರಿ. ಜನಸಾಮಾನ್ಯರ ಸಂಕಷ್ಟಕ್ಕೆ ಸ್ಪಂದಿಸದ ಇಂತಹ ಕುರುಡು ಅಭಿಮಾನ ದೇಶದ ಪ್ರಗತಿಗೆ ದೊಡ್ಡ ಅಡ್ಡಿಯಾಗಿದೆ.

ಕನ್ನಡಿಗರಿಂದ ಆಯ್ಕೆಯಾದ ಜನಪ್ರತಿನಿಧಿಗಳು ಕೇವಲ ಹೈಕಮಾಂಡ್ ಆಜ್ಞಾಪಾಲಕರಾಗದೆ, ಕರ್ನಾಟಕದ ಜನರ ದನಿಯಾಗಿ ದೆಹಲಿಯಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯತೆ ಇದೆ. ಇಲ್ಲದಿದ್ದರೆ, ಜನಸಾಮಾನ್ಯರ ಆಕ್ರೋಶ ಮುಂದಿನ ದಿನಗಳಲ್ಲಿ ಸ್ಫೋಟಗೊಳ್ಳುವುದರಲ್ಲಿ ಸಂಶಯವಿಲ್ಲ. ಬೆಲೆ ಏರಿಕೆಯ ಈ ಸರಣಿ ಹೀಗೆಯೇ ಮುಂದುವರೆದರೆ, ಸಾಮಾನ್ಯ ಮನುಷ್ಯನ ಬದುಕು ಕೇವಲ ಹೋರಾಟಕ್ಕಷ್ಟೇ ಸೀಮಿತವಾಗಲಿದೆ.

ಮೇ ದಿನ ಬೆವರು ಸುರಿಸುವ ಕೈಗಳಿಗೆ ಸಿಗದ 'ಬೆಲೆ': ಅಸಂಘಟಿತ ಕಾರ್ಮಿಕರ ನೋವಿನ ಕಥೆ

ಪ್ರತಿ ವರ್ಷ ಮೇ 1ರಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನವನ್ನಾಗಿ ಆಚರಿಸಲಾಗುತ್ತದೆ. 1886ರಲ್ಲಿ ಅಮೆರಿಕಾದ ಚಿಕಾಗೋದಲ್ಲಿ ಕಾರ್ಮಿಕರು 8 ಗಂಟೆಗಳ ಕೆಲಸದ ಅವಧಿಗಾಗಿ ನಡೆಸಿದ ಹೋರಾಟದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ. ಕಾರ್ಮಿಕರ ಕೊಡುಗೆ, ತ್ಯಾಗ ಮತ್ತು ಹಕ್ಕುಗಳನ್ನು ಈ ದಿನ ಸ್ಮರಿಸಲಾಗುತ್ತದೆ. ಆದರೆ ಸಮಾಜದ ಬೆನ್ನೆಲುಬಾಗಿ ನಿಂತಿರುವ ಅಸಂಘಟಿತ ವಲಯದ ಕಾರ್ಮಿಕರ ಬದುಕಿನಲ್ಲಿ ಮಾತ್ರ ಇಂದಿಗೂ ಕತ್ತಲು ಆವರಿಸಿದೆ.

ಕಟ್ಟಡ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಕೃಷಿ ಕೂಲಿಗಳು, ಮನೆಗೆಲಸದವರು ಮತ್ತು ಗಾರ್ಮೆಂಟ್ಸ್ ನೌಕರರು ಹೀಗೆ ಅಸಂಘಟಿತ ವಲಯದ ಕಾರ್ಮಿಕರ ಸುರಿಸಿದ ಬೆವರಿನ ಹನಿಗಳಿಂದಲೇ ನಮ್ಮ ನಗರಗಳು ನಿರ್ಮಾಣವಾಗಿರುವುದು. ಆದರೆ ಈ ಕಾರ್ಮಿಕರ ಬೆವರ ಹನಿಗಳಿಗೆ ಸರಿಯಾದ ಬೆಲೆ ಮಾತ್ರ ಇಂದಿಗೂ ಸಿಗುತ್ತಿಲ್ಲ.

ಮೋದಿ ಚೇಲಾಗಳಾದರೇ ಕರ್ನಾಟಕದ ಬಿಜೆಪಿಗರು?

ಪಂಚರಾಜ್ಯಗಳ ಚುನಾವಣೆಯ ಅಬ್ಬರ ಅಡಗುತ್ತಿದ್ದಂತೆಯೇ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರಿಗೆ ನಿರೀಕ್ಷಿತವಾದರೂ ಅನಿರೀಕ್ಷಿತವೆಂಬಂತೆ ಬೆಲೆ ಏರಿಕೆಯ ಶಾಕ್ ನೀಡಿದೆ. ಮೇ ತಿಂಗಳ ಮೊದಲ ದಿನವೇ ಇಡೀ ದೇಶದ ಜನತೆ ಬೆಲೆ ಏರಿಕೆಯ ಬಿಸಿಯನ್ನು...

ಕನಿಷ್ಠ ವೇತನದ ಕೊರತೆ ಅಸಂಘಟಿತ ವಲಯದ ಅತಿದೊಡ್ಡ ದುರಂತ. ಬೆಲೆ ಏರಿಕೆ ಆಕಾಶಕ್ಕೆ ಏಣಿ ಇಟ್ಟು ಮೇಲೆ ಸಾಗುತ್ತಲೇ ಇದೆ. ಇಂತಹ ಕಾಲದಲ್ಲಿ ದಿನವಿಡೀ ದುಡಿದರೂ ಅಸಂಘಟಿತ ವಲಯದ ಕಾರ್ಮಿಕರ ಕೈಗೆ ಬರುವ ಕೂಲಿ ಅತ್ಯಲ್ಪ. ನಮ್ಮ ಅಸಂಘಟಿತ ವಲಯದ ಕಾರ್ಮಿಕರಿಗೆ ಸಿಗುವುದು ಒಂದು ಹೊತ್ತಿನ ದಿನಸಿ ಖರೀದಿಸುವಷ್ಟರಲ್ಲಿ ಮಿಂಚಿನಷ್ಟು ವೇಗದಲ್ಲಿ ಮಾಯವಾಗುವಷ್ಟೇ ಕೂಲಿ. ಈ ಕೂಲಿ ಒಂದು ಹೊತ್ತಿನ ಊಟಕ್ಕೆ ಮತ್ತು ಕುಟುಂಬದ ನಿರ್ವಹಣೆಗೂ ಸಾಕಾಗುತ್ತಿಲ್ಲ. ''ಇಂದು ದುಡಿದರೆ ಮಾತ್ರ ಇಂದು ಊಟ'' ಎನ್ನುವ ಸ್ಥಿತಿ ಕೋಟ್ಯಂತರ ಜನರದ್ದು. ಹೀಗಿರುವಾಗ ಆರೋಗ್ಯ, ಶಿಕ್ಷಣಕ್ಕಾಗಿ ಹಣ ಉಳಿತಾಯ ಎಂಬುದು ಈ ಕಾರ್ಮಿಕರಿಗೆ ಕನಸಿನ ಮಾತು.

ಸುರಕ್ಷತೆ ಇಲ್ಲದ ಬದುಕು ಅಸಂಘಟಿತ ಕಾರ್ಮಿಕರದ್ದು



ದೇಶ ಇಷ್ಟು ಮುಂದುವರೆದರೂ ಕಾರ್ಮಿಕರ ಮೇಲಿನ ಶೋಷಣೆ ಮುಗಿದಿಲ್ಲ. ಕಾರ್ಪೋರೇಟ್ ದೊರೆಗಳು ಬೆಳೆದಷ್ಟು ಅಸಂಘಟಿತ ವಲಯದ ಕಾರ್ಮಿಕರು ಇನ್ನಷ್ಟೂ ಶೋಷಣೆಗೆ ಒಳಗಾಗುತ್ತಲೇ ಇದ್ದಾರೆ. ಇಂದಿನ ಆಧುನಿಕ ಯುಗದಲ್ಲೂ ಶೋಷಣೆ ಬೇರೆ ಬೇರೆ ರೂಪದಲ್ಲಿ ಮುಂದುವರಿದಿದೆ. ನೇರವಾಗಿ ಜೀತ ಎಂದು ಹೇಳಲಾಗದಿದ್ದರೂ, ಇಂದಿಗೂ ಇರುವುದು ಪರೋಕ್ಷ ಜೀತ ಪದ್ಧತಿಯೇ.

ಯಾವುದೇ ವಿಮೆ ಇಲ್ಲದೆ, ಜೀವದ ಹಂಗು ತೊರೆದು ಅಪಾಯಕಾರಿ ಜಾಗಗಳಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯ ಸ್ಥಿತಿಗೆ ನಮ್ಮ ವ್ಯವಸ್ಥೆ ಈ ಕಾರ್ಮಿಕರನ್ನು ದೂಡಿದೆ. ಎಂಟು ಗಂಟೆಗಳ ಕೆಲಸದ ನಿಯಮ ಕೇವಲ ಕಾಗದದ ಮೇಲಿದೆ. ಅಸಂಘಟಿತ ವಲಯದಲ್ಲಿ ದುಡಿಮೆಗೆ ಮಿತಿ ಇಲ್ಲ, ಆದರೆ ಅದಕ್ಕೆ ತಕ್ಕ ಪ್ರತಿಫಲವೂ ಇಲ್ಲ. (ಇತರೆ ಕಾರ್ಮಿಕರ ಸ್ಥಿತಿಯೂ ಇದೆ! ಎಂಬುದು ಗಮನಾರ್ಹ). ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆಯೂ ಇಲ್ಲ. ನಿವೃತ್ತಿ ವೇತನ, ಆರೋಗ್ಯ ವಿಮೆ ಅಥವಾ ಉದ್ಯೋಗದ ಖಾತರಿ ಎಂಬುದು ಇಲ್ಲದೆ ಸದಾ ಅತಂತ್ರ ಸ್ಥಿತಿಯಲ್ಲಿ ಈ ಕಾರ್ಮಿಕರು ಇರುವಂತಾಗಿದೆ.

ಕೇವಲ ಒಂದು ದಿನದ ಆಚರಣೆಯಿಂದ ಕಾರ್ಮಿಕರ ಬದುಕು ಹಸನಾಗುವುದಿಲ್ಲ. ಆದರೆ ಈ ದಿನದ ನೆಪದಲ್ಲಾದರೂ ಕಾರ್ಮಿಕರ ಹಕ್ಕುಗಳನ್ನು ನೆನಪಿಸಿಕೊಳ್ಳುವುದು ಸ್ವಾಗತಾರ್ಹ. ಈ ಹೋರಾಟ ವರ್ಷಪೂರ್ತಿ ಮುಂದುವರೆಸುವ ಹಲವು ಕಾರ್ಮಿಕ ಸಂಘಟನೆಗಳು ನಮ್ಮಲ್ಲಿವೆ. ಇನ್ನುಳಿದಿರುವುದು ಸರ್ಕಾರಗಳ ಮೇಲೆ. ಬಂಡವಾಳಶಾಹಿಗಳೆಡೆ ವಾಲಿರುವ ಸರ್ಕಾರವು ಕಾರ್ಮಿಕರೆಡೆ ನೋಡಲು ಚುನಾವಣೆಗಳು ಬರಬೇಕಷ್ಟೆ. ಕಾರ್ಮಿಕರನ್ನು ಕೇವಲ ಯಂತ್ರಗಳಂತೆ ನೋಡದೆ, ಅವರನ್ನು ಘನತೆಯುಳ್ಳ ಮನುಷ್ಯರೆಂದು ಪರಿಗಣಿಸುವ ಮನೋಭಾವ ಸಮಾಜದಲ್ಲಿ ಬೆಳೆಯಬೇಕು.

ಒಟ್ಟಿನಲ್ಲಿ ಸುಡುವ ಬಿಸಿಲಿನಲ್ಲಿ ರಸ್ತೆ ನಿರ್ಮಾಣ ಮಾಡುವವರಿಗೆ ಇಂದಿಗೂ ನೆರಳಿಲ್ಲ. ಅರಮನೆಯಂತಹ ಕಟ್ಟಡ ಕಟ್ಟುವವರಿಗೆ ಸ್ವಂತ ಮನೆಯಿಲ್ಲ. ಇದು ಇಂದಿನ ವಿಪರ್ಯಾಸ. ಕಾರ್ಮಿಕ ದಿನಾಚರಣೆ ಕೇವಲ ರಜೆಯ ದಿನವಾಗದೆ, ಶೋಷಿತರ ಧ್ವನಿಯಾಗಲಿ. ಕಾರ್ಮಿಕರ ಕೈಗಳಿಗೆ ಶಕ್ತಿ ಸಿಕ್ಕಾಗ ಮಾತ್ರ ದೇಶದ ಪ್ರಗತಿ ಅರ್ಥಪೂರ್ಣ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR